ಜನಮನದ ದನಿ

# ಪ್ರಜೋದಯ

ಸಂಪಾದಕ : ಜೆ.ಆರ್. ಕೆಂಚೇಗೌಡ

08 ಜುಲೈ, 2026 ಬುಧವಾರ ಬೆಲೆ ₹ 2.00 ಸಂಪುಟ : 20 ಸಂಚಿಕೆ : 119 | ಪುಟ-4 | ಹಾಸನ | E-mail : prajodayahsn@gmail.com | RNI NO: KARKAN/2007/22629



ನಿರೀಕ್ಷೆಯಂತೆ ಭಾರತದ ಸ್ವದೇಶಿ ನಿರ್ಮಿತ ಸೂಪರ್ ಸಾನಿಕ್ ಬ್ರಹ್ಮೋಸ್ ಕ್ಷಿಪಣಿ ಖರೀದಿ ಒಪ್ಪಂದಕ್ಕೆ ಇಂಡೋನೇಷ್ಯಾ ಸಹಿ ಹಾಕಿದೆ.



ಶುದ್ಧ ಮತಪಟ್ಟಿ ಸಿದ್ಧಪಡಿಸಿದರೆ ತಪ್ಪೇನು ? » 2



ಹಾಸನಾಂಬ ದೇವಿ ದರ್ಶನ : ಸುರಕ್ಷಿತ ಕ್ರಮಕ್ಕೆ ಸಿದ್ಧತೆ ವಹಿಸಿ » 3



ಅವೈಜ್ಞಾನಿಕ ಕಾಮಗಾರಿ : ಪುರಸಭೆ ಅಧಿಕಾರಿಗಳ ವಿರುದ್ಧ ಪ್ರತಿಭಟನೆ » 4

# ವಯನಾಡಿನಲ್ಲಿ ಭೂಕುಸಿತ : ಐವರ ಸಾವು

## ಅವಶೇಷಗಳಡಿಯಲ್ಲಿ ಸಿಲುಕಿರುವವರ ಪತ್ತೆಗಾಗಿ ಶೋಧ

• ಪ್ರಜೋದಯ ವರದಿ

**ವಯನಾಡು:** ಮುಂಡಕ್ಕೈ-ಚೂರಲ್ಮಲಾ ದುರಂತ ಮಾಸುವ ಮುನ್ನವೇ ಕೇರಳದ ವಯನಾಡಿನಲ್ಲಿ ಮಂಗಳವಾರ ಮತ್ತೊಂದು ಭೂಕುಸಿತ ಸಂಭವಿಸಿದೆ. ದುರಂತದಲ್ಲಿ ಐವರು ಮೃತಪಟ್ಟು, ಹಲವರು ಅವಶೇಷಗಳ ಅಡಿಯಲ್ಲಿ ಸಿಲುಕಿರುವ ಶಂಕೆ ವ್ಯಕ್ತವಾಗಿದೆ.

ಮಲಪ್ಪುರಂ ಮತ್ತು ವಯನಾಡು ಜಿಲ್ಲೆಗಳನ್ನು ಸಂಪರ್ಕಿಸುವ ಅನಕ್ಕೊಂಪೊಯಿಲ್- ಮೆಪ್ಪಾಡಿ ಸುರಂಗ ಯೋಜನೆಯ ಕೆಲಸ ನಡೆಯುತ್ತಿರುವ ಮೀನಾಕ್ಷಿ ಸೇತುವೆಯ ಬಳಿ ಈ ದುರಂತ ಸಂಭವಿಸಿದೆ. ಕೇರಳ ಮುಖ್ಯಮಂತ್ರಿ ವಿ.ಡಿ.ಸತೀಶನ್ ಅವರು ದುರಂತ ಸ್ಥಳ ಪರಿಶೀಲಿಸಿ, ಮೀನಂಗಡಿಯ, ಕೋಝಿಕ್ಕೋಡ್‌ನ ರಕ್ಷಣಾ ತಂಡಗಳು ಸ್ಥಳಕ್ಕೆ ತೆರಳಿವೆ. ಸುರಂಗ ರಸ್ತೆಯ ಬಳಿ ಉಂಟಾದ ಭೂಕುಸಿತದಲ್ಲಿ ರಕ್ಷಣಾ ಕಾರ್ಯಾಚರಣೆ ವೇಗವಾಗಿ ನಡೆಯುತ್ತಿದೆ. ಮಾಹಿತಿ ಪ್ರಕಾರ ಐವರು ಸಾವನ್ನಪ್ಪಿದ್ದಾರೆ, ಇನ್ನೂ ಐವರು ಕಾಣೆಯಾಗಿದ್ದು, 7 ಮಂದಿಯನ್ನು ರಕ್ಷಣೆ



ಮಾಡಲಾಗಿದೆ ಎಂದು ತಿಳಿಸಿದರು.


ಸುರಂಗ ರಸ್ತೆ ನಿರ್ಮಾಣ ಪ್ರದೇಶದಿಂದ ಮಣ್ಣನ್ನು ತೆಗೆಯಲು ಗುತ್ತಿಗೆದಾರರಿಗೆ ಜೂನ್ 20 ರಂದೇ ಹೇಳಲಾಗಿತ್ತು. ವಿಪತ್ತು ನಿರ್ವಹಣಾ ಇಲಾಖೆ ಅಧ್ಯಕ್ಷರು ಮತ್ತು ಜಿಲ್ಲಾಧಿಕಾರಿ ಈ ಸಂಬಂಧ ಆದೇಶ ಹೊರಡಿಸಿದ್ದರು. ಲೋಕೋಪಯೋಗಿ ಇಲಾಖೆ ಸಚಿವರೂ ಗುತ್ತಿಗೆದಾರರಿಗೆ ತಾಕೀತು ಮಾಡಿದ್ದರು. ಆದರೆ, ಗುತ್ತಿಗೆದಾರರು ಆದೇಶ ಪಾಲಿಸಿಲ್ಲ. ಈ ಪರಿಣಾಮ ದುರಂತ ಸಂಭವಿಸಿದೆ. ಹಲವಾರು ಸಚಿವರು ಈ ಭೂಕುಸಿತವನ್ನು ಅಗೆದ ಮಣ್ಣಿನ ಅವೈಜ್ಞಾನಿಕ ಸುರಿಯುವಿಕೆಯಿಂದ ಉಂಟಾದ ಮಾನವ ನಿರ್ಮಿತ ವಿಪತ್ತು ಎಂದು ಹೇಳಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಕೃಷಿ ಸಚಿವ ಮತ್ತು ಕಲ್ಪೆಟ್ಟ ಶಾಸಕ ಸಿದ್ದಿಕ್ ಅವರು, ವಿಮ್ಸ್ ಆಸ್ಪತ್ರೆಗೆ ದಾಖಲಾದ ಗಾಯಾಳುಗಳ ಸ್ಥಿತಿ ಸ್ಥಿರವಾಗಿದ್ದು, ನೈಸರ್ಗಿಕ ಭೂಕುಸಿತವಲ್ಲ. ಇದು ಮಾನವ ನಿರ್ಮಿತ. ಅಗೆದ ಮಣ್ಣನ್ನು ಅವೈಜ್ಞಾನಿಕವಾಗಿ ಸುರಿದಿದ್ದರಿಂದ ಅವಘಡ ಸಂಭವಿಸಿದೆ. ಅಗ್ನಿಶಾಮಕ ಮತ್ತು ರಕ್ಷಣಾ ಸೇವೆಗಳ ಸಿಬ್ಬಂದಿ ಈಗಾಗಲೇ ರಕ್ಷಣಾ ಕಾರ್ಯಾಚರಣೆಯನ್ನು ಪ್ರಾರಂಭಿಸಿದ್ದಾರೆಂದರು.

ದುರಂತ ಸಂಭವಿಸಿದ ತಕ್ಷಣ, ಸ್ಥಳೀಯ ನಿವಾಸಿಗಳು ಸಮಯಪ್ರಜ್ಞೆ ಮೆರೆದಿದ್ದಾರೆ. ಅವಶೇಷಗಳ ಅಡಿಯಲ್ಲಿ ಸಿಲುಕಿದ್ದ ಮೂವರು ಸುರಂಗ ಯೋಜನೆಯ ಕಾರ್ಮಿಕರನ್ನು ರಕ್ಷಿಸಿದ್ದಾರೆ. ಅವರು ಅಲ್ಲೇ ಇದ್ದ ವಸತಿ ಗೃಹದಲ್ಲಿ ತಂಗಿದ್ದರು ಎನ್ನಲಾಗಿದೆ.

**ಮನೆ, ವಾಹನಗಳು ಜಖಂ**

ಗುಡ್ಡ ಕುಸಿದ ರಭಸಕ್ಕೆ ಆ ಪ್ರದೇಶದಲ್ಲಿದ್ದ ಕೆಲವು ವಸತಿ ಮನೆಗಳು, ಹೋಂಸ್ಟೇಗಳು ಸಂಪೂರ್ಣವಾಗಿ ಹಾನಿಗೊಳಗಾಗಿವೆ. ಸುರಂಗ ಯೋಜನೆಯ ಕೆಲಸಕ್ಕಾಗಿ ಬಳಸಲಾಗುತ್ತಿದ್ದ ಹಲವು ಜೆಸಿಬಿ, ಟ್ರಕ್ ಹಾಗು ಇತರೆ ವಾಹನಗಳು ಮಣ್ಣಿನ ಅಡಿಯಲ್ಲಿ



ಸಿಲುಕಿ ನಜ್ಜುಗುಜ್ಜಾಗಿವೆ.

ಕಳೆದ 24 ಗಂಟೆಗಳಲ್ಲಿ ಸುಮಾರು 265 ಮಿ.ಮೀ. ನಷ್ಟು ಮಳೆಯಾಗಿದೆ. ಮಳೆಯ ತೀವ್ರತೆಗೆ ಮೀನಾಕ್ಷಿ ಸೇತುವೆಯ ಬಳಿ ಇರುವ ಗುಡ್ಡ ಕುಸಿದು ಬಿದ್ದಿದೆ. ಭಾರೀ ಮಳೆಯ ಮುನ್ಸೂಚನೆ ಇದ್ದಿದ್ದರಿಂದ ಸೋಮವಾರದಿಂದಲೇ ಸುರಂಗ ಯೋಜನೆಯ ಕೆಲಸಗಳನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಲಾಗಿತ್ತು.

# ಧಾರಾಕಾರ ಮಳೆಗೆ ಗುಡ್ಡ ಕುಸಿಯುವ ಭೀತಿ

• ಪ್ರಜೋದಯ ವರದಿ

**ಸಕಲೇಶಪುರ :** ಪಶ್ಚಿಮಘಟ್ಟ ಭಾಗದಲ್ಲಿ ಮಳೆ ಅಬ್ಬರ ಮುಂದುವರಿದಿರುವ ನಡುವೆ ಶಿರಾಡಿಘಾಟ್ ರಸ್ತೆಯ ಕಪ್ಪಳ್ಳಿ ಸಮೀಪ ರಾಷ್ಟ್ರೀಯ ಹೆದ್ದಾರಿ-75ರಲ್ಲಿ ಗುಡ್ಡ ಕುಸಿತದ ಆತಂಕ ಎದುರಾಗಿದೆ. ನಿರಂತರ ಮಳೆಯಿಂದ ಗುಡ್ಡದ ಮಣ್ಣು ಜರುಗುತ್ತಿದ್ದು, ವಾಹನ ಸವಾರರಲ್ಲಿ ಭಯ ಮೂಡಿಸಿದೆ.

ಬೆಂಗಳೂರು-ಮಂಗಳೂರು ರಾಷ್ಟ್ರೀಯ ಹೆದ್ದಾರಿಯ ಚತುಷ್ಪಥ ರಸ್ತೆ ನಿರ್ಮಾಣ ಕಾಮಗಾರಿಯ ವೇಳೆ ಎರಡೂ ಬದಿಗಳಲ್ಲಿ ನೂರಾರು ಅಡಿ ಎತ್ತರದ ಗುಡ್ಡಗಳನ್ನು ಕತ್ತರಿಸಿ ರಸ್ತೆ ನಿರ್ಮಿಸಲಾಗಿದೆ. ಮಳೆ ನೀರು ನೇರವಾಗಿ ಗುಡ್ಡದ ಇಳಿಜಾರಿನ ಮೇಲೆ ಹರಿಯುತ್ತಿರುವ ಪರಿಣಾಮ ಮಣ್ಣು ಹಾಗು ಗಿಡಗಂಟಿಗಳು ರಸ್ತೆಯ ಒಂದು ಬದಿಗೆ ಕುಸಿಯುತ್ತಿವೆ. ಸ್ಥಳದಲ್ಲೇ ಸಣ್ಣ ಪ್ರಮಾಣದ ಮಣ್ಣು ಕುಸಿತ ಈಗಾಗಲೇ ಕಂಡು ಬಂದಿದ್ದು, ಮಳೆ ಇದೇ ರೀತಿ ಮುಂದುವರಿದರೆ ದೊಡ್ಡ ಪ್ರಮಾಣದಲ್ಲಿ ಭೂಕುಸಿತ ಸಂಭವಿಸುವ ಸಾಧ್ಯತೆ ಇದೆ ಎಂಬ ಆತಂಕ ಸ್ಥಳೀಯರು ವ್ಯಕ್ತಪಡಿಸಿದ್ದಾರೆ.



### ಅಪಾಯಕಾರಿ ಸ್ಥಳಗಳಲ್ಲಿ ಪ್ರವೇಶ ನಿಷೇಧ

ಸಕಲೇಶಪುರ: ನಿರಂತರ ಮಳೆಯಿಂದ ತಾಲ್ಲೂಕಿನ ಹಲವು ಪ್ರದೇಶಗಳಲ್ಲಿ ಭೂಕುಸಿತ, ರಸ್ತೆ ಕುಸಿತ, ಮರಗಳ ಉರುಳುವಿಕೆ ಸೇರಿ ಅನಾಹುತಗಳು ಸಂಭವಿಸುವ ಸಾಧ್ಯತೆ ಇದ್ದು, ಮುನ್ನೆಚ್ಚರಿಕೆ ಕ್ರಮವಾಗಿ ಅಪಾಯಕಾರಿ ಸ್ಥಳಗಳಲ್ಲಿ ಸಾರ್ವಜನಿಕರ ಪ್ರವೇಶ ನಿಷೇಧಿಸಿ ತಹಶೀಲ್ದಾರ್ ಸುಪ್ರಿತಾ ಆದೇಶಿಸಿದ್ದಾರೆ.

ತಾಲ್ಲೂಕು ವ್ಯಾಪ್ತಿಯ ಎಲ್ಲಾ ಜಲಪಾತ, ನದಿ, ಹಳ್ಳ, ಜಲಾಶಯ, ಗುಡ್ಡ ಪ್ರದೇಶ, ಭೂಕುಸಿತ ಸಂಭವಿಸುವ ಪ್ರದೇಶಗಳಲ್ಲಿ ಮುಂದಿನ ಆದೇಶದ ವರೆಗೆ ಸಾರ್ವಜನಿಕ ಪ್ರವೇಶ ನಿರ್ಬಂಧಿಸಿದೆ. ಈ ಆದೇಶವನ್ನು ಉಲ್ಲಂಘಿಸುವ ವ್ಯಕ್ತಿಗಳ ವಿರುದ್ಧ ಪ್ರಕೃತಿ ವಿಕೋಪ ನಿರ್ವಹಣಾ ಕಾಯ್ದೆ 2005, ಭಾರತೀಯ ನಾಗರಿಕ ಸಂರಕ್ಷಣಾ ಸಂಹಿತೆ 2023ರ ಅಡಿಯಲ್ಲಿ ಕಠಿಣ ಕ್ರಮ ಜರುಗಿಸಲಾಗುವುದು.

ಗುಡ್ಡ ಕುಸಿತ ತಡೆಯುವ ಉದ್ದೇಶದಿಂದ ರಸ್ತೆಯುದ್ದಕ್ಕೂ ತಡೆಗೋಡೆ ನಿರ್ಮಾಣ ಮಾಡಿದ್ದರೂ ಕೂಡ ಮಣ್ಣು ಕುಸಿತ್ತಲೇ ಇದೆ. ಕಳೆದ ವರ್ಷವೂ ಆನೆಮಹಲ್, ದೋಣಿಗಲ್, ಮಾರನಹಳ್ಳಿ, ಕಪ್ಪಳ್ಳಿ ಸೇರಿ ಹಲವು ಕಡೆಗಳಲ್ಲಿ ಗುಡ್ಡ ಕುಸಿತವಾಗಿತ್ತು. ಅದನ್ನು ತಡೆಯುವ ಉದ್ದೇಶದಿಂದ ಎತ್ತರದ ತಡೆಗೋಡೆ ನಿರ್ಮಾಣ ಮಾಡಿದ್ದರೂ ಮಳೆಯ ನೀರಿ ನೊಂದಿಗೆ ಮಣ್ಣು ತಡೆಗೋಡೆಯಿಂದ ಕೊಚ್ಚಿ ಬರುತ್ತಿದೆ. ಮಳೆಯ ಅರ್ಭಟ ಇನ್ನಷ್ಟು ಜೋರಾದರೆ ಸಂಚಾರಕ್ಕೂ ಅಡ್ಡಿಯಾಗುವ ಆತಂಕ ಎದುರಾಗಿದೆ.

## ಆಲೂರಿನಲ್ಲಿಂದು ನಾಡಪ್ರಭು ಕೆಂಪೇಗೌಡರ ಜಯಂತಿ

• ಪ್ರಜೋದಯ ವರದಿ

**ಆಲೂರು:** ಪಟ್ಟಣದ ಒಕ್ಕಲಿಗರ ಸಮುದಾಯ ಭವನದಲ್ಲಿ ಜು. 8ರಂದು ಬುಧವಾರ ಬೆಳಿಗ್ಗೆ 11 ಗಂಟೆಗೆ ನಾಡಪ್ರಭು ಕೆಂಪೇಗೌಡರ ಜಯಂತಿ ಹಮ್ಮಿಕೊಳ್ಳಲಾಗಿದೆ.

ವೀರಶೈವ ಸಮುದಾಯ ಭವನದಿಂದ ಒಕ್ಕಲಿಗರ ಸಮುದಾಯ ಭವನದವರೆಗೆ ಮೆರವಣಿಗೆ ನಡೆಯಲಿದ್ದು, ಆದಿಚುಂಚನಗಿರಿ ಹಾಸನ ಶಾಖಾ ಮಠದ ಶ್ರೀ ಶಂಭುನಾಥ ಸ್ವಾಮೀಜಿ ಅವರು ಸಾನ್ನಿಧ್ಯ ವಹಿಸುವರು. ಜಿಲ್ಲಾ ಒಕ್ಕಲಿಗರ ಸಂಘದ ಅಧ್ಯಕ್ಷ ಜಿ.ಎಲ್.ಮುದ್ದೇಗೌಡ, ಶಾಸಕ ಸಿ.ಎನ್.ಬಾಲಕೃಷ್ಣ, ಸಂಸದ ಶ್ರೇಯಸ್ ಪಟೇಲ್, ಮಾಜಿ ಶಾಸಕ ಪ್ರೀತಮ್ ಜೆ. ಗೌಡ, ಶಾಸಕ ಸಿಮೆಂಟ್ ಮಂಜು, ವಿಧಾನ ಪರಿಷತ್ ಸದಸ್ಯ ಸೂರಜ್ ರೇವಣ್ಣ ಭಾಗವಹಿಸಲಿದ್ದಾರೆ.

ರಾಜ್ಯ ಒಕ್ಕಲಿಗರ ಸಂಘದ ನಿರ್ದೇಶಕರಾದ ಎಸ್.ಎಸ್.ರಘುಗೌಡ, ಬಿ.ಪಿ.ಮಂಜೇಗೌಡ, ಜಿಲ್ಲಾ ಒಕ್ಕಲಿಗರ ಸಂಘದ ನಿರ್ದೇಶಕ ಆರ್.ಟಿ.ದ್ಯಾವೇಗೌಡ, ಸಕಲೇಶಪುರ ತಾಲ್ಲೂಕು ಒಕ್ಕಲಿಗರ ಸಂಘದ ಅಧ್ಯಕ್ಷ ಹೆಚ್.ಎಂ.ವಿಶ್ವನಾಥ್, ಆಲೂರು ಒಕ್ಕಲಿಗರ ಸಂಘದ ಉಪಾಧ್ಯಕ್ಷ ಕೆ.ಎಸ್. ಮಂಜೇಗೌಡ ಹಾಗು ರಾಜೇಶ್ ಗೌಡ ಉಪಸ್ಥಿತಿ ವಹಿಸುವರು.

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಡಾ. ಎಚ್.ಎಲ್.ಮಲ್ಲೇಶಗೌಡ ಉಪನ್ಯಾಸ ನೀಡುವರು. ಆಲೂರು ಒಕ್ಕಲಿಗರ ಸಂಘದ ಅಧ್ಯಕ್ಷ ಹೆಚ್.ಪಿ.ಮೋಹನ್ ಅವರು ಅಧ್ಯಕ್ಷತೆ ವಹಿಸಲಿದ್ದಾರೆ.

# ಗಾಳಿ-ಮಳೆ ಅಬ್ಬರ : ಕತ್ತಲಲ್ಲಿ ಮುಳುಗಿದ ಮಲೆನಾಡು

• ಪ್ರಜೋದಯ ವರದಿ

**ಹಾಸನ :** ವಾರದಿಂದ ಬಿರುಗಾಳಿ ಸಹಿತ ಸುರಿಯುತ್ತಿರುವ ಮಳೆಗೆ ಮಲೆನಾಡು ಜನಜೀವನ ತತ್ತರಗೊಂಡಿದೆ. ಮರಗಳು ಧರೆಗುರುಳಿದ್ದು, ವಿದ್ಯುತ್ ಕಂಬಗಳಿಗೂ ಹಾನಿಯಾಗಿ ಮಲೆನಾಡು ಕತ್ತಲಲ್ಲಿ ಮುಳುಗಿದೆ.

ಸಕಲೇಶಪುರ, ಬೇಲೂರು, ಆಲೂರು, ಅರಕಲಗೂಡು ಹಾಗು ಹಾಸನ ತಾಲ್ಲೂಕಿನ ಹಲವು ಪ್ರದೇಶಗಳಲ್ಲಿ ವರುಣನ ಅಬ್ಬರ ಮುಂದುವರಿದಿದೆ. ಸಕಲೇಶಪುರ ತಾಲ್ಲೂಕಿನಲ್ಲಿ ಹಲವು ಮನೆಗಳಿಗೆ ಹಾನಿಯಾಗಿದ್ದು, ಹಲವೆಡೆ ಮರಗಳು ಧರೆಗುರುಳಿವೆ. ಸುರಕ್ಷತಾ ದೃಷ್ಟಿಯಿಂದ ಗಾಳಿಗೆ ಉರುಳುವ ಸ್ಥಿತಿಯಲ್ಲಿದ್ದ ಹಲವು ಮರಗಳನ್ನು ಅರಣ್ಯ ಇಲಾಖೆ ಸಿಬ್ಬಂದಿ ಮುಂಜಾಗ್ರತಾ ಕ್ರಮವಾಗಿ ತೆರವುಗೊಳಿಸಿದ್ದಾರೆ. ಸಕಲೇಶಪುರ ವಿಭಾಗದಲ್ಲಿ ಒಟ್ಟು 43 ವಿದ್ಯುತ್ ಕಂಬಗಳು ಹಾನಿಗೊಳಗಾಗಿವೆ ಎಂದು ತಹಶೀಲ್ದಾರ್ ತಿಳಿಸಿದ್ದಾರೆ.

ಸಕಲೇಶಪುರ ತಾಲ್ಲೂಕಿನ ಹಲವು ಗ್ರಾಮಗಳಲ್ಲಿ ನಾಲ್ಕು ದಿನಗಳಿಂದ ವಿದ್ಯುತ್ ಸಂಪರ್ಕ ಕಡಿತಗೊಂಡಿದೆ.



ಬಿರುಗಾಳಿಯಿಂದ ವಿದ್ಯುತ್ ತಂತಿಗಳ ಮೇಲೆ ಮರಗಳು ಬಿದ್ದಿರುವುದರಿಂದ ವಿದ್ಯುತ್ ಪೂರೈಕೆ ಸ್ಥಗಿತಗೊಂಡಿದೆ. ಒಂದು ಕಡೆ ದುರಸ್ತಿ ಕಾರ್ಯ ಪೂರ್ಣಗೊಳ್ಳುತ್ತಿದ್ದಂತೆ ಮತ್ತೊಂದು ಕಡೆ ಗಾಳಿ-ಮಳೆಗೆ ವಿದ್ಯುತ್ ಕಂಬಗಳು ಉರುಳುತ್ತಿರುವುದರಿಂದ ಪರಿಸ್ಥಿತಿ ನಿಯಂತ್ರಣಕ್ಕೆ ತರುವುದೇ ಸವಾಲಾಗಿದೆ. ಮಳೆಯನ್ನು ಲೆಕ್ಕಿಸದೆ ಸೆಸ್ಕಾಂ ಸಿಬ್ಬಂದಿ ನಿರಂತರವಾಗಿ ದುರಸ್ತಿ ಕಾರ್ಯದಲ್ಲಿ ತೊಡಗಿದ್ದು, ಮರಗಳನ್ನು ತೆರವುಗೊಳಿಸಿ ವಿದ್ಯುತ್ ಪೂರೈಕೆ ಪುನಃ ಸ್ಥಾಪಿಸಲು ಶ್ರಮಿಸುತ್ತಿದ್ದಾರೆ.

ಮಂಗಳವಾರ ಬೇಲೂರು ಹಾಗು ಸಕಲೇಶಪುರ ತಾಲ್ಲೂಕಿನ ಅಂಗನವಾಡಿ ಕೇಂದ್ರಗಳು, ಪ್ರಾಥಮಿಕ ಹಾಗು ಪ್ರೌಢಶಾಲೆಗಳಿಗೆ ಮಂಗಳವಾರ ರಜೆ ಘೋಷಿಸಲಾಗಿತ್ತು.

ಸಕಲೇಶಪುರ ತಾಲ್ಲೂಕಿನ ಹೆತ್ತೂರು, ಯಸಳೂರು ಹೋಬಳಿಯಲ್ಲಿ ಸೋಮವಾರ ತಡರಾತ್ರಿ, ಬಳಿಕವೂ ಗಾಳಿಯೊಂದಿಗೆ ಆರ್ಭಟಿಸಿದ ಮಳೆಯು, ಮಂಗಳವಾರ ಇಡೀ ದಿನ ಸುರಿದ ಪರಿಣಾಮ ಹಳ್ಳ, ಕೊಳ್ಳಗಳು, ನದಿ, ತೊರೆಗಳು ತುಂಬಿ ಹರಿಯುವುದಕ್ಕೆ ಆರಂಭ ಮಾಡಿವೆ.

ಬೆಳಿಗ್ಗೆ 7ರಿಂದ 8ರವರೆಗೂ ಜನರು ಮನೆಯಿಂದ ಹೊರಗೆ ಬರದಷ್ಟು ಪ್ರಮಾಣದಲ್ಲಿ ಮಳೆ ಸುರಿಯಿತು.

### ವಾಹನ ಸಂಚಾರಕ್ಕೆ ಅಡ್ಡಿ

ಸಕಲೇಶಪುರ ತಾಲ್ಲೂಕಿನ ಚಿಕ್ಕಂದೂರು ಗ್ರಾಮದ ಸಮೀಪ ಭಾರೀ ಗಾಳಿ-ಮಳೆಗೆ ಬೃಹತ್ ಗಾತ್ರದ ಮರ ರಸ್ತೆ ಮೇಲೆ ಉರುಳಿದ ಪರಿಣಾಮ ಕೆಲಕಾಲ ವಾಹನ ಸಂಚಾರಕ್ಕೆ ಅಡಚಣೆ ಉಂಟಾಯಿತು. ಉಚ್ಚಂಗಿ, ಯಸಳೂರು ಹಾಗು ಕೊಡ್ಲಿಪೇಟೆಯನ್ನು ಸಂಪರ್ಕಿಸುವ ಮುಖ್ಯ ರಸ್ತೆಗೆ ಮರ ಅಡ್ಡಲಾಗಿ ಬಿದ್ದ ಪರಿಣಾಮ ವಾಹನಗಳ ಸಂಚಾರ ಸ್ಥಗಿತ ಗೊಂಡಿತು. ಘಟನೆ ನಡೆದ ವೇಳೆ ರಸ್ತೆಯಲ್ಲಿ ವಾಹನಗಳ ಸಂಚಾರ ವಿರಳವಾಗಿದ್ದರಿಂದ ಸಂಭವಿಸಬಹುದಾಗಿದ್ದ ದೊಡ್ಡ ಅನಾಹುತ ತಪ್ಪಿದಂತಾಗಿದೆ. ಮರ ರಸ್ತೆ ಮೇಲೆ ಉರುಳಿರುವ ಬಗ್ಗೆ ಸ್ಥಳೀಯರು ತಕ್ಷಣ ಅರಣ್ಯ ಇಲಾಖೆಯ ಅಧಿಕಾರಿಗಳಿಗೆ ಮಾಹಿತಿ ನೀಡಿದ್ದು, ಮರ ತೆರವುಗೊಳಿಸಿ ಸಂಚಾರಕ್ಕೆ ಅವಕಾಶ ಮಾಡಿಕೊಡಲಾಯಿತು.


### ಮರ ಧರೆಗುರುಳಿ ಸಂಚಾರ ಸ್ಥಗಿತ

ಬೇಲೂರು ತಾಲ್ಲೂಕಿನ ಅರೇಹಳ್ಳಿ ಹಾಗು ಬಿಕ್ಕೋಡು ಹೋಬಳಿ ವ್ಯಾಪ್ತಿಯಲ್ಲಿ ನಿರಂತರವಾಗಿ ಮಳೆ ಸುರಿಯುತ್ತಿದ್ದು, ಗಾಳಿಯ ರಭಸಕ್ಕೆ ರಸ್ತೆಗಳ ಮೇಲೆ ಬೃಹತ್ ಮರಗಳು ಉರುಳಿ ಬಿದ್ದ ಪರಿಣಾಮ ಕೆಲವೆಡೆ ಸಂಚಾರ ಸ್ಥಗಿತಗೊಂಡ ಪರಿಣಾಮ ವಾಹನ ಸವಾರರಿಗೆ ತೊಂದರೆ ಉಂಟಾಯಿತು. ಸ್ಥಳೀಯರು ಮರದ ಕೊಂಬೆಗಳನ್ನು ತೆರವುಗೊಳಿಸಿದರು.

ನಿರೀಕ್ಷೆಗೂ ಮೀರಿ ಮಳೆಯಾಯಿತು. ಹೆತ್ತೂರು, ಬಿಸ್ಲೆ, ಬಾಳೆಹಳ್ಳ, ಹೊಂಗಡಹಳ್ಳ, ತಂಬಲಗೇರಿ, ಮಾಗೇರಿ, ವನಗೂರು, ಕಡ್ರಹಳ್ಳಿ, ಹೊಸಹಳ್ಳಿ, ಉಚ್ಚಂಗಿ, ನಡನಳ್ಳಿ, ಕೊಂತನಮನೆ ಸೇರಿ ಹಲವು ಭಾಗಗಳಲ್ಲಿ ಮಳೆಯ ಪ್ರಮಾಣ ಹೆಚ್ಚಾಗಿದೆ. ಹೊಂಗಡಹಳ್ಳ ಗ್ರಾಮ ಪಂಚಾಯಿತಿ ವ್ಯಾಪ್ತಿಯ ದುದ್ದವಳ್ಳಿ ಗ್ರಾಮದ ಬಾಲಕೃಷ್ಣ ಎಂಬುವವರ ಮನೆ ಮೇಲೆ ಮರ ಬಿದ್ದು ಹಾನಿಯಾಗಿದೆ.ಸಿಂಕೇರಿ ಗ್ರಾಮದ ಮೋಹನ್ ಎಂಬುವರ ಮನೆ ಮೇಲೆ ಮರ ಬಿದ್ದು ಛಾವಣಿ ಹಾನಿಯಾಗಿದೆ.

## ಹೇಮಾವತಿ ಜಲಾಶಯಕ್ಕೆ 8,901 ಕ್ಯೂಸೆಕ್ ಒಳಹರಿವು

- ಅಣೆಕಟ್ಟೆಗಳಲ್ಲಿ ನೀರಿನ ಮಟ್ಟ ಏರಿಕೆ
- ಯಗಚಿ ಭರ್ತಿಯಾಗಲು 4.65 ಅಡಿ ಬಾಕಿ



• ಪ್ರಜೋದಯ ವರದಿ

**ಹಾಸನ:** ಮಲೆನಾಡು ಭಾಗದಲ್ಲಿ ಮುಂಗಾರು ಮಳೆಯ ಆರ್ಭಟ ಮುಂದುವರೆದಿರುವುದರಿಂದ ಹೇಮಾವತಿ ಜಲಾಶಯದಲ್ಲಿ ನೀರಿನ ಮಟ್ಟ ಏರಿಕೆಯಾಗಿದೆ.

ಜಿಲ್ಲೆಯ ಮೂರು ಜಲಾಶಯಗಳಿಗೆ ಜೀವಕಳೆ ಬಂದಿದೆ. ಸಕಲೇಶಪುರ, ಆಲೂರು, ಬೇಲೂರು ಸೇರಿ ಪಶ್ಚಿಮಘಟ್ಟ ಪ್ರದೇಶದಲ್ಲಿ ಸುರಿಯುತ್ತಿರುವ ಉತ್ತಮ ಮಳೆಯ ಪರಿಣಾಮ ಹೇಮಾವತಿ, ಯಗಚಿ ಹಾಗು ವಾಟೆಹೊಳೆ ಜಲಾಶಯಗಳಿಗೆ ಒಳಹರಿವಿನ ಪ್ರಮಾಣ ಹೆಚ್ಚಾಗಿದ್ದು, ನೀರಿನ ಸಂಗ್ರಹವೂ ದಿನದಿಂದ ದಿನಕ್ಕೆ ಏರಿಕೆಯಾಗುತ್ತಿದೆ.

ಹೇಮಾವತಿ ಜಲಾಶಯಕ್ಕೆ ಮಂಗಳವಾರ ಬೆಳಿಗ್ಗೆ 8,901 ಕ್ಯೂಸೆಕ್ ಒಳಹರಿವು ಬರುತ್ತಿದ್ದು, 300 ಕ್ಯೂಸೆಕ್ ನೀರನ್ನು ಹೊರಬಿಡಲಾಗುತ್ತಿದೆ. ಜಲಾಶಯದ ಗರಿಷ್ಠ ನೀರಿನ ಮಟ್ಟ 2922 ಅಡಿ ಆಗಿದ್ದು, ಪ್ರಸ್ತುತ 2895.91 ಅಡಿ ನೀರು ಸಂಗ್ರಹವಾಗಿದೆ. ಒಟ್ಟು 37.103 ಟಿಎಂಸಿ ನೀರು ಸಂಗ್ರಹ ಸಾಮರ್ಥ್ಯ ಹೊಂದಿರುವ ಜಲಾಶಯದಲ್ಲಿ ಈಗ 17.37 ಟಿಎಂಸಿ ನೀರು ಲಭ್ಯವಿದೆ. ಕಳೆದ ವರ್ಷ ಇದೇ ದಿನ 34 ಟಿಎಂಸಿಯಷ್ಟು ನೀರು ಸಂಗ್ರಹವಾಗಿತ್ತು.

ಬೇಲೂರಿನ ಯಗಚಿ ಜಲಾಶಯವೂ ಭರ್ತಿಯಾಗುವ ಹಂತದತ್ತ ಸಾಗುತ್ತಿದೆ. ಗರಿಷ್ಠ 3164.90 ಅಡಿ ಮಟ್ಟ ಹೊಂದಿರುವ ಜಲಾಶಯದಲ್ಲಿ ಈಗ 3160.25 ಅಡಿ ನೀರು ಸಂಗ್ರಹವಾಗಿದ್ದು, ಪೂರ್ಣ ಭರ್ತಿಯಾಗಲು ಇನ್ನೂ ಸುಮಾರು 4.65 ಅಡಿ ನೀರು ಮಾತ್ರ ಬೇಕಾಗಿದೆ. 3.603 ಟಿಎಂಸಿ ಸಾಮರ್ಥ್ಯದ ಜಲಾಶಯದಲ್ಲಿ 2.802 ಟಿಎಂಸಿ ನೀರು ಸಂಗ್ರಹವಾಗಿದ್ದು, 242 ಕ್ಯೂಸೆಕ್ ನೀರು ಹರಿದು ಬರುತ್ತಿದೆ. ಜಲಾಶಯದಿಂದ 10 ಕ್ಯೂಸೆಕ್ ನೀರನ್ನು ಹೊರಬಿಡಲಾಗುತ್ತಿದೆ.

ಆಲೂರು ತಾಲ್ಲೂಕಿನ ವಾಟೆಹೊಳೆ ಜಲಾಶಯಕ್ಕೂ ಒಳಹರಿವಿನ ಪ್ರಮಾಣ ಹೆಚ್ಚಾಗಿದೆ. 3169.61 ಅಡಿ ಗರಿಷ್ಠ ಮಟ್ಟ ಹೊಂದಿರುವ ಜಲಾಶಯದಲ್ಲಿ ಪ್ರಸ್ತುತ 3158.95 ಅಡಿ ನೀರು ದಾಖಲಾಗಿದೆ. 1.51 ಟಿಎಂಸಿ ಸಾಮರ್ಥ್ಯದ ಜಲಾಶಯದಲ್ಲಿ 0.949 ಟಿಎಂಸಿ ನೀರು ಸಂಗ್ರಹವಾಗಿದ್ದು, 416.03 ಕ್ಯೂಸೆಕ್ ನೀರು ಒಳಹರಿವಾಗಿ ಬರುತ್ತಿದೆ. ಜಲಾಶಯದಿಂದ 10 ಕ್ಯೂಸೆಕ್ ನೀರನ್ನು ಹೊರಬಿಡಲಾಗುತ್ತಿದೆ.

ನಿರಂತರವಾಗಿ ಮಳೆ ಸುರಿಯುತ್ತಿರುವುದರಿಂದ ಮುಂದಿನ ದಿನಗಳಲ್ಲಿ ಜಲಾಶಯಗಳ ನೀರಿನ ಮಟ್ಟ ಮತ್ತಷ್ಟು ಏರಿಕೆಯಾಗುವ ನಿರೀಕ್ಷೆ ವ್ಯಕ್ತವಾಗಿದೆ. ರೈತರು ಹಾಗು ಕುಡಿಯುವ ನೀರಿನ ಅವಲಂಬಿತ ಪ್ರದೇಶಗಳಲ್ಲಿ ಆಶಾಭಾವನೆ ಮೂಡಿದೆ.

# ಅಧಿಕಾರಕ್ಕಾಗಿ ಸಂವಿಧಾನ ಬದಿಗಿಟ್ಟಿದ್ದು ಕಾಂಗ್ರೆಸ್

## ಬಿಜೆಪಿಯಿಂದ ತುರ್ತು ಪರಿಸ್ಥಿತಿಯ ಕರಾಳ ದಿನಾಚರಣೆಯಲ್ಲಿ ಶಾಸಕ ಸಿಮೆಂಟ್ ಮಂಜು ಟೀಕೆ

• ಪ್ರಜೋದಯ ವರದಿ

**ಹಾಸನ:** ಭಾರತದ ಸಂವಿಧಾನವನ್ನು ಬದಿಗಿಟ್ಟು ಅಧಿಕಾರಕ್ಕಾಗಿ ಕಾಂಗ್ರೆಸ್ ಹೇಗೆ ನಡೆದುಕೊಂಡಿದೆ ಎಂಬುದಕ್ಕೆ ದೇಶದ ಮೇಲೆ ತುರ್ತು ಪರಿಸ್ಥಿತಿ ಹೇರಿಕೆಗಿಂತ ಮತ್ತೊಂದು ಉದಾಹರಣೆ ಬೇಕಿಲ್ಲವೆಂದು ಶಾಸಕ ಸಿಮೆಂಟ್ ಮಂಜು ಅವರು ಹೇಳಿದರು.

ನಗರದ ಖಾಸಗಿ ಹೋಟೆಲ್ ಸಭಾಂಗಣದಲ್ಲಿ ಮಂಗಳವಾರ ಬಿಜೆಪಿ ಹಮ್ಮಿಕೊಂಡಿದ್ದ 1975ರ



ತುರ್ತು ಪರಿಸ್ಥಿತಿ 51ನೇ ವರ್ಷದ ಕರಾಳ ದಿನಗಳು, ಭಾರತ ಸಂವಿಧಾನದ ಮೌಲ್ಯಗಳನ್ನು ಬಲಪಡಿಸಲು ಸಂವಿಧಾನ ಹತ್ಯಾ ದಿವಸ್ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ತುರ್ತು ಪರಿಸ್ಥಿತಿ ವಿರುದ್ಧ ಸ್ವಯಂ ಸೇವಕರು ಹೋರಾಟ ನಡೆಸಿದ ದಿನಗಳಲ್ಲಿ ಬಿಜೆಪಿ ಯಾವ ಹಂತದಲ್ಲೂ ಇರಲಿಲ್ಲ. ಸ್ವಯಂ ಸೇವಕರ ಹೋರಾಟ ಫಲವಾಗಿ ಬಿಜೆಪಿ ಇಂದು ದೇಶದ

» ನಾಲ್ಕನೇ ಪುಟದಲ್ಲಿ

## ಮಾಜಿ ಶಾಸಕ ಹೆಚ್.ಎಸ್.ಪುಟ್ಟರಂಗನಾಥ್ ನಿಧನ

• ಪ್ರಜೋದಯ ವರದಿ



**ಬೇಲೂರು :** ಕ್ಷೇತ್ರದ ಮಾಜಿ ಶಾಸಕ ಹೆಚ್.ಎಸ್.ಪುಟ್ಟರಂಗನಾಥ್ (89) ಅವರು ಮಂಗಳವಾರ ಪಟ್ಟಣದ ತಮ್ಮ ನಿವಾಸದಲ್ಲಿ ನಿಧನ ಹೊಂದಿದ್ದಾರೆ.

1999 ರಲ್ಲಿ ಬೇಲೂರು ಮೀಸಲು ವಿಧಾನಸಭಾ ಕ್ಷೇತ್ರದಿಂದ ಮೊದಲ ಬಾರಿಗೆ ಬಿಜೆಪಿ ಶಾಸಕರಾಗಿ ಆಯ್ಕೆಯಾಗಿದ್ದರು. ಪುಟ್ಟರಂಗನಾಥ್ ಅವರ ಸೊಸೆ ಲತಾ ಮಂಜೇಶ್ವರಿ ಜಿಲ್ಲಾ ಪಂಚಾಯಿತಿ ಸದಸ್ಯರಾಗಿ ಆಯ್ಕೆಯಾಗಿದ್ದರು. ಪುತ್ರ ದೇವು ಪ್ರಸಾದ್ ಅವರು ಜೆಡಿಎಸ್ ಪಕ್ಷದಲ್ಲಿ ಗುರುತಿಸಿಕೊಂಡಿದ್ದಾರೆ. ಪುಟ್ಟರಂಗನಾಥ್ ಅವರ ನಿಧನಕ್ಕೆ ವಿವಿಧ ಪಕ್ಷದ ಮುಖಂಡರು ಸಂತಾಪ ಸೂಚಿಸಿದ್ದಾರೆ.

ಮೃತರು ಇಬ್ಬರು ಪುತ್ರರು, ನಾಲ್ವರು ಹೆಣ್ಣು ಮಕ್ಕಳು ಸೇರಿ ಅಪಾರ ಅಭಿಮಾನಿ ಬಳಗವನ್ನು ಅಗಲಿದ್ದಾರೆ. ಶಾಸಕ ಹೆಚ್.ಕೆ. ಸುರೇಶ್, ಹೆಚ್.ಡಿ.ಸಿ.ಸಿ. ಬ್ಯಾಂಕ್ ನಿರ್ದೇಶಕ ಎಂ.ಎ. ನಾಗರಾಜ್ ಸೇರಿ ಹಲವರು ಮೃತರ ನಿವಾಸಕ್ಕೆ ಭೇಟಿ ನೀಡಿ ಅಂತಿಮ ನಮನ ಸಲ್ಲಿಸಿ ಕುಟುಂಬದವರಿಗೆ ಸಾಂತ್ವನ ಹೇಳಿದರು.

## ಟ್ಯಾಂಕರ್ ಪಲ್ಟಿ : ರಸ್ತೆಗೆ ಹರಿದ ಡಾಂಬಾರ್



• ಪ್ರಜೋದಯ ವರದಿ

**ಸಕಲೇಶಪುರ :** ತಾಲ್ಲೂಕಿನ ಕೆಂಪುಹಳ್ಳ ಸಮೀಪ ಭಾರೀ ಮಳೆಯಿಂದ ರಸ್ತೆ ಸ್ಪಷ್ಟವಾಗಿ ಕಾಣದ ಹಿನ್ನಲೆ ಡಾಂಬಾರ್ ತುಂಬಿದ್ದ ಟ್ಯಾಂಕರ್ ಮಂಗಳವಾರ ಪಲ್ಟಿಯಾಗಿ ರಸ್ತೆಗೆ ಡಾಂಬಾರ್ ಹರಿದು ವಾಹನ ಸವಾರರು ಸಂಕಷ್ಟ ಸಿಲುಕಿದರು.

ಟ್ಯಾಂಕರ್ ಪಲ್ಟಿಯಾದ ಪರಿಣಾಮ ಡಾಂಬಾರ್ ರಸ್ತೆಗೆ ಸೋರಿಕೆಯಾಗಿ, ಮಾಹಿತಿ ಇಲ್ಲದೆ ಸಂಚರಿಸಿದ ಕಾರು ಮತ್ತು ದ್ವಿಚಕ್ರ ವಾಹನಗಳ ಟೈರ್‌ಗಳಿಗೆ ಡಾಂಬಾರ್ ಅಂಟಿಕೊಂಡ ಪರಿಣಾಮ ಸವಾರರು ಪರದಾಡಿದರು. ಹಲವು ವಾಹನಗಳು ನಿಧಾನ ಗತಿಯಲ್ಲಿ ಸಂಚರಿಸಬೇಕಾದ ಪರಿಸ್ಥಿತಿ ನಿರ್ಮಾಣವಾಯಿತು.

ಅವಘಡದಲ್ಲಿ ಗಾಯಗೊಂಡ ಟ್ಯಾಂಕರ್ ಚಾಲಕನನ್ನು ಆಸ್ಪತ್ರೆಗೆ ದಾಖಲಿಸಲಾಗಿದ್ದು, ಟ್ಯಾಂಕರ್ ಮಾಲೀಕರು, ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಅಧಿಕಾರಿಗಳು ಹಾಗು ಪೊಲೀಸ್ ಇಲಾಖೆಗೆ ಮಾಹಿತಿ ನೀಡಿದ್ದಾರೆ. ನಿರಂತರ ಮಳೆಯ ಕಾರಣ ಟ್ಯಾಂಕರ್ ತೆರವು ಕಾರ್ಯ ವಿಳಂಬವಾಗಿದ್ದು, ರಸ್ತೆ ಮೇಲೆ ಹರಡಿರುವ ಡಾಂಬಾರ್ ತೆರವುಗೊಳಿಸುವ ಕಾರ್ಯಕ್ಕೂ ಅಡಚಣೆ ಉಂಟಾಗಿದೆ.

ಇದರ ನಡುವೆ ಟ್ಯಾಂಕರ್ ಪಲ್ಟಿಯಾದ ಸ್ಥಳದಿಂದ ಅಲ್ಪ ದೂರದಲ್ಲೇ ಮತ್ತೊಂದು ಕಂಟೈನರ್ ಚಾಲಕನ ನಿಯಂತ್ರಣ ತಪ್ಪಿ ರಸ್ತೆ ಬದಿಯ ಹಳ್ಳಕ್ಕೆ ವಾಲಿದೆ. ಕಳೆದ ನಾಲ್ಕು ದಿನಗಳಿಂದ ಸುರಿಯುತ್ತಿರುವ ಭಾರೀ ಮಳೆಯಿಂದ ಜಿಲ್ಲೆಯ ಮಲೆನಾಡು ಭಾಗದಲ್ಲಿ ಒಂದರ ಹಿಂದೆ ಒಂದರಂತೆ ಅನಾಹುತಗಳು ಸಂಭವಿಸುತ್ತಿದ್ದು, ಪ್ರಯಾಣಿಕರು ಎಚ್ಚರಿಕೆಯಿಂದ ಸಂಚರಿಸುವಂತೆ ಅಧಿಕಾರಿಗಳು ಮನವಿ ಮಾಡಿದ್ದಾರೆ.

## ರೈತರ ಸಮಸ್ಯೆ ಆಲಿಸಿದ ಜಿಲ್ಲಾಧಿಕಾರಿ | ಪರಿಹಾರಕ್ಕೆ ಪ್ರಸ್ತಾವನೆ ಸಲ್ಲಿಸುವ ಭರವಸೆ

# ಮುಸುಕಿನ ಜೋಳಕ್ಕೆ ರೋಗಬಾಧೆ : ಜು.14ಕ್ಕೆ ತುರ್ತು ಸಭೆ

• ಪ್ರಜೋದಯ ವರದಿ

**ಹಾಸನ :** ಜಿಲ್ಲಾದ್ಯಂತ ಮುಸುಕಿನ ಜೋಳಕ್ಕೆ ರೋಗಬಾಧೆ ತಗುಲಿ ಮೇವಿಗೆ ಪರದಾಡುವ ಪರಿಸ್ಥಿತಿ ನಿರ್ಮಾಣವಾಗಿದ್ದು, ಪರ್ಯಾಯ ಕ್ರಮ ಕೈಗೊಳ್ಳುವ ಉದ್ದೇಶದಿಂದ ಜು.14 ರಂದು ಮಂಗಳವಾರ ಅಧಿಕಾರಿಗಳ ತುರ್ತು ಸಭೆ ನಡೆಸಲಾಗುವುದೆಂದು ಜಿಲ್ಲಾಧಿಕಾರಿ ಕೆ.ಎಸ್.ಲತಾಕುಮಾರಿ ಅವರು ಹೇಳಿದರು.

ಮಂಗಳವಾರ ರೈತ ಸಂಘದ ಜಿಲ್ಲಾಧ್ಯಕ್ಷ ಕಣಗಾಲ್ ಮೂರ್ತಿ ಅವರ ನೇತೃತ್ವದಲ್ಲಿ ಜಿಲ್ಲಾಧಿಕಾರಿ ಭೇಟಿಯಾದ ವೇಳೆ ರೈತರ ಸಮಸ್ಯೆ ಆಲಿಸಿ ಮಾತನಾಡಿದ ಅವರು, ಜೋಳದ ಬೆಲೆ ಕ್ವಿಂಟಾಲ್‌ಗೆ 5 ಸಾವಿರ ರೂ. ತಲುಪಿರುವುದು ಆಘಾತದ ವಿಷಯ. ಇದೇ ಪರಿಸ್ಥಿತಿ ಮುಂದುವರಿದರೆ ಜಾನುವಾರುಗಳ ಮೇವಿಗೆ ತೀವ್ರ ಅಭಾವವಾಗಲಿದೆ. ಹೈನುಗಾರಿಕೆಯಲ್ಲಿ ಜಿಲ್ಲೆ ದ್ವಿತೀಯ ಸ್ಥಾನದಲ್ಲಿದೆ. ಅನ್ನದಾತರಿಗೆ ಸಮಸ್ಯೆಯಾಗದಂತೆ ಅಗತ್ಯ ಕ್ರಮ ಕೈಗೊಳ್ಳುವುದು ಅನಿವಾರ್ಯವಾಗಿದೆ. ಪಶು ಸಂಗೋಪನೆ, ಕೃಷಿ, ತೋಟಗಾರಿಕೆ ಹಾಗು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಜೊತೆ ಸಭೆ ನಡೆಸಿ



ಕ್ರಮ ಕೈಗೊಳ್ಳಲಾಗುವುದು. ಅಗತ್ಯ ಪರಿಹಾರಕ್ಕಾಗಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗುವುದೆಂದು ಭರವಸೆ ನೀಡಿದರು.

ರೈತ ಸಂಘದ ಜಿಲ್ಲಾಧ್ಯಕ್ಷ ಕಣಗಾಲ್ ಮೂರ್ತಿ ಅವರು ಮಾತನಾಡಿ, ಒಂದು ತಿಂಗಳಿಗೆ ಮುಸುಕಿನ ಜೋಳ 5 ಅಡಿ ಎತ್ತರ ಬೆಳೆಯಬೇಕಿತ್ತು. ಆದರೆ, ಒಂದು ಅಡಿಗೆ ಹಳದಿ ಬಣ್ಣಕ್ಕೆ ತಿರುಗುತ್ತಿದೆ. ಕೃಷಿ ಇಲಾಖೆಯ ವರು ನೀಡಿದ ಸಲಹೆಯಂತೆ ಕ್ರಿಮಿನಾಶಕ ಸಿಂಪಡಿಸಿದರೂ ಪ್ರಯೋಜನವಾಗಿಲ್ಲ. ಆಲೂಗೆಡ್ಡೆಯೂ ಅಧಿಕ ಉಷ್ಣಾಂಶದಿಂದ ಭೂಮಿಯಲ್ಲೇ ಕರಗುತ್ತಿದೆ. ಸರ್ಕಾರದಿಂದ ತಕ್ಷಣ ಪರಿಹಾರ ಕೊಡಿಸಬೇಕೆಂದು ಆಗ್ರಹಿಸಿದರು.

ಕೃಷಿ ಇಲಾಖೆ ಜಂಟಿ ನಿರ್ದೇಶಕ ರಮೇಶ್ ಕುಮಾರ್ ಅವರು ಮಾತನಾಡಿ, ಈ ಬಾರಿ ಶೇ. 70 ರಷ್ಟು ಜೋಳ ಹಾನಿಗೀಡಾಗಿದೆ. ಪರ್ಯಾಯ ಬೆಳೆ ಕೈಗೊಳ್ಳುವಂತೆ ಜನವರಿಯಿಂದಲೇ ಗ್ರಾಮೀಣ ಭಾಗದಲ್ಲಿ ಪ್ರಚಾರ ಮಾಡಲಾಗಿತ್ತು. ಈ ಬಗ್ಗೆ ನಮ್ಮ ಬಳಿ ದಾಖಲೆಗಳಿವೆ ಎಂದು ಉತ್ತರಿಸಿದರು.

**ಅಧಿಕಾರಿಗಳ ವಿರುದ್ಧ ಆಕ್ರೋಶ**

ಜಿಲ್ಲಾಧಿಕಾರಿ ಭೇಟಿಗೂ ಮೊದಲು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಕಣಗಾಲ್ ಮೂರ್ತಿ ಅವರು, ಜೋಳದ ಬದಲಿಗೆ ಪರ್ಯಾಯ ಬೆಳೆ ಕೈಗೊಳ್ಳುವಂತೆ ಗ್ರಾಮೀಣ ಭಾಗದಲ್ಲಿ ಪ್ರಚಾರ ನಡೆಸಿದ್ದರೆ ಸಮಸ್ಯೆಯಾಗುತ್ತಿರಲಿಲ್ಲ. ಒಂದು ಪ್ಯಾಕೇಟ್ ಜೋಳ ಬಿತ್ತನೆಗೆ 5 ಸಾವಿರ ರೂ. ಖರ್ಚಾಗಿದೆ. ಅಧಿಕಾರಿಗಳ ನಿರ್ಲಕ್ಷ್ಯಕ್ಕೆ ಅನ್ನದಾತರು ಆತ್ಮಹತ್ಯೆ ಮಾಡಿಕೊಳ್ಳುವ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಅಧಿಕಾರಿಗಳು ಕಚೇರಿಯಲ್ಲಿ ಕುಳಿತು ವರದಿ ನೀಡುವ ಬದಲು, ನೇರವಾಗಿ ರೈತರ ಜಮೀನಿಗೆ ಭೇಟಿ ನೀಡಿ ಬೆಳೆ ಹಾನಿಯ ವಾಸ್ತವ ಸ್ಥಿತಿ ಅರಿಯಬೇಕು. ವಿಜ್ಞಾನಿಗಳು ಹಾಗು ಅಧಿಕಾರಿಗಳು ಕೆಲವೆಡೆ ಪರಿಶೀಲನೆ ನಡೆಸಿದ್ದರೂ ನೂರಾರು ಎಕರೆ ಪ್ರದೇಶದಲ್ಲಿ ಬೆಳೆ ಸಂಪೂರ್ಣ ಹಾನಿಯಾಗಿದೆ. ಆದರೂ ರೈತರಿಗೆ ನ್ಯಾಯ ಸಿಕ್ಕಿಲ್ಲವೆಂದು ಆರೋಪಿಸಿದರು.

ಬಿತ್ತನೆ ಬೀಜ, ರಸಗೊಬ್ಬರ ಹಾಗು ಇತರೆ ಕೃಷಿ ಪರಿಕರಗಳ ಬೆಲೆ ನಿರಂತರವಾಗಿ ಏರಿಕೆಯಾಗುತ್ತಿದ್ದು, ಮೊದಲು 5 ಕೆ.ಜಿ. ಇದ್ದ ಬೀಜದ ಪ್ಯಾಕೆಟ್ ಈಗ 3 ಕೆ.ಜಿ.ಗೆ ಇಳಿದಿದ್ದರೂ ಅದರ ಬೆಲೆ 1,800 ರಿಂದ 2,000 ರೂ. ವರೆಗೆ ಏರಿಕೆಯಾಗಿದೆ. ಇಷ್ಟು ವೆಚ್ಚ ಮಾಡಿದರೂ ಬಿತ್ತಿದ ಬೆಳೆ ಕೈಗೆ ಸಿಗದೆ ರೈತರು ಸಾಲದ ಸುಳಿಯಲ್ಲಿ ಸಿಲುಕಿದ್ದಾರೆಂದು ಅಳಲು ತೋಡಿಕೊಂಡರು.

ಕೈಗಾರಿಕೆಗಳಿಗೆ ಸಾವಿರಾರು ಕೋ. ರೂ. ನೆರವು ನೀಡುವ ಸರ್ಕಾರ ದೇಶಕ್ಕೆ ಅನ್ನ ಬೆಳೆಯುವ ಸಣ್ಣ ಮತ್ತು ಅತಿ ಸಣ್ಣ ರೈತರನ್ನೂ ಉಳಿಸುವ ಜವಾಬ್ದಾರಿ ವಹಿಸಬೇಕು. ಜಿಲ್ಲೆಗೆ ವಿಶೇಷ ಪರಿಹಾರ ಪ್ಯಾಕೇಜ್ ಘೋಷಿಸಿ ತಕ್ಷಣ ಆರ್ಥಿಕ ನೆರವು ನೀಡಬೇಕೆಂದು ಒತ್ತಾಯಿಸಿದರು.

ಜಿಲ್ಲಾಧಿಕಾರಿ, ಉಸ್ತುವಾರಿ ಸಚಿವರು ಹಾಗು ಸಂಬಂಧ ಪಟ್ಟ ಅಧಿಕಾರಿಗಳು ಕೂಡಲೇ ರೈತರೊಂದಿಗೆ ಸಭೆ ನಡೆಸಿ ಬೆಳೆ ನಷ್ಟದ ಬಗ್ಗೆ ಸ್ಥಳ ಪರಿಶೀಲನೆ ನಡೆಸಬೇಕು. ರೈತರ ಸಮಸ್ಯೆಗಳನ್ನು ನಿರ್ಲಕ್ಷಿಸದೆ ಶೀಘ್ರ ಪರಿಹಾರ ಘೋಷಿಸಬೇಕು. ಸರ್ಕಾರ ಶೀಘ್ರ ಕ್ರಮ ಕೈಗೊಳ್ಳದಿದ್ದರೆ ಜಿಲ್ಲೆಯ ರೈತರು ಒಗ್ಗೂಡಿ ಕೃಷಿ ಇಲಾಖೆ ಕಚೇರಿ ಎದುರು ಹೋರಾಟ ನಡೆಸಲಾಗುವುದೆಂದು ಎಚ್ಚರಿಕೆ ನೀಡಿದರು. ರೈತ ಮುಖಂಡರಾದ ಪಾಲಾಕ್ಷ, ಸುರೇಶ್, ಶೇಷಣ್ಣ, ಕಾಂತರಾಜ್, ಸತೀಶ್, ಪ್ರಕಾಶ್ ಇತರರಿದ್ದರು.

# ಹಾಸನಾಂಬದೇವಿ ದರ್ಶನ: ಸುರಕ್ಷಿತ ಕ್ರಮಕ್ಕೆ ಸಿದ್ಧತೆ ವಹಿಸಿ

## ಜಿಲ್ಲಾಧಿಕಾರಿ ಕೆ.ಎಸ್.ಲತಾಕುಮಾರಿ ಸೂಚನೆ

• ಪ್ರಜೋದಯ ವರದಿ



**ಹಾಸನ:** ನಗರದ ಶ್ರೀ ಹಾಸನಾಂಬ ದೇವಿ ದರ್ಶನವನ್ನು ಭಕ್ತಾದಿಗಳಿಗೆ ಸುರಕ್ಷಿತ ಹಾಗೂ ಸುಗಮವಾಗಿ ಕಲ್ಪಿಸಲು ಅಗತ್ಯ ಸಿದ್ಧತೆಗೆ ಕ್ರಮ ವಹಿಸುವಂತೆ ಜಿಲ್ಲಾಧಿಕಾರಿ ಲತಾ ಕುಮಾರಿ ಅವರು ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಮಂಗಳವಾರ ನಡೆದ ಶ್ರೀ ಹಾಸನಾಂಬ ಮತ್ತು ಶ್ರೀ ಸಿದ್ದೇಶ್ವರ ಸ್ವಾಮಿ ಜಾತ್ರಾ ಮಹೋತ್ಸವ ಕುರಿತು ಪೂರ್ವ ಸಿದ್ಧತಾ ಸಭೆ ನಡೆಸಿ ಮಾತನಾಡಿದ ಅವರು ಈ ಬಾರಿ ಅ.29 ರಂದು ದೇವಾಲಯದ ಬಾಗಿಲನ್ನು ತೆರಯಲಾಗುವುದು. ನ.11 ರಂದು ಬಾಗಿಲು ಮುಚ್ಚಲಾಗುವುದು ಎಂದು ತಿಳಿಸಿದರು.

2025 ರಲ್ಲಿ ನಡೆದ ಜಾತ್ರಾ ಮಹೋತ್ಸವವನ್ನು ಜಿಲ್ಲಾ ಉಸ್ತುವಾರಿ ಸಚಿವರ ಮಾರ್ಗದರ್ಶನದಂತೆ ಅತ್ಯಂತ ಯಶಸ್ವಿಯಾಗಿ ನಡೆಸಲು ಶಿಸ್ತು ಹಾಗೂ ನಿಯಮಬದ್ಧವಾಗಿ ಕರ್ತವ್ಯ ನಿರ್ವಹಿಸುವ ಮೂಲಕ ಶ್ರಮ ವಹಿಸಿದ ಅಧಿಕಾರಿಗಳಿಗೆ ಅಭಿನಂದನೆಗಳು ಹಾಗೂ ಧನ್ಯವಾದ ತಿಳಿಸಿದ ಜಿಲ್ಲಾಧಿಕಾರಿಗಳು ತಾವು ಕರ್ತವ್ಯ ನಿರ್ವಹಿಸಿರುವುದು ನಮಗೆ ತುಂಬಾ ಹೆಮ್ಮೆ ಇದೆ. ಈ ವರ್ಷವೂ ಜಾತ್ರಾ ಮಹೋತ್ಸವವನ್ನು ಯಶಸ್ವಿಯಾಗಿ ನಡೆಸಲು ಕಳೆದ ವರ್ಷ ಆಗಿದ್ದ ಸಣ್ಣಪುಟ್ಟ ನ್ಯೂನ್ಯತೆಗಳನ್ನು ಸರಿಪಡಿಸಿಕೊಂಡು ಮುನ್ನಡೆಯಲು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ದೇವಿ ದರ್ಶನಕ್ಕೆ ಆಗಮಿಸುವ ಭಕ್ತಾದಿಗಳ ಸಂಖ್ಯೆಯನ್ನು ನಿಖರವಾಗಿ ಹೇಳಲು ಆಧುನಿಕ ತಂತ್ರಜ್ಞಾನ ಬಳಸಿಕೊಳ್ಳುವುದರ ಜೊತೆಗೆ ಇತರೆ ಮೂಲಗಳಿಂದಲು ಪರಿಗಣಿಸಲು ಒಂದು ಸಮಿತಿ ರಚನೆ ಮಾಡಲು ತಿಳಿಸಿದರು.

ಕಡಿಮೆ ಅವಧಿಯಲ್ಲಿ ಲಕ್ಷಾಂತರ ಭಕ್ತಾಧಿಗಳಿಗೆ ದೇವಿ ದರ್ಶನ ಮಾಡಿಸುವುದು ಜೊತೆಗೆ ಮೂಲಭೂತ ಸೌಕರ್ಯ ಕಲ್ಪಿಸುವುದು ಸವಾಲಿನ ಕೆಲಸ ಆದ್ದಾಗ್ಯೂ ಎಲ್ಲಾ ಅಧಿಕಾರಿಗಳು ಜವಾಬ್ದಾರಿಯುತವಾಗಿ ಕರ್ತವ್ಯ ನಿರ್ವಹಿಸಿ, ದೇವಿಯ ಜಾತ್ರಾ ಮಹೋತ್ಸವದ ಕೆಲಸ ಮಾಡಲು ಇದೊಂದು ಉತ್ತಮ ಅವಕಾಶ ಎಂದರು.

ಭಕ್ತಾದಿಗಳು ಚಪ್ಪಲಿಗಳನ್ನು ಸ್ವಂತ ವಾಹನದಲ್ಲಿ ಬಂದಿದ್ದರೆ ವಾಹನದಲ್ಲಿಯೇ ಬಿಡಬೇಕು, ಬಸ್‌ನಲ್ಲಿ ಬರುವಂತಹ ಭಕ್ತಾಧಿಗಳು ಬಸ್ ನಿಲ್ದಾಣದಲ್ಲಿ ಬಿಟ್ಟು ಬರಬೇಕು, ದೇವಾಲಯದ ಸುತ್ತ ಮುತ್ತ ಎಲ್ಲಿಯೂ ಚಪ್ಪಲಿ ಬಿಡುವಂತಿಲ್ಲ, ಈ ಬಾರಿ ಅಧಿಕಾರಿಗಳು ಸಹ ಅವರ ವಾಹನದಲ್ಲಿಯೇ ಚಪ್ಪಲಿ ಬಿಟ್ಟು ಬರಬೇಕು ಎಂದು ತಿಳಿಸಿದರು.

ಜನದಟ್ಟಣೆ ನಿರ್ವಹಣೆಯಲ್ಲಿ ಕಳೆದ ಬಾರಿ ಏನಾದರೂ ನ್ಯೂನ್ಯತೆಗಳಿದ್ದರೆ ಸರಿಪಡಿಸಿಕೊಳ್ಳಬೇಕು ಎಂದ ಅವರು ಸ್ವಚ್ಚತಾ ಕಾರ್ಯ ಸರಿಯಾಗಿ ಆಗಬೇಕು. ದೇವಾಲಯದ ಆವರಣದಲ್ಲಿ ಹೂವಿನ ಅಲಂಕಾರ ಮಾಡುವವರು ಅಲ್ಲಿಯೇ ಕುಳಿತು ಸಿದ್ದತೆ ಮಾಡುತ್ತಿರುತ್ತಾರೆ ಇದರಿಂದ ಸರಿಯಾಗಿ ಸ್ವಚ್ಚತೆ ಕಾಪಾಡಲು ಆಗುವುದಿಲ್ಲ ಹೊರಗಿನಿಂದ ಸಿದ್ಧಪಡಿಸಿಕೊಂಡು ಬಂದು ಜೋಡಣೆ ಮಾಡುವ ರೀತಿ ಕ್ರಮ ವಹಿಸಲು ಟೆಂಡರ್‌ದಾರರಿಗೆ ಸೂಚನೆ ನೀಡಬೇಕು ಎಂದರು.

ತಾತ್ಕಾಲಿಕ ಶೌಚಾಲಯದ ಟೆಂಡರ್ ತೆಗೆದುಕೊಂಡವರು ಅಗತ್ಯ ಸಿಬ್ಬಂದಿಗಳನ್ನು ಸ್ವಚ್ಚತಾ ಕಾರ್ಯಕ್ಕೆ ನೇಮಕ ಮಾಡಬೇಕು ಜೊತೆಗೆ ಕಾಲಕಾಲಕ್ಕೆ ಸ್ವಚ್ಚತೆ ಆಗುತ್ತಿದೆಯೇ ಎಂಬುದನ್ನು ಪರಿಶೀಲನೆ ಮಾಡಬೇಕು ಎಂದರು.

ಕಳೆದ ಬಾರಿ ಭಕ್ತಾಧಿಗಳು ಸರತಿಸಾಲಿನಲ್ಲಿ ಸಾಗಲು ಅಳವಡಿಸಿದ್ದ ಬ್ಯಾರಿಕೇಡ್‌ನ ಕಬ್ಬಿಣದ ಪಟ್ಟಿ ಕಾಲಿಗೆ ತಾಗಿ ಪೆಟ್ಟಾಗುತ್ತಿತ್ತು. ಈ ಬಾರಿ ಆ ರೀತಿ ಆಗದಂತೆ ಅಧಿಕಾರಿಗಳು ಗಮನಹರಿಸಿ ಸರಿಯಾದ ರೀತಿಯಲ್ಲಿ ಬ್ಯಾರಿಕೇಡ್ ಅಳವಡಿಕೆಗೆ ಕ್ರಮವಹಿಸಲು ಸೂಚನೆ ನೀಡಿದರು.

ಕಳೆದ ವರ್ಷ ಆರೋಗ್ಯ ಇಲಾಖೆ ಸಿಬ್ಬಂದಿಗಳು ಭಕ್ತಾದಿಗಳಿಗೆ ತಕ್ಷಣ ಸ್ಪಂದಿಸಿ ಆರೋಗ್ಯ ಸೇವೆಗಳನ್ನು ಒದಗಿಸಿರುವ ಬಗ್ಗೆ ಬಂದಂತಹ ಭಕ್ತಾದಿಗಳೆ ಉತ್ತಮ ಆರೋಗ್ಯ ಸೇವೆಗಳನ್ನು ನೀಡಿದ್ದಾರೆ. ಈ ಬಾರಿಯೂ ಅದೇ ರೀತಿ ಉತ್ತಮ ಸೇವೆ ಸಲ್ಲಿಸಲು ಕ್ರಮ ವಹಿಸುವಂತೆ ಸೂಚಿಸಿದರು.

ಜಾತ್ರಾ ಮಹೋತ್ಸವದ ಸಂದರ್ಭದಲ್ಲಿ ಫಲಪುಷ್ಪ ಪ್ರದರ್ಶನ, ಸಾಂಸ್ಕೃತಿಕ ಕಾರ್ಯಕ್ರಮಗಳು, ಸಾವಯವ ಉತ್ಪನ್ನಗಳ ಬಳಕೆಗೆ ಉತ್ತೇಜನ ನೀಡಲು ಸಾವಯವ ಮೇಳ, ಶ್ವಾನ ಪ್ರದರ್ಶನ, ಪಾಕ ಸ್ಪರ್ಧೆ ಏರ್ಪಡಿಸಲು ತಿಳಿಸಿದರು.

ಜಿಲ್ಲೆಯ ಜಾನಪದ ಕಲಾವಿದರಿಗೆ ಹೆಚ್ಚಿನ ಆದ್ಯತೆ ನೀಡಬೇಕು ಕೋಲಾಟ, ರಂಗ ಕುಣಿತ ಮತ್ತಿತರ ಸ್ಥಳೀಯ ಜಾನಪದ ಕಲೆಗೆ ಪ್ರೋತ್ಸಾಹ ನೀಡಬೇಕು ಎಂದರಲ್ಲದೆ, ನಮ್ಮ ಊರ ಜಾತ್ರೆ ನಮ್ಮ ಊರಿನ ಜನರಿಗೆ ಹೆಚ್ಚಿನ ಪ್ರೋತ್ಸಾಹ ನೀಡಬೇಕು ಎಂದು ತಿಳಿಸಿದರು.

ಹಾಸನಾಂಬ ಜಾತ್ರಾ ಮಹೋತ್ಸವದ ಸಂದರ್ಭದಲ್ಲಿ ದೇವಿ ದರ್ಶನಕ್ಕೆ ಆಗಮಿಸುವ ಭಕ್ತಾದಿಗಳು ಜಿಲ್ಲೆಯ ಪ್ರವಾಸಿ ತಾಣಗಳನ್ನು ವೀಕ್ಷಣೆ ಮಾಡಲು ಅನುಕೂಲವಾಗುವಂತೆ ಹಾಗೂ ಜಿಲ್ಲೆಯಲ್ಲಿ ಪ್ರವಾಸೋದ್ಯಮವನ್ನು ಉತ್ತೇಜಿಸಲು ಯೋಜನೆ ತಯಾರಿಸಲು ಒಂದು ಸಮಿತಿ ರಚನೆ ಮಾಡುವಂತೆ ತಿಳಿಸಿದರು.

ಜಾತ್ರಾ ಮಹೋತ್ಸವದ ಹಿನ್ನಲೆಯಲ್ಲಿ ವೆಬ್ ಸೈಟ್ ಲಾಂಚ್ ಆಗಬೇಕು. ಪ್ರತಿದಿನ ದೇವಾಲಯದ ಬಳಿ ನಡೆಯುವ ಸಾಂಸ್ಕೃತಿಕ ಕಾರ್ಯಕ್ರಮ ಲೈವ್ ಟೆಲಿಕಾಸ್ಟ್ ಆಗಬೇಕು ಈ ನಿಟ್ಟನಲ್ಲಿ ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚಿಸಿದರಲ್ಲದೆ, ಸೌಂಡ್ ಸಿಸ್ಟಮ್ ನಲ್ಲಿ ಯಾವುದೇ ಅಡಚಣೆ ಉಂಟಾಗದಂತೆ ನೋಡಿಕೊಳ್ಳಬೇಕು. ಪ್ರತಿ ಮಂಗಳವಾರ ಬೆಳಗ್ಗೆ 10 ಗಂಟೆಗೆ ಜಿಲಾಧಿಕಾರಿಯವರ ಕಚೇರಿಯಲ್ಲಿ ಸಭೆ ನಡೆಸಲಾಗುವುದು ಎಂದು ತಿಳಿಸಿದರು.

ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶುಭಂ ಶುಕ್ಲ, ಉಪ ಅರಣ್ಯ ಸಂರಕ್ಷಣಾಧಿಕಾರಿ ಸೌರಭ್ ಕುಮಾರ್, ಎಡಿಸಿ ಕೃಷ್ಣಮೂರ್ತಿ, ಉಪ ವಿಭಾಗಾಧಿಕಾರಿ ಜಗದೀಶ್ ಗಂಗಣ್ಣನವರ್ ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು ಸಭೆಯಲ್ಲಿ ಹಾಜರಿದ್ದರು.

# ಹುಲಿಕಲ್ಲು ಶಾಲೆಯಲ್ಲಿ ಆಂಗ್ಲ - ಕನ್ನಡ ಮಾಧ್ಯಮ ಬೋಧನೆ

## ಪ್ರಯೋಜನ ಪಡೆದುಕೊಳ್ಳುವಂತೆ ಪೋಷಕರಲ್ಲಿ ಮನವಿ

• ಪ್ರಜೋದಯ ವರದಿ



**ಅರಕಲಗೂಡು:** ತಾಲ್ಲೂಕಿನ ಗ್ರಾಮೀಣ ಭಾಗದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸರ್ಕಾರಿ ಪ್ರೌಢಶಾಲೆಗಳ ಪೈಕಿ ಹುಲಿಕಲ್ಲು ಶಾಲೆಯಲ್ಲಿ ಆಂಗ್ಲ ಮತ್ತು ಕನ್ನಡ ಮಾಧ್ಯಮದಲ್ಲಿ ಶಿಕ್ಷಣ ದೊರೆಯುತ್ತಿದ್ದು, ಪೋಷಕರು ತಮ್ಮ ಮಕ್ಕಳನ್ನು ದಾಖಲಿಸಿ ಪ್ರಯೋಜನ ಪಡೆದುಕೊಳ್ಳಬೇಕೆಂದು ಮುಖ್ಯ ಶಿಕ್ಷಕ ಯೋಗೇಶ್ವರ್ ಅವರು ಮನವಿ ಮಾಡಿದರು.

ಶಾಲೆಯಲ್ಲಿ ನಡೆದ 8ನೇ ತರಗತಿ ವಿದ್ಯಾರ್ಥಿಗಳ ಸ್ವಾಗತ ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ನಮ್ಮ ಶಾಲೆಗೆ 2025-26ನೇ ಸಾಲಿನಲ್ಲಿ ಶೇ.100ರಷ್ಟು ಫಲಿತಾಂಶ ಬಂದಿದೆ. ಅದರಲ್ಲಿಯೂ ಇಂಗ್ಲೀಷ್ ಮಾಧ್ಯಮದ ಎಲ್ಲಾ ವಿದ್ಯಾರ್ಥಿಗಳು ಉನ್ನತ ಮಟ್ಟದಲ್ಲಿ ತೇರ್ಗಡೆಯಾಗಿದ್ದಾರೆ. ಪ್ರತಿ ತಿಂಗಳು ವಿದ್ಯಾರ್ಥಿಗಳ ಪೋಷಕರು ಶಾಲೆಗೆ ಬಂದು ತಮ್ಮ ಮಕ್ಕಳ ಕಲಿಕಾ ಕ್ರಮವನ್ನು ಸಮಾಲೋಚನೆ ನಡೆಸಿ ಉತ್ತೇಜಿಸಬೇಕೆಂದು ತಿಳಿಸಿದರು.

ಶಿಕ್ಷಕಿ ಆರ್.ಶಾರದ ಅವರು ಮಾತನಾಡಿ, ಗ್ರಾಮೀಣ ಭಾಗದಲ್ಲಿ ಕಾರ್ಯ ನಿರ್ವಹಿಸುತ್ತಿರುವ ನಮ್ಮ ಹುಲಿಕಲ್ಲು ಸರ್ಕಾರಿ ಪ್ರೌಢಶಾಲೆಯು ಉತ್ತಮ ಪರಿಸರವನ್ನು ಹೊಂದಿದೆಯಲ್ಲದೆ, ನುರಿತ ಶಿಕ್ಷಕ ವೃಂದವನ್ನು ಹೊಂದಿದೆ. ಪ್ರತಿ ವಿದ್ಯಾರ್ಥಿಯ ಕಲಿಕೆ ಕುರಿತು ಹೆಚ್ಚಿನ ನಿಗಾ ವಹಿಸಲಾಗುವುದು. ಈಗ ತಾನೆ 8ನೇ ತರಗತಿಗೆ ಸೇರ್ಪಡೆಗೊಂಡಿರುವ ವಿದ್ಯಾರ್ಥಿ, ವಿದ್ಯಾರ್ಥಿನಿಯರು ಓದಿನ ಕಡೆ ಹೆಚ್ಚಿನ ಶ್ರದ್ಧೆ ವಹಿಸುವ ಜತೆಗೆ ಪಾಠ ಪ್ರವಚನ ಬಗ್ಗೆ ಶಿಕ್ಷಕರೊಂದಿಗೆ ಸಮಾಲೋಚನೆ ನಡೆಸಿ ಪರಿಹಾರ ಕಂಡುಕೊಳ್ಳಬಹುದಾಗಿದೆ. ಪೋಷಕರು ಕೂಡ ತಮ್ಮ ಮಕ್ಕಳ ಕಲಿಕೆ ಕಡೆ ಮನೆಯಲ್ಲಿ ಕಾಳಜಿ ವಹಿಸುವಂತೆ ಹೇಳಿದರು.

ಅಂತಿಮವಾಗಿ ಹೊಸದಾಗಿ ಶಾಲೆಗೆ ಸೇರಿರುವ 8, 9 ಹಾಗೂ 10ನೇ ತರಗತಿ ವಿದ್ಯಾರ್ಥಿಗಳಿಗೆ ಪ್ರತಿಜ್ಞಾವಿಧಿ ಬೋಧಿಸಲಾಯಿತು.

ಈ ಸಂದರ್ಭದಲ್ಲಿ ಶಿಕ್ಷಕರಾದ ರೂಪ, ಶೃತಿ, ಜಗದೀಶ್, ಮಂಜು, ಪ್ರಮೋದ್, ಯಶೋಧ, ಪೂರ್ಣಿಮಾ, ಭವ್ಯ ಹಾಗೂ ಪೋಷಕರು ಹಾಜರಿದ್ದರು.

# ತಬಲಾವಾದನ: ವಿದ್ಯಾರ್ಥಿಗಳ ಸಾಧನೆ



• ಪ್ರಜೋದಯ ವರದಿ

**ಹಾಸನ:** ಪುಣೆಯ ಭಾರತೀಯ ವಿದ್ಯಾಪೀಠದ ಸ್ಕೂಲ್ ಆಫ್ ಪರ್ಫಾರ್ಮಿಂಗ್ ಆರ್ಟ್ಸ್ ವತಿಯಿಂದ ನಡೆಸಲಾದ ತಬಲಾ ವಾದನ ಡಿಪ್ಲೊಮಾ (ಫೌಂಡೇಶನ್) ಪರೀಕ್ಷೆಯಲ್ಲಿ ಹಾಸನದ ರಾಷ್ಟ್ರೋತ್ಥಾನ ವಿದ್ಯಾಕೇಂದ್ರದ ವಿದ್ಯಾರ್ಥಿಗಳು ಅತ್ಯುತ್ತಮ ಸಾಧನೆ ಮಾಡಿ, ಎಲ್ಲರೂ ಪ್ರಥಮ ದರ್ಜೆಯಲ್ಲಿ ಉತ್ತೀರ್ಣರಾಗುವ ಮೂಲಕ ಶಾಲೆಗೆ ಕೀರ್ತಿ ತಂದಿದ್ದಾರೆ.

ಪ್ರಥಮ ದರ್ಜೆಯಲ್ಲಿ ಉತ್ತೀರ್ಣರಾದವರಲ್ಲಿ ಏಳನೇ ತರಗತಿಯ ವಿದ್ಯಾರ್ಥಿ ಸುಧನ್ವ ಎಸ್. ಭಟ್, ಎಂಟನೇ ತರಗತಿಯ ವಿದ್ಯಾರ್ಥಿ ರಾಘವೇಂದ್ರ ಸಿ.ಎಂ., ಏಳನೇ ತರಗತಿಯ ವಿದ್ಯಾರ್ಥಿ ನಾಗನಮ್ಮನ್ ಪಿ.ವಿ., ಆರನೇ ತರಗತಿಯ ವಿದ್ಯಾರ್ಥಿ ಚರಿತ್ ಎಸ್., ನಾಲ್ಕನೇ ತರಗತಿಯ ವಿದ್ಯಾರ್ಥಿ ನಿತಿನ್ ಕುಮಾರ್ ಹೆಚ್.ಜೆ. ಹಾಗೂ ನಾಲ್ಕನೇ ತರಗತಿಯ ವಿದ್ಯಾರ್ಥಿನಿ ಶಿವಾತ್ಮಿಕ ಜಿ.

ವಿದ್ಯಾರ್ಥಿಗಳಿಗೆ ಶಾಲೆಯ ತಬಲಾ ಗುರುಗಳಾದ ಯಮನಪ ಜಾಲಗಾರ ಅವರು ಮಕ್ಕಳಿಗೆ ತರಬೇತಿ ನೀಡಿದ್ದರು . ಅವರ ಮಾರ್ಗದರ್ಶನ ಹಾಗೂ ವಿದ್ಯಾರ್ಥಿಗಳ ನಿರಂತರ ಪರಿಶ್ರಮದ ಫಲವಾಗಿ ಈ ಗಮನಾರ್ಹ ಸಾಧನೆ ಸಾಧ್ಯವಾಗಿದೆ

ವಿದ್ಯಾರ್ಥಿಗಳ ಸಾಧನೆಗೆ ಶಾಲೆಯ ಪ್ರಾಂಶುಪಾಲೆ ಉಮಾ ಪಾಟೀಲ್, ಆಡಳಿತ ಮಂಡಳಿ, ಶುಭ ಹಾರೈಸಿದೆ.

## ಜು.9, 11 ರಂದು ವಿದ್ಯುತ್ ವ್ಯತ್ಯಯ

**ಹಾಸನ:** ಬೇಲೂರು ತಾಲ್ಲೂಕಿನಲ್ಲಿರುವ ದ್ವಿ-ವಿದ್ಯುತ್ ಮಾರ್ಗಗಳ ಗೋಪುರಗಳ ಮೇಲೆ ಹಾಲಿ ಇರುವ 66 ಕೆ.ವಿ ಸಕಲೇಶಪುರ- ಅರೇಹಳ್ಳಿ ವಿದ್ಯುತ್ ಮಾರ್ಗದ ಗೋಪುರ ಕಾಮಗಾರಿ ಹಾಗೂ ವಾಹಕ ಎಳೆಯುವ ಕಾಮಗಾರಿಗೆ ಸಂಬಂಧಿಸಿದಂತೆ 66 ಕೆ.ವಿ ಸಕಲೇಶಪುರ -ಅರೇಹಳ್ಳಿ ವಿದ್ಯುತ್ ಮಾರ್ಗದ ಲೈನ್‌ಕ್ಲಿಯರ್ ತೆಗೆದುಕೊಳ್ಳುವುದರಿಂದ 66/11 ಕೆ.ವಿ ಅರೇಹಳ್ಳಿ ಮತ್ತು ಹಾನಬಾಳು ವಿದ್ಯುತ್ ವಿತರಣಾ ಕೇಂದ್ರದಿಂದ ವಿದ್ಯುತ್ ಸರಬರಾಜಾಗುವ 11 ಕೆ.ವಿ ಪೂರಕಗಳ ಗ್ರಾಹಕರಿಗೆ ಜು.09 ಮತ್ತು ಜು.11 ರಂದು ಬೆಳಗ್ಗ: 8 ಯಿಂದ ಸಂಜೆ 5:30 ಗಂಟೆಯವರೆಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗುವುದರಿಂದ ಸಾರ್ವಜನಿಕರು ಸಹಕರಿಸುವಂತೆ ಕರ್ನಾಟಕ ವಿದ್ಯುತ್ ಪ್ರಸರಣಾ ನಿಗಮ ನಿಯಮಿತ ಯೋಜನೆಗಳ ವಿಭಾಗದ ಕಾರ್ಯ ನಿರ್ವಾಹಕ ಇಂಜಿನಿಯರ್ ತಿಳಿಸಿದ್ದಾರೆ.

# ನಿಯಮ ಉಲ್ಲಂಘಿಸಿದ ಬಡಾವಣೆಗಳಿಗೆ ಅನುಮತಿ ನೀಡಬೇಡಿ

• ಪ್ರಜೋದಯ ವರದಿ



**ಸಕಲೇಶಪುರ:** ಪಟ್ಟಣದ ಅರೇಹಳ್ಳಿ ಬೀದಿಯ ಡಾಲರ್ಸ್ ಕಾಲೋನಿಯಲ್ಲಿ ಭಾರೀ ಮಳೆಯಿಂದ ತಡೆಗೋಡೆ ಕುಸಿದು ಎರಡು ಮನೆಗಳಿಗೆ ಹಾನಿಯಾದ ಸ್ಥಳಕ್ಕೆ ತಾಲ್ಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ಮುರಳಿ ಮೋಹನ್ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಸುದ್ದಿಗಾರರೊಂದಿಗೆ ಮಾತನಾಡಿ, ಭಾರೀ ಮಳೆಯಿಂದ ಸಂಭವಿಸಿದ ಈ ದುರ್ಘಟನೆಯಲ್ಲಿ ಯಾರಿಗೂ ಪ್ರಾಣಹಾನಿಯಾಗದಿರುವುದು ಸಮಾಧಾನದ ಸಂಗತಿ. ಆದರೆ ಕಳಪೆ ಕಾಮಗಾರಿ ಮತ್ತು ನಿರ್ಲಕ್ಷ್ಯದಿಂದ ಇಂತಹ ಘಟನೆಗಳು ಮರುಕಳಿಸದಂತೆ ಅಧಿಕಾರಿಗಳು ಹಾಗೂ ಬಡಾವಣೆ ನಿರ್ಮಾಪಕರು ಎಚ್ಚರಿಕೆ ವಹಿಸಬೇಕು ಎಂದು ಹೇಳಿದರು.

ಸಕಲೇಶಪುರದಲ್ಲಿ ಹೊಸ ಬಡಾವಣೆಗಳು ಹೆಚ್ಚಾಗುತ್ತಿವೆ. ಆದರೆ ಅನೇಕ ಕಡೆ ನಿಯಮಗಳನ್ನು ಉಲ್ಲಂಘಿಸಿ ಮಣ್ಣು ತುಂಬಿಸಿ ನಿವೇಶನಗಳನ್ನು ಅಭಿವೃದ್ಧಿಪಡಿಸಲಾಗುತ್ತಿದೆ. ಐದು ಅಡಿಗಿಂತ ಹೆಚ್ಚು ಎತ್ತರದಲ್ಲಿ ಮಣ್ಣು ತುಂಬಿಸಿ ಬಡಾವಣೆ ನಿರ್ಮಿಸಲು ಯಾವುದೇ ಕಾರಣಕ್ಕೂ ಅನುಮತಿ ನೀಡಬಾರದು. 3040 ಅಡಿ ಎತ್ತರದ ಮಣ್ಣು ತುಂಬಿದ ಜಾಗದಲ್ಲಿ ನಿರ್ಮಿಸುವ ಮನೆಗಳು ಭವಿಷ್ಯದಲ್ಲಿ ಭಾರೀ ಅಪಾಯಕ್ಕೆ ಕಾರಣವಾಗಬಹುದು ಎಂದು ಎಚ್ಚರಿಸಿದರು.

ಸಾಮಾನ್ಯ ಜನರು ತಮ್ಮ ಜೀವನದ ಸಂಪೂರ್ಣ ಉಳಿತಾಯ, ಸಾಲ ಹಾಗೂ ಆಭರಣಗಳನ್ನು ಗಿರವಿ ಇಟ್ಟು ಮನೆ ನಿರ್ಮಿಸುತ್ತಾರೆ. ಇಂತಹ ಸಂದರ್ಭದಲ್ಲಿ ಕಳಪೆ ಯೋಜನೆ ಅಥವಾ ನಿರ್ಲಕ್ಷ್ಯದಿಂದ ಮನೆಗಳಿಗೆ ಹಾನಿಯಾದರೆ ಅದನ್ನು ಸಹಿಸಿಕೊಳ್ಳಲು ಸಾಧ್ಯವಿಲ್ಲ, ಆದ್ದರಿಂದ ಬಡಾವಣೆಗಳಿಗೆ ಅನುಮತಿ ನೀಡುವ ಮುನ್ನ ಅಧಿಕಾರಿಗಳು ಸ್ಥಳ ಪರಿಶೀಲನೆ ನಡೆಸಿ, ಸುರಕ್ಷತಾ ಮಾನದಂಡಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು ಎಂದು ಒತ್ತಾಯಿಸಿದರು.

ಸಿ.ಎ ಹಾಗೂ ಉದ್ಯಾನವನಗಳಿಗೆ ಮೀಸಲಿಡಬೇಕಾದ ಜಾಗಗಳನ್ನು ಸರ್ಕಾರದ ಮಾರ್ಗಸೂಚಿಯಂತೆ ಸಾರ್ವಜನಿಕರಿಗೆ ಅನುಕೂಲವಾಗುವ ಸ್ಥಳದಲ್ಲೇ ಗುರುತಿಸಬೇಕು. ನಿಯಮಗಳನ್ನು ಉಲ್ಲಂಘಿಸಿ ಅನುಮತಿ ನೀಡಿದರೆ ಮುಂದಿನ ದಿನಗಳಲ್ಲಿ ಗಂಭೀರ ಸಮಸ್ಯೆಗಳು ಎದುರಾಗಲಿವೆ ಎಂದು ಅವರು ಹೇಳಿದರು.

ಉಪ ವಿಭಾಗಾಧಿಕಾರಿಗಳು, ಯೋಜನಾ ಪ್ರಾಧಿಕಾರ, ಪುರಸಭೆ ಹಾಗೂ ಸಂಬಂಧಪಟ್ಟ ಅಧಿಕಾರಿಗಳು ಸಕಲೇಶಪುರ ಸುತ್ತಮುತ್ತ ನಿರ್ಮಾಣವಾಗುತ್ತಿರುವ ಎಲ್ಲ ಬಡಾವಣೆಗಳನ್ನು ಸಮಗ್ರವಾಗಿ ಪರಿಶೀಲಿಸಿ, ಸುರಕ್ಷತಾ ನಿಯಮಗಳನ್ನು ಕಟ್ಟುನಿಟ್ಟಾಗಿ ಜಾರಿಗೊಳಿಸಬೇಕು. ಈಗಲೇ ಮುನ್ನೆಚ್ಚರಿಕೆ ಕ್ರಮ ಕೈಗೊಂಡರೆ ಭವಿಷ್ಯದಲ್ಲಿ ಸಂಭವಿಸಬಹುದಾದ ಅನಾಹುತಗಳನ್ನು ತಡೆಯಬಹುದು ಎಂದು ತಿಳಿಸಿದರು.

ತಡೆಗೋಡೆ ಕುಸಿತ ಪ್ರಕರಣವನ್ನು ಸಂಸದರು ಹಾಗೂ ಸಂಬಂಧಪಟ್ಟ ಅಧಿಕಾರಿಗಳು ಈಗಾಗಲೇ ಪರಿಶೀಲಿಸಿದ್ದು, ಸಂತ್ರಸ್ತರಿಗೆ ಅಗತ್ಯ ನೆರವು ಹಾಗೂ ಸೂಕ್ತ ಕ್ರಮ ಕೈಗೊಳ್ಳುವ ಭರವಸೆ ನೀಡಿದ್ದಾರೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ನಗರ ಪ್ರಾಧಿಕಾರದ ಅಧ್ಯಕ್ಷ ಸೈಯದ್ ಮುಫೀಜ್, ಕಾಂಗ್ರೆಸ್ ಪಕ್ಷದ ಮುಖಂಡರಾದ ಬೈಕೆರೆ ದೇವರಾಜ್, ಉದಯ್, ಪ್ರಶಾಂತ್ ಕಲ್ಗನೆ, ಬಿಳಿತಾಳ್ ಕಿರಣ್, ಪೇಪರ್ ಮಂಜು, ಹಾರಿಸ್, ಎ. ಮಂಜುದಂತೆ ಇನ್ನಿತರರು ಇದ್ದರು.

# ಗುರುಗಳನ್ನು ಗೌರವಿಸಿದರೆ ಜೀವನದಲ್ಲಿ ಯಶಸ್ಸು

• ಪ್ರಜೋದಯ ವರದಿ



**ಜಾವಗಲ್:** ವಿದ್ಯಾರ್ಥಿ ಜೀವನದಲ್ಲಿ ಶಿಸ್ತು ಬಹಳ ಮುಖ್ಯ. ಕೇವಲ ವಿದ್ಯೆ ಇದ್ದರೆ ಸಾಲದು, ಅದರ ಜೊತೆಗೆ ವಿನಯವೂ ಇರಬೇಕು. ವಿದ್ಯಾರ್ಥಿಗಳು ಉನ್ನತ ಹುದ್ದೆಗೇರಬೇಕು ಎಂಬ ಮಹತ್ವಾಕಾಂಕ್ಷೆ ಗುರುಗಳಿಗಿರುತ್ತದೆಯೇ ಹೊರತು, ಆಕ್ಷೇಪಿಸುವವರಲ್ಲಿ ಯಾವುದೇ ಸ್ವಾರ್ಥವಿರುವುದಿಲ್ಲ. ನಾವು ಗಳಿಸುವ ಸಂಬಳದಲ್ಲಿ ಅವರು ಪಾಲು ಕೇಳುವುದಿಲ್ಲ. ಅಂತಹ ನಿರಪೇಕ್ಷ ಗುರುಗಳನ್ನು ಸದಾ ಗೌರವಿಸಿದಾಗ ಮಾತ್ರ ಜೀವನದಲ್ಲಿ ಮುಂದೆ ಬರಲು ಸಾಧ್ಯ ಎಂದು ಮಂಗಳೂರಿನ ಫಾದರ್ ಮುಲ್ಲರ್ ಆಸ್ಪತ್ರೆಯ ವೈದ್ಯಾಧಿಕಾರಿ ಡಾ. ಲಕ್ಷ್ಮಣ್ ಗಂಗಾ ತಿಳಿಸಿದರು.

ತಾಲ್ಲೂಕಿನ ಜಾವಗಲ್ ಸರ್ಕಾರಿ ಪದವಿಪೂರ್ವ ಕಾಲೇಜಿನಲ್ಲಿ ನಡೆದ 2026-27ನೇ ಸಾಲಿನ ಕ್ರೀಡಾ ಮತ್ತು ಸಾಂಸ್ಕೃತಿಕ ಸಂಘಗಳ ಉದ್ಘಾಟನಾ ಸಮಾರಂಭ ಉದ್ಘಾಟಿಸಿ ಮಾತನಾಡಿದ ಅವರು, ಗುರುಗಳ ಮಾರ್ಗದರ್ಶನದಲ್ಲಿ ಶ್ರದ್ಧೆಯಿಂದ ಕಲಿತಿದ್ದರಿಂದಲೇ, ಇಂದು ನನ್ನ ಗುರುಗಳಾಗಿರುವ ಈ ಕಾಲೇಜಿನ ಪ್ರಾಚಾರ್ಯರೊಂದಿಗೆ ವೇದಿಕೆ ಹಂಚಿಕೊಳ್ಳುವ ಭಾಗ್ಯ ನನಗೆ ದೊರೆತಿದೆ ಎಂದು ಸ್ಮರಿಸಿದರು.

ಪ್ರಾಚಾರ್ಯ ಉಮೇಶ್ ಹೊಸಹಳ್ಳಿ ಅವರು ಮಾತನಾಡಿ, ವರ್ಣಮಾತ್ರಂ ಕಲಿಸಿದಾತಂ ಗುರು ಎಂದು ಸೋಮೇಶ್ವರ ಕವಿ ಹೇಳಿದ್ದಾನೆ. ತುಂಬಿದ ಕೊಡ ತುಳುಕುವುದಿಲ್ಲ ಎನ್ನುವಂತೆ ಡಾ.ಲಕ್ಷ್ಮಣ್ ಆಗರ್ಭ ಶ್ರೀಮಂತ ಕುಟುಂಬದಿಂದ ಬಂದಿದ್ದರೂ, ಸ್ವಲ್ಪವೂ ಗರ್ವವಿಲ್ಲದೆ ಸಾಮಾನ್ಯ ವಿದ್ಯಾರ್ಥಿಯಂತೆ ಸರ್ಕಾರಿ ಕಾಲೇಜಿನಲ್ಲಿ ಓದಿ ಇಂದು ಶ್ರೇಷ್ಠ ವೈದ್ಯರಾಗಿದ್ದಾರೆ. ಕೇವಲ ಒಂದು ಸಂದೇಶ ಕಳುಹಿಸಿದ್ದಕ್ಕೆ ಮಂಗಳೂರಿನಿಂದ ಬಂದು ವಿದ್ಯಾರ್ಥಿಗಳನ್ನುದ್ದೇಶಿಸಿ ಮಾತನಾಡಿದ್ದು ತೀವ್ರ ಸಂತೋಷ ತಂದಿದೆ. ನಿಮ್ಮ ಇತಿಹಾಸ ಉಪನ್ಯಾಸಕರೂ ನನ್ನ ವಿದ್ಯಾರ್ಥಿಯೇ ಆಗಿದ್ದರು. ನೀವೂ ಸಹ ಭವಿಷ್ಯದಲ್ಲಿ ಉನ್ನತ ಸ್ಥಾನಕ್ಕೇರಿ ಕಾಲೇಜಿಗೆ ಕೀರ್ತಿ ತರಬೇಕು ಎಂದು ಅವರು ಹಾರೈಸಿದರು.

ಸಿಡಿಸಿ ಉಪಾಧ್ಯಕ್ಷ ಪುಟ್ಟೇಗೌಡ ಮಾತನಾಡಿ, ಮುಂಬರುವ ಪರೀಕ್ಷೆಗಳಲ್ಲಿ ಅತಿ ಹೆಚ್ಚು ಅಂಕ ಗಳಿಸುವ ಪ್ರತಿಯೊಬ್ಬ ವಿದ್ಯಾರ್ಥಿಗೂ ತಲಾ 500 ರೂ. ನಗದು ಬಹುಮಾನ ನೀಡುವುದಾಗಿ ಘೋಷಿಸಿ ವಿದ್ಯಾರ್ಥಿಗಳನ್ನು ಹುರಿದುಂಬಿಸಿದರು.

ಶಿಸ್ತು ಹಾಗೂ ಗುರಿಯೆಡೆಗಿನ ಕಠಿಣ ಪರಿಶ್ರಮವಿದ್ದರೆ ಸರ್ಕಾರಿ ಶಾಲಾ- ಕಾಲೇಜುಗಳಲ್ಲಿ ಓದಿಯೂ ಉನ್ನತ ಸ್ಥಾನಕ್ಕೇರಬಹುದು ಎಂಬುದಕ್ಕೆ ಡಾ. ಲಕ್ಷ್ಮಣ್ ಗಂಗಾ ಅವರೇ ಉತ್ತಮ ಉದಾಹರಣೆ. ಅವರ ಸರಳತೆ ಹಾಗೂ ಗುರುಗಳ ಮೇಲಿನ ಭಕ್ತಿ ಪ್ರತಿಯೊಬ್ಬ ವಿದ್ಯಾರ್ಥಿಗೂ ಮಾದರಿಯಾಗಬೇಕು ಎಂದು ಸರ್ಕಾರಿ ಪಿ.ಯು. ಕಾಲೇಜು ಪ್ರಾಚಾರ್ಯ ಉಮೇಶ್ ಹೊಸಹಳ್ಳಿ ಅವರು ತಿಳಿಸಿದರು.

ಕಾಲೇಜು ಅಭಿವೃದ್ಧಿ ಸಮಿತಿ ಉಪಾಧ್ಯಕ್ಷ ಪುಟ್ಟೇಗೌಡ, ಸಮಾಜ ಶಾಸ್ತ್ರ ಉಪನ್ಯಾಸಕ ದಯಾನಂದ್, ಕಾಲೇಜಿನ ಬೋಧಕ ಹಾಗೂ ಬೋಧಕೇತರ ಸಿಬ್ಬಂದಿ, ವಿದ್ಯಾರ್ಥಿ-ವಿದ್ಯಾರ್ಥಿನಿಯರು ಉಪಸ್ಥಿತರಿದ್ದರು.

## ಜಿಜಿಜೆಸಿ ಪ್ರಧಾನ ಪ್ರೌಢಶಾಲಾ ವಿಭಾಗದ ವಿದ್ಯಾರ್ಥಿಗಳಿಗೆ ಎಸ್‌ಐಆರ್ ಮಾಹಿತಿ

# ಎಸ್.ಐ.ಆರ್. ಕುರಿತು ಅರಿವು ಮೂಡಿಸೋಣ

• ಪ್ರಜೋದಯ ವರದಿ




**ಹಾಸನ:** ಪ್ರಜಾಪ್ರಭುತ್ವದ ಯಶಸ್ಸು ನಮ್ಮ ದೇಶದ ಯಶಸ್ಸು ಆಗಿರುವುದರಿಂದ ಪ್ರಸ್ತುತ ನಡೆಯುತ್ತಿರುವ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆಯ ಸಂದರ್ಭದಲ್ಲಿ ಬಿ.ಎಲ್.ಓ. ಅವರು ಮನೆ ಬಾಗಿಲಿಗೆ ಬಂದಾಗ ಅರ್ಜಿ ನಮೂನೆಯಲ್ಲಿ ಮತದಾರರ ಹೆಸರು ಇದೆಯೇ ಎಂದು ಪರಿಶೀಲಿಸಿ, ಸೂಕ್ತ ಮಾಹಿತಿಯೊಂದಿಗೆ ಅರ್ಜಿ ನಮೂನೆಯನ್ನು ಭರ್ತಿ ಮಾಡಲು ಎಲ್ಲಾ ವಿದ್ಯಾರ್ಥಿಗಳು ತಮ್ಮ ಮನೆಯಲ್ಲಿ ಪೋಷಕರಿಗೆ ಹಾಗೂ ನೆರೆಹೊರೆ ಮನೆಯ ನಾಗರೀಕರಿಗೆ ತಿಳಿಸಬೇಕೆಂದು ಹಿರಿಯ ಶಿಕ್ಷಕಿ ಹೆಚ್.ಪಿ. ಮಂಜುಳ ತಿಳಿಸಿದರು.

ನಗರದ ಆರ್.ಸಿ.ರಸ್ತೆಯಲ್ಲಿರುವ ಜಿಜಿಜೆಸಿ ಪ್ರಧಾನ ಪ್ರೌಢಶಾಲಾ ವಿಭಾಗದ ವಿದ್ಯಾರ್ಥಿಗಳಿಗೆ ಎಸ್ ಐಆರ್ ಮಾಹಿತಿ ನೀಡುತ್ತಾ, ದೇಶದ ಪ್ರತೀ ಪ್ರಜೆಯೂ ಚುನಾವಣಾ ಪ್ರಕ್ರಿಯೆಯಲ್ಲಿ ಭಾಗವಹಿಸುವುದು ಜವಾಬ್ದಾರಿ. ಅದನ್ನು ಕರ್ತವ್ಯವೆಂದು ತಿಳಿದು ನಿರ್ವಹಿಸುವ ಮೂಲಕ ದೇಶದ ಸುಭದ್ರ ಆಡಳಿತಕ್ಕೆ ಕಾರಣವಾಗಬೇಕು. ಮತದಾನವು ನಮಗೆ ಬದುಕಿನ ಹಕ್ಕು ಆಗಿದ್ದು ಒಂದು ಉತ್ತಮ ಅವಕಾಶವನ್ನು ನಾವು ಕಳೆದುಕೊಳ್ಳಬಾರದು ಮತ್ತು ದುರ್ಬಳಕೆ ಮಾಡಿಕೊಳ್ಳಬಾರದು. ಈ ಕುರಿತು ಎಚ್ಚರಿಕೆ ವಹಿಸಬೇಕು ಎಂದರು.

ಶಾಲಾ ಚುನಾವಣಾ ಸಾಕ್ಷರತಾ ಸಂಘದ (ಇಎಲ್‌ಸಿ) ಶಿಕ್ಷಕ ಕೆ.ಎನ್. ಚಿದಾನಂದ ಅವರು ಮಾತನಾಡಿ, ಎಸ್‌ಐಆರ್ ಪ್ರಕ್ರಿಯೆ ಒಂದು ವಿನೂತನ ಕಾರ್ಯಕ್ರಮವಾಗಿದ್ದು, ಆ ಮೂಲಕ ಪ್ರತಿಯೊಬ್ಬ ಅರ್ಹ ನಾಗರೀಕರು ತಮ್ಮ ಹೆಸರು ಮತದಾರರ ಪಟ್ಟಿಯಲ್ಲಿ ಇರುವುದನ್ನು ಪರಿಶೀಲಿಸಿ, ಹೆಸರು ಸೇರ್ಪಡೆ, ತಿದ್ದುಪಡಿ ಇತ್ಯಾದಿ ಮಾಹಿತಿಗಳನ್ನು ಮನೆಗೆ ಆಗಮಿಸುವ ಬಿ.ಎಲ್.ಓ. ಅವರಿಗೆ ನೀಡುವಂತೆ ಎಲ್ಲಾ ವಿದ್ಯಾರ್ಥಿಗಳು ತಮ್ಮ ತಮ್ಮ ಮನೆಯಲ್ಲಿ ತಂದೆ ತಾಯಿಗಳಿಗೆ ತಿಳಿಸಬೇಕು ಎಂದು ಸಲಹೆ ನೀಡಿದರು.

ತಪ್ಪಿಲ್ಲದ ಮತದಾರರ ಪಟ್ಟಿ ಮುಕ್ತ ಮತ್ತು ನ್ಯಾಯಸಮ್ಮತ ಚುನಾವಣೆಯ ಶಕ್ತಿಯಾಗಿದೆ. ಸರಿಯಾದ ಮತಪಟ್ಟಿ ಮಾಡುವ ಮೂಲಕ ಪ್ರಜಾಪ್ರಭುತ್ವವನ್ನು ಯಶಸ್ವಿಗೊಳಿಸೋಣ. ಮನೆ ಬಾಗಿಲಿಗೆ ಬರುವ ಬಿ.ಎಲ್.ಓ. ಅಧಿಕಾರಿಗೆ ಮಾಹಿತಿ ನೀಡಿ ನಿಮ್ಮ ಮತವನ್ನು ಖಚಿತ ಪಡಿಸಿ, ನನ್ನ ಮತ ನನ್ನ ಹಕ್ಕು ಎಂದು ಎಲ್ಲರೂ ಅರ್ಥಮಾಡಿಕೊಳ್ಳುವಂತೆ ಅರಿವು ಮೂಡಿಸಬೇಕಿದೆ ಎಂದರು.

ಎ.ವಿ.ಗೀತಾರಾಣಿ, ರುದ್ರೇಶ್, ಎಂ.ಆರ್.ರಂಗಾಮಣಿ, ಮಧು, ಸತ್ಯನಾರಾಯಣ, ಮುರಳಿ, ತೈಬಾ ಕೌಸರ್, ಸಿಬ್ಬಂದಿ ವರ್ಗ ಮತ್ತು ವಿದ್ಯಾರ್ಥಿನಿಯರು ಉಪಸ್ಥಿತರಿದ್ದರು.

ಕರ್ನಾಟಕ ಸರ್ಕಾರ

ಜಿಲ್ಲಾ ಪಂಚಾಯತ್ ಹಾಸನ ತಾಲ್ಲೂಕು ಪಂಚಾಯತ್ ಬೇಲೂರು

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಸನ್ಯಾಸಿಹಳ್ಳಿ ಗ್ರಾಮ ಪಂಚಾಯಿತಿ ಕಾರ್ಯಾಲಯ, ಬೇಲೂರು ತಾಲ್ಲೂಕು, ಹಾಸನ ಜಿಲ್ಲೆ

ಸಂಖ್ಯೆ: ಗ್ರಾಪಂಚ/ಇ-ಟೆಂಡರ್/01/2026-27

ದಿನಾಂಕ: 02-07-2026

: ಕರ್ನಾಟಕ ಪಬ್ಲಿಕ್ ಪ್ರೊಕ್ಯೂರ್‌ಮೆಂಟ್ ಮೂಲಕ ಟೆಂಡರ್ :

2026-27 ನೇ ಸಾಲಿಗೆ ಹಾಸನ ಜಿಲ್ಲೆ, ಬೇಲೂರು ತಾಲ್ಲೂಕು, ಸನ್ಯಾಸಿಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಗೆ ಬರುವ ಗ್ರಾಮಗಳ ಬೀದಿದೀಪ ಮತ್ತು ಕುಡಿಯುವ ನೀರು ನಿರ್ವಹಣೆಗಾಗಿ ಅವಶ್ಯಕವುಳ್ಳ ಸಾಮಗ್ರಿಗಳನ್ನು ಸರಬರಾಜು ಮಾಡಲು ಹಾಗೂ ಕುಡಿಯುವ ನೀರು ವಾರ್ಷಿಕ ನಿರ್ವಹಣೆಗಾಗಿ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ 1999 ಮತ್ತು 2000 ಪ್ರಕಾರ ಇ-ಪ್ರೊಕ್ಯೂರ್‌ಮೆಂಟ್ ಮುಖಾಂತರ ದರಪಟ್ಟಿ ಆಹ್ವಾನಿಸಲಾಗಿದೆ. ವಿವರ: 1)ಬೀದಿದೀಪ ನಿರ್ವಹಣೆಗಾಗಿ ಅವಶ್ಯಕವುಳ್ಳ ಸಾಮಗ್ರಿಗಳನ್ನು ಸರಬರಾಜು ಮಾಡುವುದು, ಟೆಂಡರ್ ಅಂದಾಜು ಮೊತ್ತ ರೂ.7,00,000/-, ಇ.ಎಂ.ಡಿ ಮೊತ್ತ ರೂ.17,500/- 2)ಕುಡಿಯುವ ನೀರು ನಿರ್ವಹಣೆಗಾಗಿ ಅವಶ್ಯಕವುಳ್ಳ ಸಾಮಗ್ರಿಗಳನ್ನು ಸರಬರಾಜು ಮಾಡುವುದು, ಟೆಂಡರ್ ಅಂದಾಜು ಮೊತ್ತ ರೂ. 5,00,000/- ಇ.ಎಂ.ಡಿ ಮೊತ್ತ ರೂ.12,500/- 3)ಕುಡಿಯುವ ನೀರು ಸರಬರಾಜು ಮಾಡುವ ಸಬ್ ಮರ್ಸಿಬಲ್ ಮೋಟಾರು ಪಂಪು/ಕೈಪಂಪು ದುರಸ್ಥಿ ಹಾಗೂ ಬಿಡಿ ಭಾಗಗಳ ಅಳವಡಿಕೆ ಮಾಡುವುದು ಮತ್ತು ವಾರ್ಷಿಕ ನಿರ್ವಹಣೆ ಟೆಂಡರ್ ಅಂದಾಜು ಮೊತ್ತ ರೂ. 6,50,000/- ಇ.ಎಂ.ಡಿ ಮೊತ್ತ ರೂ.16,250/- ಇ-ಟೆಂಡರ್ ಸಲ್ಲಿಸಲು ಪ್ರಾರಂಭ ದಿನಾಂಕ : 02-07-2026 ಇ-ಟೆಂಡರ್ ಸಲ್ಲಿಸಲು ಕೊನೆಯ ದಿನಾಂಕ: 21-07-2026 ತಾಂತ್ರಿಕ ಬಿಡ್ ತೆರೆಯುವ ದಿನಾಂಕ: 23-07-2026 ಆರ್ಥಿಕ ಬಿಡ್ ತೆರೆಯುವ ದಿನಾಂಕ 24-07-2026 ಆಸಕ್ತರು https://kppp.karnataka.gov.in ಆನ್‌ಲೈನ್ ಪೋರ್ಟಲ್ ಮೂಲಕ ದರಪಟ್ಟಿ ಸಲ್ಲಿಸಬಹುದಾಗಿರುತ್ತದೆ. ಹೆಚ್ಚಿನ ಮಾಹಿತಿಯನ್ನು ಕಳ್ಳೇರಿ ಗ್ರಾಮ ಪಂಚಾಯಿತಿ ಕಛೇರಿಯಲ್ಲಿ ಪಡೆಯಬಹುದಾಗಿರುತ್ತದೆ. (ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳ ದೂರವಾಣಿ ಸಂಖ್ಯೆ: 9972836282)

ಸಹಿ/-ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಸನ್ಯಾಸಿಹಳ್ಳಿ ಗ್ರಾಮ ಪಂಚಾಯತಿ, ಬೇಲೂರು ತಾಲ್ಲೂಕು

ಸಹಿ/-ಆಡಳಿತಾಧಿಕಾರಿ, ಸನ್ಯಾಸಿಹಳ್ಳಿ ಗ್ರಾಮ ಪಂಚಾಯತಿ, ಬೇಲೂರು ತಾಲ್ಲೂಕು

ವಾಸಾಸಂಇ/ಹಿಸನಿ/ಹಾಸನ/304/ಕೆಎಸ್‌ಎಂಸಿಎ/2026-27

## ಇಂದು ಮಳೆಯಬ್ಬರ



**ಬೆಂಗಳೂರು:** ರಾಜ್ಯದಲ್ಲಿ ಮುಂಗಾರು ಚುರುಕಾಗಿದ್ದು, ಇಂದೂ ಕರಾವಳಿ ಹಾಗೂ ಪಶ್ಚಿಮ ಘಟ್ಟದ ಜಿಲ್ಲೆಗಳಲ್ಲಿ ಮಳೆ ಅಬ್ಬರಿಸಲಿದೆ. ಗುರುವಾರದಿಂದ ಮಳೆ ಸ್ವಲ್ಪ ಮಟ್ಟಿಗೆತಗ್ಗಲಿದ್ದು, ಉತ್ತರ ಕನ್ನಡ ಹಾಗೂ ದಕ್ಷಿಣ ಕರ್ನಾಟಕದ ಪಾಲಿಗೆ ಮತ್ತೆ ಮಳೆ ಮಂಕಾಗಲಿದೆ.

ಜುಲೈ 8 ರಂದು ದಕ್ಷಿಣ ಕನ್ನಡ, ಉಡುಪಿ, ಉತ್ತರ ಕನ್ನಡದ ಜಿಲ್ಲೆಗೆ ಆರೆಂಜ್ ಅಲರ್ಟ್ ಇದೆ. ಅಲ್ಲದೆ ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಕೊಡಗು, ಉತ್ತರ ಕನ್ನಡ ಜಿಲ್ಲೆಗೆ ಆರೆಂಜ್ ಅಲರ್ಟ್ ಕೊಡಲಾಗಿದ್ದು, ಬೆಳಗಾವಿ ಹಾಗೂ ಧಾರವಾಡಕ್ಕೆ ಭಾರಿ ಮಳೆಯ ಯೆಲ್ಲೋ ಅಲರ್ಟ್ ಕೊಡಲಾಗಿದೆ, ಉಳಿದ ಜಿಲ್ಲೆಗಳಲ್ಲಿ ಹಗುರ ಮಳೆ ಮಾತ್ರ ಆಗಲಿದೆ.

ಸಾಧಾರಣ ಮಳೆ ಎಲ್ಲೆಲ್ಲಿ?

ಬೆಂಗಳೂರು ನಗರ, ಗ್ರಾಮಾಂತರ, ಮೈಸೂರು, ಚಿಕ್ಕಬಳ್ಳಾಪುರ, ಮಂಡ್ಯ, ಕೋಲಾರ, ರಾಮನಗರ ಜಿಲ್ಲೆಗಳಲ್ಲಿ ಸಾಧಾರಣ ಮಳೆಯಾಗಲಿದೆ.

ಶುಕ್ರವಾರದಿಂದ ಮಳೆ ಸಂಪೂರ್ಣವಾಗಿ ಕಡಿಮೆ ಆಗಲಿದೆ, ಕೇವಲ ಕರಾವಳಿಯ 3 ಜಿಲ್ಲೆಗಳಿಗೆ ಮಾತ್ರ ಯೆಲ್ಲೋ ಅಲರ್ಟ್ ಇದ್ದು, ಉಳಿದೆಡೆ ಒಣ ಹವಾಮಾನ ಇರಲಿದೆ.

## 75 ಕವಿಗಳ ಕವನಗಳು | ಮನೆ-ಮನೆ ಕಾವ್ಯ ಸೌರಭ ಕವನ ಸಂಕಲನ ಕೃತಿ ಬಿಡುಗಡೆ

# ನೂರಾರು ಕವಿ ಸಾಹಿತಿಗಳಿಗೆ ಮನೆ-ಮನೆ ಕವಿಗೋಷ್ಠಿ ಸಾಹಿತ್ಯ ತಳಹದಿ

• ಪ್ರಜೋದಯ ವರದಿ



**ಹಾಸನ:** ಜಿಲ್ಲೆಯ ಮನೆ- ಮನೆ ಕವಿಗೋಷ್ಠಿ ಸಾಹಿತ್ಯ ಸಂಘಟನೆಯು ಅತ್ಯುತ್ತಮ ಕಾರ್ಯವೆಸಗುತ್ತಿದ್ದು ಇಡೀ ರಾಜ್ಯಕ್ಕೆ ಮಾದರಿಯಾಗಿದೆ. ನೂರಾರು ಕವಿಗಳನ್ನು ಬೆಳೆಸುತ್ತಾ, ಅವರ ಸಾಹಿತ್ಯ ರಚನೆಗೆ ತಳಹದಿಯಾಗಿ ಮುಂದುವರೆದಿದೆ ಎಂದು ಡಾ.ವಸಂತಕುಮಾರ್ ಪೆರ್ಲ ಅವರು ತಿಳಿಸಿದರು.

ನಗರದ ಸಾಲಗಾಮೆ ರಸ್ತೆಯ ಭಾರತಿ ವಿದ್ಯಾಮಂದಿರದಲ್ಲಿ ನಡೆದ ಮನೆಮನೆ ಕವಿಗೋಷ್ಠಿಯ 29ನೇ ವರ್ಷದ ವಾರ್ಷಿಕೋತ್ಸವ ಸಮಾರಂಭದಲ್ಲಿ ಮನೆ- ಮನೆ ಕವಿಗೋಷ್ಠಿ ವತಿಯಿಂದ ಹೊರತರಲಾದ ಮನೆ- ಮನೆ ಕಾವ್ಯ ಸೌರಭ ಕವನ ಸಂಕಲನ ಕೃತಿಯನ್ನು ಬಿಡುಗಡೆ ಮಾಡಿ ಮಾತನಾಡಿದ ಅವರು, ಆಕರ್ಷಕ ಮುಖಪುಟವನ್ನುಳ್ಳ ಈ ಕವನ ಸಂಕಲನದಲ್ಲಿ 75 ಕವಿಗಳ ಕವನಗಳು ಹಲವು ವಸ್ತು ವಿಷಯಗಳಿಂದ ಕವನಗಳು ಸುಂದರವಾಗಿ ರಚಿತವಾಗಿದ್ದು, ಅನುಭವಗಳ ಸಾರವನ್ನು ಒಳಗೊಂಡಿದ್ದು ಹಾಸನ ಜಿಲ್ಲೆಯ ಮನೆ ಕವಿಗೋಷ್ಠಿ ಇತಿಹಾಸದಲ್ಲಿ ಹೆಗ್ಗುರುತಾಗಿದೆ. ಒಬ್ಬ ಕವಿಗೆ ಏಕಾಂತದ ಜೊತೆಗೆ ಲೋಕಾಂತವೂ ಇರಬೇಕಾಗಿದ್ದು, ಉತ್ತಮ ಆಲೋಚನೆ ಭಾಷಾ ಶೈಲಿ ಹಾಗೂ ಅಭಿವ್ಯಕ್ತಿಯೊಂದಿಗೆ ಸಮಕಾಲೀನ ಸಂಸ್ಕೃತಿಯನ್ನು ಸಾರುವ ಸಾಹಿತ್ಯ ರಚನೆ ಆಗಬೇಕಿದೆ ಎಂದು ಹೇಳಿದರು.

ಮನೆ- ಮನೆ ಕವಿಗೋಷ್ಠಿಯ ಹಿರಿಯ ಸಂಘಟಕ ಭ.ರಾ.ವಿಜಯ ಕುಮಾರ್ ಅವರು ಮಾತನಾಡಿ, 29 ವರ್ಷದ ಹಿಂದೆ ಮನೆಮನೆ ಕವಿಗೋಷ್ಠಿಯ ಸಂಘಟನೆಯಲ್ಲಿ ತೊಡಗಿಸಿಕೊಂಡವರನ್ನು ಸ್ಮರಿಸುತ್ತಾ, ಇಲ್ಲಿಯವರೆಗೂ ನಿರಂತರವಾಗಿ ಸಾಗಿ ಬಂದಿರುವುದಕ್ಕೆ ಮೆಚ್ಚುಗೆ ವ್ಯಕ್ತಪಡಿಸಿದರಲ್ಲದೆ, ಕನ್ನಡ ಸಾಹಿತ್ಯ ಗದ್ಯರೂಪಕ್ಕಿಂತ ಕಾವ್ಯರೂಪದಲ್ಲಿ ಹೆಚ್ಚಿಗೆ ಬೆಳಕಿಗೆ ಬಂದಿದ್ದು, ಪಂಪ, ರನ್ನ, ಕುಮಾರವ್ಯಾಸ, ರಾಘವಾಂಕರ ಕೃತಿಗಳು ಕಾವ್ಯರೂಪದಲ್ಲಿವೆ.ಕಾವ್ಯವು ಮನುಷ್ಯನ ಭೌತಿಕ ಹಾಗೂ ಸಾಂಸ್ಕೃತಿಕ ಬೆಳವಣಿಗೆಯಲ್ಲಿ ಪ್ರಮುಖ ಮೈಲಿಗಲ್ಲಾಗಿ ಉಳಿದುಕೊಂಡಿದೆ ಎಂದು ಅಭಿಪ್ರಾಯಪಟ್ಟರು.

ಸಂಚಾಲಕಿ ಸುಕನ್ಯ ಮುಕುಂದ ಅವರು ಮಾತನಾಡಿ, ಮನೆ -ಮನೆ ಕವಿಗೋಷ್ಠಿ ಕಾರ್ಯಕ್ರಮಗಳಲ್ಲಿ ಹಲವು ಕೃತಿಗಳನ್ನು ಬಿಡುಗಡೆ ಮಾಡಿದ್ದು, ಹಲವು ಸಾಹಿತಿಗಳ ಕೃತಿಗಳನ್ನು ಕವಿಗಳು ವಿಮರ್ಶೆ ಮಾಡಿದ್ದಾರೆ. ಕವಿಗೋಷ್ಠಿಯಲ್ಲಿ ವಾಚನ ಮಾಡಿದ ಕವಿಗಳ ಕವಿತೆಗಳ ವಿಮರ್ಶೆ ಹಾಗೂ ಮಾರ್ಗದರ್ಶನದಿಂದ ಪ್ರೋತ್ಸಾಹ ಸಿಕ್ಕಂತಾಗಿದೆ ಎಂದು ತಿಳಿಸಿದರು.

ಸಾಹಿತಿ ಸುಶೀಲಾ ಸೋಮಶೇಖರ್ ಮಾತನಾಡಿ, ಮನೆ-ಮನೆ ಕವಿಗೋಷ್ಠಿಯು ಕವಿಗಳಿಗೆ ಉತ್ತಮವಾದ ವೇದಿಕೆಯಾಗಿದ್ದು ನಾವೆಲ್ಲ ಇಂತಹ ಉತ್ತಮ ಸಂಘಟನೆಯನ್ನು ಉಳಿಸಿ ಬೆಳೆಸುವುದರ ಮೂಲಕ ಕಾವ್ಯ ಸಂಸ್ಕೃತಿಯನ್ನು ಉಳಿಸೋಣ ಎಂದರು.

ಸಾಹಿತಿ ಎನ್.ಎಲ್.ಚನ್ನೇಗೌಡ ಅವರು ಮಾತನಾಡಿ, ತಾವು ನಿರಂತರ ವಾಗಿ ಮನೆ -ಮನೆ ಕವಿಗೋಷ್ಠಿ ಕಾರ್ಯಕ್ರಮಕ್ಕೆ ಭಾಗವಹಿಸಿದ್ದರಿಂದ ಸಾಹಿತ್ಯ ರಚನೆಗೆ ಪ್ರೋತ್ಸಾಹ ದೊರೆತು ಹಲವು ಪ್ರಶಸ್ತಿಗಳಿಗೆ ಭಾಜನರಾಗಿದ್ದು ಮನೆ-ಮನೆ ಕವಿ ಗೋಷ್ಠಿಯ ಮೂಲಕವೇ. ಹಾಗಾಗಿ ಸಾಹಿತ್ಯ ರಚನೆಗೆ ಪ್ರೇರಣೆ ನೀಡುವ ಈ ಅನುಕೂಲವನ್ನು ಎಲ್ಲಾ ಕವಿಗಳು ಸದುಪಯೋಗಪಡಿಸಿಕೊಳ್ಳಬೇಕೆಂದು ಸಲಹೆ ನೀಡಿದರಲ್ಲದೆ, ಒಬ್ಬ ಕವಿಯ ಧೋರಣೆ ಆಯಾ ಕಾಲಘಟ್ಟಕ್ಕೆ ತಕ್ಕಂತೆ ಮಾರ್ಪಾಡಾಗುತ್ತದೆ ಎಂಬುದನ್ನು ಅವರು ತಿಳಿಸಿದರು.

ನಗರದ ಸೆಂಟ್ರಲ್ ಕಾಮರ್ಸ್ ಕಾಲೇಜಿನ ಪ್ರಾಂಶುಪಾಲರು ಹಿರಿಯ ಸಾಹಿತಿಗಳೂ ಆದ ಚಂದ್ರಕಾಂತ ಪಡೆಸೂರ ಅವರು ಕವನವಾಚನ ಮಾಡಿದ ಎಲ್ಲಾ ಕವಿಗಳ ಕವನಗಳನ್ನು ವಿಮರ್ಶೆ ಮಾಡುತ್ತಾ ಕವಿತೆಗಳ ವಸ್ತು- ವಿಷಯ, ಧೋರಣೆ ವಿಭಿನ್ನವಾಗಿದ್ದು ಉತ್ತಮವಾಗಿ ಮೂಡಿಬಂದಿವೆ. ಮನೆಮನೆ ಕವಿಗೋಷ್ಠಿಯು 343 ದಿನ ನಿರಂತರವಾಗಿ ನಡೆದಿರುವುದು ಒಂದು ದಾಖಲೆಯೇ ಸರಿ, ಯುವ ಸಾಹಿತಿಗಳು ಇನ್ನೂ ಉನ್ನತ ಮಟ್ಟಕ್ಕೆ ಕೊಂಡೊಯ್ಯಲಿ ಎಂದು ಹಾರೈಸಿದರು.

ಕವಿಗೋಷ್ಠಿಯಲ್ಲಿ 38 ಕವಿಗಳು ಕವನವಾಚನ ಮಾಡಿದ್ದು ವಿಶೇಷವಾಗಿತ್ತು.

ಜಯದೇವಪ್ಪ, ಸಾಹಿತಿಗಳಾದ ಕುಮಾರ ಚಲವಾದಿ, ಜಯಂತಿ ಚಂದ್ರಶೇಖರ್, ಹಾಸನವಾಣಿ ದಿನ ಪತ್ರಿಕೆಯ ಸಂಪಾದಕಿ ಲೀಲಾವತಿ, ಎಸ್.ಲಲಿತ, ಪರಿಮಳ ಮಹೇಶ್, ದಿಬ್ಬೂರು ರಮೇಶ್, ಸಮುದ್ರವಳ್ಳಿ ವಾಸು, ಪ್ರೇಮಾ ಪ್ರಶಾಂತ, ಶೈಲಜಾ ಲೋಕೇಶ್, ಸಿ.ಎನ್.ತಿಮ್ಮೇಗೌಡ, ಪರಮೇಶ್ ಮಡಬಲು, ಗಿರಿಜಾ ನಿರ್ವಾಣಿ, ರೇಖಾ ಪ್ರಕಾಶ್, ಸುಂದರೇಶ ಡಿ. ಉಡುವಾರೆ, ಕಾಮಾಕ್ಷಿ ಇನ್ನಿತರರು ಹಾಜರಿದ್ದರು.

# ಅವೈಜ್ಞಾನಿಕ ಕಾಮಗಾರಿ: ಪುರಸಭೆ ಅಧಿಕಾರಿಗಳ ವಿರುದ್ಧ ಪ್ರತಿಭಟನೆ

• ಪ್ರಜೋದಯ ವರದಿ

**ಅರಕಲಗೂಡು:** ಪಟ್ಟಣದಲ್ಲಿ ನಡೆಯುತ್ತಿರುವ 6 ಕೋ.ರೂ. ವೆಚ್ಚದ ರಸ್ತೆ, ಪುಟ್‌ಪಾತ್ ಹಾಗು ಚರಂಡಿ ಅಭಿವೃದ್ಧಿ ಕಾಮಗಾರಿಯಲ್ಲಿ ಕಳಪೆ ಗುಣ ಮಟ್ಟ ಮತ್ತು ಅವೈಜ್ಞಾನಿಕ ವಿಧಾನ ಅನುಸರಿಸ ಲಾಗುತ್ತಿದೆ ಎಂದು ಆರೋಪಿಸಿ ರೈತ ಸಂಘದ ಸದಸ್ಯರು ಪುರಸಭೆ ಅಧಿಕಾರಿಗಳ ವಿರುದ್ಧ ಪ್ರತಿಭಟನೆ ನಡೆಸಿದರು.



ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ನಾಗೇಂದ್ರ ಕುಮಾರ್ ಹಾಗು ಇಂಜಿನೀಯರ್ ಶೇಖರ್ ಅವರನ್ನು ಅಡ್ಡಗಟ್ಟಿ ತೀವ್ರ ಆಕ್ರೋಶ ವ್ಯಕ್ತಪಡಿಸಿದರು.

ಪಟ್ಟಣದಲ್ಲಿ ಹಾದು ಹೋಗಿರುವ ರಾಜ್ಯ ಹೆದ್ದಾರಿ ರಸ್ತೆಯನ್ನು 6 ಕೋ. ರೂ. ವೆಚ್ಚದಲ್ಲಿ 1 ಕಿ.ಮೀ. ರಸ್ತೆ, ಪುಟ್‌ಪಾತ್ ಹಾಗು ಚರಂಡಿ ಕಾಮಗಾರಿ ನಿರ್ವಹಿಸಲಾಗುತ್ತಿದೆ. ಈಗಾಗಲೇ ರಸ್ತೆ ಅಭಿವೃದ್ಧಿ ಕಾರ್ಯ ಪೂರ್ಣಗೊಂಡಿದೆ. ಆದರೆ ರಸ್ತೆ ಕಾಮಗಾರಿಯೂ ಕಳಪೆಯಿಂದ ಕೂಡಿರುವ ಪರಿಣಾಮ ಕೆಲವು ಕಡೆ ಡಾಂಬರ್ ಕಿತ್ತು ಬರುತ್ತಿದೆ. ರಸ್ತೆಗೆ ವೈಜ್ಞಾನಿಕವಾಗಿ ಡಾಂಬರ್ ಹಾಕದಿರುವ ಹಿನ್ನಲೆ ಮಳೆ ನೀರು ಮುಂದೆ ಹೋಗಲು ಸಾಧ್ಯವಾಗದೇ ಹಳ್ಳದಿಂದ ಕೂಡಿರುವ ರಸ್ತೆಯ ಮೇಲೆ ಎರಡು ಅಡಿ ನಿಂತು ಸಂಚಾರಕ್ಕೆ ತೊಂದರೆಯಾಗುತ್ತಿದೆ. ಅಲ್ಲದೆ ಇದೀಗ ರಸ್ತೆಯ ಎರಡೂ ಬದಿಗಳಲ್ಲಿ ನಿರ್ಮಿಸಲಾಗುತ್ತಿರುವ ಪುಟ್‌ಪಾತ್ ಕಾಮಗಾರಿಯೂ ನಿಯಮಾನುಸಾರ ನಡೆಯುತ್ತಿಲ್ಲವೆಂದು ಆರೋಪಿಸಿದರು.

ಕಾಮಗಾರಿ ಸ್ಥಳಕ್ಕೆ ಭೇಟಿ ನೀಡಿದ ರೈತ ಸಂಘದ ಸದಸ್ಯರು ಹಾಗು ಸಾರ್ವಜನಿಕರು, ಮಳೆಯ ನಡುವೆಯೇ ತರಾತುರಿಯಲ್ಲಿ ರಸ್ತೆ ಬದಿಗೆ ಗಾರೆ ಹಾಕುವ ಮೂಲಕ ಪುಟ್‌ಪಾತ್ ನಿರ್ಮಿಸಲಾಗುತ್ತಿದೆ. ವೈಜ್ಞಾನಿಕ ಮಾನದಂಡ ಪಾಲಿಸದೆ ಕಾಮಗಾರಿ ನಡೆಸಲಾಗುತ್ತಿದ್ದು, ಸಾರ್ವಜನಿಕರ ತೆರಿಗೆ ಹಣ ದುರುಪಯೋಗವಾಗುತ್ತಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ರಸ್ತೆ ಗಡಿಯನ್ನು ಪಟ್ಟಣ ಪಂಚಾಯಿತಿ ಅಧಿಕಾರಿಗಳು ಹಾಗು ಲೋಕೋಪಯೋಗಿ ಇಲಾಖೆ ಇಂಜಿನೀಯರ್‌ಗಳು ಜಂಟಿಯಾಗಿ ಗುರುತಿಸಿದ ಬಳಿಕವೇ ರಸ್ತೆಗಿಂತ ಸ್ವಲ್ಪ ಎತ್ತರದಲ್ಲಿ ಪುಟ್‌ಪಾತ್ ನಿರ್ಮಿಸಬೇಕು. ಇಲ್ಲವಾದರೆ ಕಳಪೆ ಹಾಗು ಅವೈಜ್ಞಾನಿಕವಾಗಿ ನಿರ್ಮಿಸಿರುವ ಕಾಮಗಾರಿಯನ್ನು ಜೆಸಿಬಿ ಮೂಲಕ ತೆರವುಗೊಳಿಸಲು ಮುಂದಾಗ ಬೇಕಾಗುತ್ತದೆಂದು ಪ್ರತಿಭಟನಾಕಾರರು ಎಚ್ಚರಿಕೆ ನೀಡಿದರು.

ಪ್ರತಿಭಟನೆಯಲ್ಲಿ ರೈತ ಸಂಘದ ಅಧ್ಯಕ್ಷ ಭುವನೇಶ್, ಹಲಗಯ್ಯ, ಪುರುಷೋತ್ತಮಗೌಡ, ಗೋವಿಂದಣ್ಣ, ಅಶೋಕ್, ಹೊಂಬೇಗೌಡ, ರಮೇಶ್, ಹನುಮಂತ, ರವಿ ಮತ್ತಿತರರಿದ್ದರು.

# ಜೆಡಿಎಸ್ ಮುಖಂಡ ಸಿದ್ದೇಗೌಡ ನಿಧನ

• ಪ್ರಜೋದಯ ವರದಿ



**ಬೇಲೂರು:** ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ, ಜೆಡಿಎಸ್ ಮುಖಂಡ ಸಿದ್ದೇಗೌಡ (70) ಅವರು ನಿಧನರಾದರು.

ತಾಲ್ಲೂಕಿನ ಹೆಬ್ಬಾಳು ಗ್ರಾಮದ ಸಿದ್ದೇಗೌಡ ಅವರು ವಯೋಸಹಜ ಕಾಯಿಲೆಯಿಂದ ಬಳಲುತ್ತಿದ್ದರು. ಚಿಕಿತ್ಸೆ ಫಲಕಾರಿ ಯಾಗದೆ ಕೊನೆಯುಸಿರೆಳೆದಿದ್ದಾರೆ. ಸಿದ್ದೇಗೌಡ ಅವರು, ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡ ಅವರ ಅತ್ಯಂತ ಆಪ್ತ ವಲಯದಲ್ಲಿ ಗುರುತಿಸಿಕೊಂಡಿದ್ದರು. ತಾಲ್ಲೂಕಿನಲ್ಲಿ ಜೆಡಿಎಸ್ ಪಕ್ಷದ ಯಾವುದೇ ಚುನಾವಣೆ ಎದುರಾದರೂ ಸಿದ್ದೇಗೌಡರ ನೇತೃತ್ವದಲ್ಲಿಯೇ ಮೊದಲ ಸಭೆ ನಡೆಯುತ್ತಿತ್ತು. ಆ ಮಟ್ಟಿಗೆ ಅವರು ಪಕ್ಷದ ಸಂಘಟನೆಯಲ್ಲಿ ಪ್ರಮುಖ ಪಾತ್ರ ವಹಿಸಿದ್ದರು.

ಮಾಜಿ ಸಚಿವ ಹೆಚ್.ಡಿ.ರೇವಣ್ಣ ಅವರೊಂದಿಗೂ ನಿಕಟ ಬಾಂಧವ್ಯ ಹೊಂದಿದ್ದ ಸಿದ್ದೇಗೌಡರ ಅಗಲಿಕೆ ಜೆಡಿಎಸ್ ಪಕ್ಷಕ್ಕೆ ತುಂಬಲಾರದ ನಷ್ಟವುಂಟು ಮಾಡಿದೆ. ಹುಟ್ಟೂರಿನಲ್ಲಿ ಮಂಗಳವಾರ ಅಂತ್ಯಕ್ರಿಯೆ ನೆರವೇರಿತು.

ಸಿದ್ದೇಗೌಡ ಅವರ ನಿಧನಕ್ಕೆ ಪಕ್ಷದ ಗಣ್ಯರು ಹಾಗು ಅಭಿಮಾನಿಗಳು ಸಂತಾಪ ಸೂಚಿಸಿದ್ದಾರೆ.

ಸ್ಥಳೀಯ ಶಾಸಕ ಹೆಚ್.ಕೆ.ಸುರೇಶ್, ಹೆಚ್‌ಡಿಸಿಸಿ ಬ್ಯಾಂಕ್ ಜಿಲ್ಲಾ ನಿರ್ದೇಶಕ ನಾಗರಾಜ್ ಮತ್ತಿತರರು ಸಂತಾಪ ಸಲ್ಲಿಸಿದ್ದಾರೆ.

# ಅಧಿಕಾರಕ್ಕಾಗಿ ಸಂವಿಧಾನ ಬದಿಗಿಟ್ಟಿದ್ದು ಕಾಂಗ್ರೆಸ್

» ಮೊದಲನೇ ಪುಟದಿಂದ

ಅತೀ ದೊಡ್ಡ ಪಕ್ಷವಾಗಿ ಬೆಳೆದು ನಿಂತಿದೆ ಎಂದು ಹೇಳಿದರು.

ನಾವೆಲ್ಲಾ ತುರ್ತು ಪರಿಸ್ಥಿತಿ ಹೋರಾಟದಲ್ಲಿ ಭಾಗವಹಿಸಿಲ್ಲ. ಆದರಿಂದ ನಿಮ್ಮ ಅನುಭವ ಕೇಳುವ ಜೊತೆಗೆ ಹೋರಾಟ ನಡೆಸಿದ ಸ್ವಯಂ ಸೇವಕರನ್ನು ಸನ್ಮಾನಿಸುವ ಅವಕಾಶ ಸಿಕ್ಕಿರುವುದು ನಮ್ಮ ಸೌಭಾಗ್ಯ ಎಂದೇ ಭಾವಿಸಿದ್ದೇನೆ. ನಿಮ್ಮೆಲ್ಲ ತ್ಯಾಗ, ಹೋರಾಟದ ಫಲವಾಗಿ ದೇಶದಲ್ಲಿಂದು ಅಪಾರ ಸಂಖ್ಯೆಯ ಬಜೆಪಿ ಶಾಸಕರಿದ್ದಾರೆ. ನಿಮ್ಮಿಂದಲೇ ದೇಶಕ್ಕಿಂದು ಸಮರ್ಥ ಪ್ರಧಾನ ಮಂತ್ರಿ ಸಿಕ್ಕಿದ್ದಾರೆಂದರು.

ಬಿಜೆಪಿ ಮೈಸೂರು ವಿಭಾಗದ ಪ್ರಭಾರಿ ಮರುಳಾಪುರ ಸ್ವಾಮಿ ಅವರು ಮಾತನಾಡಿ, ತುರ್ತು ಪರಿಸ್ಥಿತಿ ಘೋಷಣೆಯಾಗಿ 51ವರ್ಷಗಳು ಕಳೆದರೂ ಅದು ಭಾರತೀಯ ಪ್ರಜಾಪ್ರಭುತ್ವದ ಇತಿಹಾಸದಲ್ಲಿನ ಕರಾಳ ಅಧ್ಯಾಯವಾಗಿ ಉಳಿದಿದೆ. ಆ ಅವಧಿಯಲ್ಲಿ ಸಂವಿಧಾನದ ಆಶಯಗಳಿಗೆ ಧಕ್ಕೆ ಉಂಟಾಗಿದ್ದು, ಪ್ರಜಾ ಪ್ರಭುತ್ವದ ಮೌಲ್ಯಗಳು ಹತ್ತಿಕ್ಕಲ್ಪಟ್ಟವು ಎಂದು ಹೇಳಿದರು.

ಇತಿಹಾಸದ ಘಟನೆಗಳನ್ನು ಮರೆಯದೆ ಅವುಗಳಿಂದ ಪಾಠ ಕಲಿಯಬೇಕು. ದೇಶದ ಸ್ವಾತಂತ್ರ್ಯಕ್ಕಾಗಿ ಬ್ರಿಟೀಷರ ವಿರುದ್ಧ ನಡೆದ ಹೋರಾಟದಂತೆಯೇ ತುರ್ತು ಪರಿಸ್ಥಿತಿಯ ವಿರುದ್ಧವೂ ಅನೇಕರು ಹೋರಾಡಿದ್ದರು. ತುರ್ತು ಪರಿಸ್ಥಿತಿ ವೇಳೆ ದೇಶದಾದ್ಯಂತ ಸಾವಿರಾರು ಜನರನ್ನು ಬಂಧಿಸಲಾಗಿತ್ತು. ಅನೇಕರು ಜೈಲು ಶಿಕ್ಷೆ ಅನುಭವಿಸಿದ್ದು, ಅವರ ನೋವು ಮತ್ತು ತ್ಯಾಗವನ್ನು ಇಂದಿನ ಪೀಳಿಗೆ ಅರಿತುಕೊಳ್ಳಬೇಕು. ಧಾರ್ಮಿಕ ಸ್ವಾತಂತ್ರ್ಯ, ಪತ್ರಿಕಾ ಸ್ವಾತಂತ್ರ್ಯ ಹಾಗು ನ್ಯಾಯಾಂಗದ ಸ್ವಾಯತ್ತತೆ ಸೇರಿ ಮೂಲಭೂತ ಹಕ್ಕುಗಳನ್ನು ಕಿತ್ತುಕೊಳ್ಳಲಾಗಿತ್ತು ಎಂದು ಹೇಳಿದರು.

ಅಖಂಡ ಭಾರತದ ನಿರ್ಮಾಣದಲ್ಲಿ ಸರ್ದಾರ್ ವಲ್ಲಭಭಾಯಿ ಪಟೇಲ್ ಅವರ ಕೊಡುಗೆ ಅಪಾರ. ಪ್ರಧಾನಿ ನರೇಂದ್ರ ಮೋದಿ ಅವರ ನೇತೃತ್ವದಲ್ಲಿ ದೇಶ ಅಭಿವೃದ್ಧಿಯತ್ತ ಸಾಗುತ್ತಿದೆ. ಶಿಕ್ಷಣ, ಸಾಮಾಜಿಕ ಹಾಗೂ ಆರ್ಥಿಕ ಕ್ಷೇತ್ರಗಳಲ್ಲಿ ಇನ್ನಷ್ಟು ಸುಧಾರಣೆ ಅಗತ್ಯವಿದ್ದು, ಸಮಾಜ ಮತ್ತು ರಾಷ್ಟ್ರದ ಮೇಲಿನ ಜವಾಬ್ದಾರಿಯನ್ನು ಪ್ರತಿಯೊಬ್ಬರೂ ನಿಭಾಯಿಸಬೇಕು. ಪ್ರಸ್ತುತ ಅಧಿಕಾರದ ರಾಜಕಾರಣ ಬದಲಾಗಿದ್ದು, ಆಂದೋಲನಗಳ ಪರಿಕಲ್ಪನೆ ಕ್ಷೀಣಿಸುತ್ತಿದೆ. ಕರ್ತವ್ಯವು ಹಕ್ಕಾಗಿ, ಸೇವೆಯು ವೃತ್ತಿಯಾಗಿ ಪರಿವರ್ತನೆಯಾಗಿರುವುದು ಆತಂಕಕಾರಿ ಬೆಳವಣಿಗೆಯಾಗಿದೆ ಎಂದರು.

ತುರ್ತು ಪರಿಸ್ಥಿತಿ ಸಂದರ್ಭದ ಹೋರಾಟಗಾರ ಸತ್ಯನಾರಾಯಣ ಗುಪ್ತ ಮಾತನಾಡಿ, ಅಧಿಕಾರ ಉಳಿಸಿಕೊಳ್ಳುವ ಉದ್ದೇಶದಿಂದ ಅಂದಿನ ಪ್ರಧಾನಿ ಇಂದಿರಾ ಗಾಂಧಿ ಅವರು ದೇಶದಲ್ಲಿ ತುರ್ತು ಪರಿಸ್ಥಿತಿ ಹೇರಿದರು. ತುರ್ತು ಪರಿಸ್ಥಿತಿಯನ್ನು ವಿರೋಧಿಸಿ ರಾಷ್ಟ್ರೀಯ ಸ್ವಯಂಸೇವಕ ಸಂಘದ ಕಾರ್ಯಕರ್ತರು ವ್ಯಾಪಕ ಹೋರಾಟ ನಡೆಸಿದರು. ಅನೇಕರು ಜೈಲು ಸೇರಿದ್ದು, ಭೂಗತವಾಗಿ ಕಾರ್ಯನಿರ್ವಹಿಸಿದ್ದ ಕಾರ್ಯಕರ್ತರೂ ಹೋರಾಟಕ್ಕೆ ಮಹತ್ವದ ಕೊಡುಗೆ ನೀಡಿದರೆಂದರು.

ತುರ್ತು ಪರಿಸ್ಥಿತಿ ಸಂದರ್ಭದಲ್ಲಿ ಹೋರಾಟ ನಡೆಸಿ ಸೆರೆವಾಸ ಅನುಭವಿಸಿದ್ದವರನ್ನು ಕಾರ್ಯಕ್ರಮದಲ್ಲಿ ಸನ್ಮಾನಿಸಲಾಯಿತು. ಬಿಜೆಪಿ ಜಿಲ್ಲಾಧ್ಯಕ್ಷ ಸಿದ್ದೇಶ್ ನಾಗೇಂದ್ರ, ಪ್ರಧಾನ ಕಾರ್ಯದರ್ಶಿ ಅಮಿತ್ ಶೆಟ್ಟಿ ಇದ್ದರು.

**ಹೋರಾಟಗಾರರ ತ್ಯಾಗ ಸ್ಮರಿಸಿ**

ದೇಶದ ಪ್ರಜಾಪ್ರಭುತ್ವ ಉಳಿವಿಗಾಗಿ ಅನೇಕರು ತಮ್ಮ ಮನೆ, ಆಸ್ತಿ, ಆರೋಗ್ಯ ಮತ್ತು ವೈಯಕ್ತಿಕ ಬದುಕನ್ನು ತ್ಯಾಗ ಮಾಡಿದರು. ಕಷ್ಟ-ನಷ್ಟಗಳ ನಡುವೆಯೂ ದೇಶಸೇವೆಗೆ ತಮ್ಮನ್ನು ಸಮರ್ಪಿಸಿಕೊಂಡ ಹೋರಾಟಗಾರರ ತ್ಯಾಗವನ್ನು ಸದಾ ಸ್ಮರಿಸಬೇಕೆಂದು ತುರ್ತು ಪರಿಸ್ಥಿತಿ ಸಂದರ್ಭದ ಹೋರಾಟಗಾರ ಸತ್ಯನಾರಾಯಣ ಗುಪ್ತ ಅವರು ಹೇಳಿದರು.

# ಸರ್ಕಾರಿ ಶಾಲೆಗಳ ಫಲಿತಾಂಶ ಆಶಾದಾಯಕ: ಬಾಲಕೃಷ್ಣ



• ಪ್ರಜೋದಯ ವರದಿ

**ಚನ್ನರಾಯಪಟ್ಟಣ:** ಸರ್ಕಾರಿ ಶಾಲೆಗಳು ಪ್ರತಿವರ್ಷ ಉತ್ತಮ ಫಲಿತಾಂಶ ದಾಖಲಿಸುತ್ತಿದ್ದು, ಗುಣಮಟ್ಟದ ಶಿಕ್ಷಣಕ್ಕೆ ಆದ್ಯತೆ ನೀಡಲಾಗುತ್ತಿದೆಂದು ಶಾಸಕ ಸಿ.ಎನ್.ಬಾಲಕೃಷ್ಣ ಅವರು ತಿಳಿಸಿದರು.

ಪಟ್ಟಣದ ಪೇಟೆ ಕರ್ನಾಟಕ ಪಬ್ಲಿಕ್ ಶಾಲೆಯಲ್ಲಿ ಆಯೋಜಿಸಿದ್ದ 2026-27ನೇ ಸಾಲಿನ ಪ್ರಥಮ ಪೋಷಕರ ಸಭೆಉದ್ಘಾಟಿಸಿ ಮಾತನಾಡಿದ ಅವರು, ವಿದ್ಯಾರ್ಥಿಗಳ ಭವಿಷ್ಯ ರೂಪಿಸಲು ಸರ್ಕಾರಿ ಶಾಲೆಗಳಲ್ಲಿ ಗುಣಮಟ್ಟದ ಶಿಕ್ಷಣಕ್ಕೆ ಆದ್ಯತೆ ನೀಡಿ ತಂತ್ರಜ್ಞಾನ ಆಧಾರಿತ ಕಲಿಕೆಗೆ ಉತ್ತೇಜನ ನೀಡಲಾಗುತ್ತಿದೆ. ಸುಸಜ್ಜಿತ ಪ್ರಯೋಗಾಲಯ ನಿರ್ಮಾಣ ಮಾಡಿ ವಿಜ್ಞಾನ ಮತ್ತು ಕಂಪ್ಯೂಟರ್ ಶಿಕ್ಷಣಕ್ಕೆ ಆದ್ಯತೆ ನೀಡಿ, ಉತ್ತಮ ವಾತಾವರಣದಲ್ಲಿ ಶುದ್ಧ ಕುಡಿಯುವ ನೀರು ಮತ್ತು ಶೌಚಾಲಯ ವ್ಯವಸ್ಥೆ ಮಾಡಲಾಗಿದೆ. ತರಬೇತಿ ಹೊಂದಿದ ಶಿಕ್ಷಕರಿಂದ ನಿರಂತರ ಆಧುನಿಕ ತರಬೇತಿ ಸೇರಿ ಮೂಲ ಸೌಕರ್ಯಕ್ಕೆ ಅಗತ್ಯ ಕ್ರಮ ಕೈಗೊಳ್ಳಲಾಗಿದೆ ಎಂದರು.

ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ತಾಲ್ಲೂಕು ಹಾಸನ ಜಿಲ್ಲೆಗೆ ದ್ವಿತೀಯ ಸ್ಥಾನ ಗಳಿಸಿರುವುದು ಹೆಮ್ಮೆಯ ವಿಷಯ. ತಾಲ್ಲೂಕಿನ ಶೈಕ್ಷಣಿಕ ಸಾಧನೆಗೆ ಇದು ಹೆಮ್ಮೆಯ ವಿಷಯ ಎಂದರು.

ಸರ್ಕಾರಿ ಶಾಲೆಗಳು ಉತ್ತಮವಾಗಿ ಬೆಳೆಯಬೇಕಾದರೆ ಪೋಷಕರು ಮತ್ತು ಶಾಲಾ ಶಿಕ್ಷಕರು ಸಮಾನವಾಗಿ ಸ್ಪಂದಿಸಿದಾಗ ಮಾತ್ರ ಉಳಿಯಲು ಸಾಧ್ಯವಾಗುತ್ತದೆ. ಸರ್ಕಾರಿ ಶಾಲೆಗಳಲ್ಲಿ ಶಿಕ್ಷಕರ ಮಾರ್ಗದರ್ಶನದಲ್ಲಿ ವಿದ್ಯಾರ್ಥಿಗಳು ಉತ್ತಮ ಅಂಕಗಳೊಂದಿಗೆ ಸಾಮಾಜಿಕ ಮೌಲ್ಯಗಳನ್ನು ಕಲಿಯಲು ಸಹಕಾರಿಯಾಗುತ್ತದೆ. ಶಾಲೆಯಲ್ಲಿ ನಡೆಯುವ ಪಾಠದ ಜೊತೆಗೆ ಮನೆ ಯಲ್ಲಿಯೂ ಸಹ ಪೋಷಕರು ತಮ್ಮ ಮಕ್ಕಳ ವಿದ್ಯಾಭ್ಯಾಸದ ಕಡೆ ಗಮನ ಹರಿಸಿದಾಗ ಖಾಸಗಿ ಶಾಲೆಗಿಂತ ಕಡಿಮೆ ಇಲ್ಲ ಎಂಬಂತೆ ಸರಿಸಮಾನವಾಗಿ ಕಲಿಕೆಯಲ್ಲಿ ಮುಂದುವರೆದು ಸಮಾಜ ದಲ್ಲಿ ಉತ್ತಮ ನಾಗರಿಕರಾಗಲು ಸಹಕಾರಿಯಾಗುತ್ತದೆ. ಮಕ್ಕಳ ಶೈಕ್ಷಣಿಕ ಬೆಳವಣಿಗೆಯಲ್ಲಿ ಪೋಷಕರ ಸಭೆ ಅವಶ್ಯಕ. ಇಂತಹ ಸಭೆಗಳಿಗೆ ವಿಶೇಷವಾಗಿ ಪೋಷಕರು ತಪ್ಪದೇ ಹಾಜರಾಗಬೇಕೆಂದರು.

ಕ್ಷೇತ್ರ ಶಿಕ್ಷಣಾಧಿಕಾರಿ ಹೆಚ್.ಹೆಚ್. ಸತೀಶ್, ಕ್ಷೇತ್ರ ಸಂಪನ್ಮೂಲ ಸಮನ್ವಯ ಅಧಿಕಾರಿ ಕೆ.ಎನ್.ಅನಿಲ್, ಪೇಟೆ ಪ್ರೌಢಶಾಲೆಯ ಮುಖ್ಯ ಶಿಕ್ಷಕಿ ನೇತ್ರಾವತಿ, ರಾಜ್ಯ ಪ್ರೌಢಶಾಲಾ ಶಿಕ್ಷಕರ ಸಂಘದ ಪ್ರಧಾನ ಕಾರ್ಯದರ್ಶಿ ದೇವರಾಜೇಗೌಡ, ಎಪಿಎಂಸಿ ಮಾಜಿ ಅಧ್ಯಕ್ಷ ವಳಗೆರೆಹಳ್ಳಿ ಮಂಜುನಾಥ್, ಶಾಲಾ ಶಿಕ್ಷಕ ವೃಂದ ಸೇರಿ ಮತ್ತಿತರರಿದ್ದರು.

# ಮಹಿಳೆ ಕೊಲೆ: ಅಪರಾಧಿಗೆ ಜೀವಾವಧಿ ಶಿಕ್ಷೆ

• ಪ್ರಜೋದಯ ವರದಿ

**ಹಾಸನ:** ವಿವಾಹಿತ ಮಹಿಳೆ ಮೇಲೆಅತ್ಯಾಚಾರಕ್ಕೆ ಯತ್ನಿಸಿ ಆಕೆ ಪ್ರತಿರೋಧ ತೋರಿದಾಗ ಕುಡು ಗೋಲಿನಿಂದ ಹಲ್ಲೆ ನಡೆಸಿ ಕೊಲೆ ಮಾಡಿದ್ದ ಅಪರಾಧಿಗೆ ಜೀವಾವಧಿ ಶಿಕ್ಷೆ ವಿಧಿಸಿ ಜಿಲ್ಲಾ ನ್ಯಾಯಾಲಯ ತೀರ್ಪು ನೀಡಿದೆ.

ತಾಲ್ಲೂಕಿನ ದೊಡ್ಡಪುರ ಗ್ರಾಮದ ಲತೇಶ್ ಅಪರಾಧಿ. 2022ರ ಮಾ.16ರಂದು ಅದೇ ಗ್ರಾಮದ ರೇವತಿ ಎಂಬುವವರನ್ನು ಕೊಲೆ ಮಾಡಿದ್ದ. ಮೃತ ಮಹಿಳೆಗೆ ಪತಿ, ಮಕ್ಕಳಿದ್ದರೂ ಲತೇಶ್ ಮೊದಲ ಪತಿಗೆ ವಿಚ್ಛೇದನ ಕೊಟ್ಟು ತನ್ನೊಂದಿಗೆ ಸಂಸಾರ ಮಾಡುವಂತೆ ಪೀಡಿಸುತ್ತಿದ್ದ. ಈ ವಿಚಾರವಾಗಿ ಇಬ್ಬರ ನಡುವೆ ಗಲಾಟೆ ಸಹ ನಡೆದಿದ್ದವು.

ಆ ದಿನ ಸಂಜೆ ರೇವತಿ ಮನೆ ಬಳಿ ಬಂದಿದ್ದ ಲತೇಶ್ ಅತ್ಯಾಚಾರಕ್ಕೆ ಮುಂದಾಗಿದ್ದಾಗ ಮಹಿಳೆ ತೀವ್ರ ವಿರೋಧ ಮಾಡಿದ್ದರಿಂದ ಕುಡುಗೋಲಿನಿಂದ ತಲೆ, ಎಡಗಣ್ಣು, ಮೊಣಕೈಗೆ ಹೊಡೆದಿದ್ದ ಪರಿಣಾಮ ರೇವತಿ ಸ್ಥಳದಲ್ಲೇ ಮೃತಪಟ್ಟಿದ್ದರು. ಈ ಸಂಬಂಧ ಪ್ರಕರಣ ದಾಖಲಿಸಿಕೊಂಡಿದ್ದ ಗ್ರಾಮಾಂತರ ಠಾಣೆ ಪೊಲೀಸರು ನ್ಯಾಯಾಲಯಕ್ಕೆದೋಷಾರೋಪಣಾಪಟ್ಟಿ ಸಲ್ಲಿಸಿದ್ದರು.

ಪ್ರಕರಣದ ವಿಚಾರಣೆ ನಡೆಸಿದ ಜಿಲ್ಲಾ 5ನೇ ಅಪರ ಮತ್ತು ಸತ್ರ ನ್ಯಾಯಾಧೀಶ ಹೆಚ್.ಆರ್.ರವಿಕುಮಾರ್ ಅವರು ಅಪರಾಧಿಗೆ ಜೀವಾವಧಿ ಶಿಕ್ಷೆ ಹಾಗು 20 ಸಾವಿರ ರೂ. ದಂಡ ವಿಧಿಸಿ ಜು. 4ರಂದು ತೀರ್ಪು ಪ್ರಕಟಿಸಿದ್ದಾರೆ. ಸರ್ಕಾರದ ಪರವಾಗಿ ಈ.ಡಿ.ಶ್ರೀನಿವಾಸ ವಾದ ಮಂಡಿಸಿದ್ದರು.

# ಮಳೆ ಹಾನಿ ಪರಿಹಾರ ಘೋಷಣೆಗೆ ಶಾಸಕ ಆಗ್ರಹ

• ಪ್ರಜೋದಯ ವರದಿ

**ಹಾಸನ:** ಸಕಲೇಶಪುರ ಹಾಗು ಆಲೂರು ತಾಲ್ಲೂಕಿನಲ್ಲಿ ಸುರಿಯುತ್ತಿರುವ ಧಾರಾಕಾರ ಮಳೆ ಮತ್ತು ಬಿರುಗಾಳಿಯಿಂದ ಜನಜೀವನ ಅಸ್ತವ್ಯಸ್ತಗೊಂಡಿದೆ. ಮಳೆ ಹಾನಿಗೆ ಸರ್ಕಾರ ತಕ್ಷಣ ಪರಿಹಾರ ಘೋಷಿಸಬೇಕೆಂದು ಶಾಸಕ ಸಿಮೆಂಟ್ ಮಂಜು ಅವರು ಒತ್ತಾಯಿಸಿದರು.

ಮಂಗಳವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮಲೆನಾಡು ಭಾಗದಲ್ಲಿ ಮಳೆ ಗಿಂತ ಬಿರುಗಾಳಿಯ ತೀವ್ರತೆ ಹೆಚ್ಚಾಗಿದ್ದು, ಅದರ ಪರಿಣಾಮ ಸಕಲೇಶಪುರ ತಾಲ್ಲೂಕಿನಲ್ಲಿ 171, ಆಲೂರು ತಾಲ್ಲೂಕಿನಲ್ಲಿ 56 ಹಾಗು ಕಟ್ಟಾಯ ಹೋಬಳಿಯಲ್ಲಿ 3 ಸೇರಿ ಒಟ್ಟು 230 ವಿದ್ಯುತ್ ಕಂಬಗಳು ನೆಲಕ್ಕುರುಳಿವೆ ಎಂದು ತಿಳಿಸಿದರು.

ಹಲವು ಗ್ರಾಮಗಳಲ್ಲಿ ಕಳೆದ ಮೂರ್ನಾಲ್ಕು ದಿನಗಳಿಂದ ವಿದ್ಯುತ್ ಸಂಪರ್ಕ ಕಡಿತ ಗೊಂಡಿದ್ದು, ಸಾರ್ವಜನಿಕರು ತೀವ್ರ ಸಂಕಷ್ಟ ಅನುಭವಿಸುತ್ತಿದ್ದಾರೆ. ನನ್ನ ಫೋನ್ ಕಾಲ್ ಸೆಂಟರ್‌ನಂತೆ ಆಗಿದೆ. ವಿದ್ಯುತ್ ಸಮಸ್ಯೆ ಕುರಿತು ನಿರಂತರವಾಗಿ ಜನರಿಂದ ಕರೆಗಳು ಬರುತ್ತಿವೆ ಎಂದು ಹೇಳಿದರು.

ವಿದ್ಯುತ್ ಇಲಾಖೆಯ ಅಧಿಕಾರಿಗಳೊಂದಿಗೆ ಈಗಾಗಲೇ ಮಾತುಕತೆ ನಡೆಸಿದ್ದು, ಸಾಧ್ಯವಾದಷ್ಟು ಬೇಗ ವಿದ್ಯುತ್ ಸಂಪರ್ಕ ಪುನಃಸ್ಥಾಪಿಸುವಂತೆ ಸೂಚಿಸಲಾಗಿದೆ. ಒಂದೆಡೆ ದುರಸ್ತಿ ಮಾಡಿದರೆ ಮತ್ತೊಂದೆಡೆ ಮರಗಳು ಹಾಗು ವಿದ್ಯುತ್ ಕಂಬಗಳು ಉರುಳುತ್ತಿರುವುದರಿಂದ ಕಾರ್ಯಾಚರಣೆಗೆ ಅಡಚಣೆ ಉಂಟಾಗುತ್ತಿದೆ. ಮಳೆಯ ಪರಿಣಾಮ ಸಕಲೇಶಪುರ ಪಟ್ಟಣದಲ್ಲಿ ತಡೆಗೋಡೆ ಕುಸಿದು ಎರಡು ಮನೆಗಳಿಗೆ ಹಾನಿಯಾಗಿದ್ದು, ಹಾನಿಗೊಳಗಾದ ಕುಟುಂಬಗಳಿಗೆ ಸೂಕ್ತ ಪರಿಹಾರ ನೀಡಬೇಕೆಂದು ಒತ್ತಾಯಿಸಿದರು.

ಹವಾಮಾನ ಇಲಾಖೆ ಮುಂದಿನ ಎರಡು ದಿನಗಳೂ ಭಾರೀ ಮಳೆಯ ಮುನ್ಸೂಚನೆ ನೀಡಿರುವ ಹಿನ್ನಲೆ ವಿದ್ಯಾರ್ಥಿಗಳ ಸುರಕ್ಷತೆಯ ದೃಷ್ಟಿಯಿಂದ ಬುಧವಾರ ಹಾಗು ಗುರು ವಾರವೂ ಸಕಲೇಶಪುರ ಮತ್ತು ಆಲೂರು ಭಾಗದ ಶಾಲೆ-ಕಾಲೇಜುಗಳಿಗೆ ರಜೆ ಘೋಷಿಸಬೇಕು ಎಂದು ಸರ್ಕಾರ ಮತ್ತು ಜಿಲ್ಲಾಡಳಿತವನ್ನು ಒತ್ತಾಯಿಸಿದರು.



# ಎಸ್‌ಐಆರ್ ವೇಳೆ ಶಿಕ್ಷಕಿ ಅಸ್ವಸ್ಥ

• ಪ್ರಜೋದಯ ವರದಿ



**ಹಾಸನ:** ಮತದಾರರ ಪಟ್ಟಿ ವಿಶೇಷ ಪರಿಷ್ಕರಣೆ (ಎಸ್‌ಐಆರ್) ಕಾರ್ಯದಲ್ಲಿ ತೊಡಗಿದ್ದ ಶಿಕ್ಷಕಿಯೊಬ್ಬರು ಏಕಾಏಕಿ ಅಸ್ವಸ್ಥಗೊಂಡು ಕುಸಿದು ಬಿದ್ದ ಘಟನೆ ನಗರದ ಚಿಪ್ಪಿನಕಟ್ಟೆಯಲ್ಲಿ ಮಂಗಳವಾರ ನಡೆದಿದೆ.

ಮೆಹಬೂಬ್ ನಗರ ಹಾಗು ಚಿಪ್ಪಿನಕಟ್ಟೆ ವ್ಯಾಪ್ತಿ ಯಲ್ಲಿ ಎಸ್‌ಐಆರ್ ಪ್ರಕ್ರಿಯೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಶಿಕ್ಷಕಿ ಜಕಿಯ ಅವರು, ಮತ ದಾರರ ಪರಿಷ್ಕರಣೆ ಕಾರ್ಯ ನಡೆಸುತ್ತಿದ್ದ ವೇಳೆ ತೀವ್ರ ಅಸ್ವಸ್ಥಗೊಂಡು ಕುಸಿದು ಬಿದ್ದರು. ಸ್ಥಳ ದಲ್ಲಿದ್ದ ಸ್ಥಳೀಯರು ಹಾಗು ಸಹೋದ್ಯೋಗಿಗಳು ಕೂಡಲೇ ಅವರನ್ನು ಆಸ್ಪತ್ರೆಗೆ ಕರೆದೊಯ್ದು ಚಿಕಿತ್ಸೆಗಾಗಿ ದಾಖಲಿಸಿದರು. ಪ್ರಸ್ತುತ ಅವರು ನಗರದ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ.

# 1.40 ಲಕ್ಷ ರೂ. ಬೆಲೆಯ ಚಿನ್ನಾಭರಣ ಕಳವು

• ಪ್ರಜೋದಯ ವರದಿ

**ಆಲೂರು:** ಮನೆಯ ಹಿಂಬಾಗಿಲು ಹಾಗು ಛಾವಣಿಯ ಹೆಂಚು ತೆಗೆದು ಒಳನುಗ್ಗಿರುವ ಕಳ್ಳರು 1.40 ಲಕ್ಷ ರೂ. ಮೌಲ್ಯದ ಚಿನ್ನಾಭರಣ ಕಳವು ಮಾಡಿರುವ ಘಟನೆ ತಾಲ್ಲೂಕಿನ ಹೆಮ್ಮಿಗೆ ಗ್ರಾಮದಲ್ಲಿ ನಡೆದಿದೆ.

ಮನೆ ಮಾಲೀಕರಾದ ಚಂದ್ರಮ್ಮ ಅವರು ಜು.5ರಂದು ಮನೆಗೆ ಬೀಗ ಹಾಕಿ ಕುಟುಂಬ ಸಮೇತ ಅಡಿಬೈಲು ರಂಗನಾಥಸ್ವಾಮಿ ದೇವಾಲಯಕ್ಕೆ ತೆರಳಿದ್ದರು. ಪೂಜೆ ಮುಗಿಸಿಕೊಂಡು ಸಂಜೆ ಬಂದಾಗ ಕಳ್ಳತನವಾಗಿರುವುದು ತಿಳಿದಿದೆ. ಬೀರುವಿನಲ್ಲಿಟ್ಟಿದ್ದ 6 ಗ್ರಾಂ ತೂಕದ ಚಿನ್ನದ ಸರ, 1 ಗ್ರಾಂನ 2 ಉಂಗುರ, 3 ಗ್ರಾಂನ ಒಂದು ಉಂಗುರ, 3 ಗ್ರಾಂ ತೂಕದ 2 ಜೊತೆ ಓಲೆ ಹಾಗು ಮಗುವಿನ ಬೆಳ್ಳಿ ಉಡದಾರ ಹಾಗು ಬೆಳ್ಳಿ ಬ್ರಾಸ್ ಲೈಟ್ ಮತ್ತು 3 ಸಾವಿರ ರೂ. ನಗದು ಅಪಹರಿಸಿದ್ದಾರೆ. ಪಟ್ಟಣ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಮನೆ ಬಾಗಿಲು ಮುರಿದು ಚಿನ್ನಾಭರಣ ಕಳವು

• ಪ್ರಜೋದಯ ವರದಿ

**ಹಾಸನ:** ಮನೆ ಬಾಗಿಲು ಮುರಿದು ಒಳನುಗ್ಗಿರುವ ಕಳ್ಳರು 25 ಗ್ರಾಂ ತೂಕದ ಚಿನ್ನಾಭರಣ ಹಾಗು 50 ಸಾವಿರ ರೂ. ನಗದು ಕಳವು ಮಾಡಿ ರುವ ಘಟನೆ ಅಶೋಕ ನಗರದಲ್ಲಿ ನಡೆದಿದೆ.

ನಿವಾಸಿ ಮಹದೇವಸ್ವಾಮಿ ಅವರು ಜು.4ರಂದು ಮದುವೆ ನಿಮಿತ್ತ ಮನೆಯ ಬಾಗಿಲಿಗೆ ಬೀಗ ಹಾಕಿಕೊಂಡು ಕುಟುಂಬ ಸಮೇತ ತೆರಳಿದ್ದರು. ಮಾರನೇ ದಿನ ಮನೆಗೆ ಬಂದಾಗ ಬಾಗಿಲು ಮುರಿದಿರುವುದು ಗೊತ್ತಾಗಿದೆ. ಬಲವಾದ ಆಯುಧ ದಿಂದ ಬೀಗ ಮುರಿದು ಒಳ ಪ್ರವೇಶಿಸಿ ರುವ ಕಳ್ಳರು ಬೀರುವಿನ ಲಾಕರ್ ಮುರಿದು 50 ಸಾವಿರ ರೂ. ನಗದು, 25 ಗ್ರಾಂ ತೂಕದ ಚಿನ್ನದ ಚೈನ್, ಚಿನ್ನದ ಓಲೆ, ಬೆಳ್ಳಿ ತಟ್ಟೆ, ಚೊಂಬು, ಬೆಳ್ಳಿಯ ದೀಪಾಲೆಯ ಕಂಬ, 2 ಜೊತೆ ಬೆಳ್ಳಿ ಕಾಲು ಚೈನ್ ಕಳವು ಮಾಡಿದ್ದಾರೆ. ನಗರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಬಲರಾಮನ ಪ್ರಾಣ ಪ್ರತಿಷ್ಠಾಪನೆ ಮಹೋತ್ಸವಕ್ಕೆ 113 ಕೋಟಿ ವೆಚ್ಚ

• ಪ್ರಜೋದಯ ವರದಿ

**ಅಯೋಧ್ಯೆ:** ರಾಮಮಂದಿರದಲ್ಲಿ ನಡೆದಿದೆ ಎನ್ನಲಾದ ದೇಣಿಗೆ ದುರುಪಯೋಗ ಕುರಿತು ತನಿಖೆ ನಡೆಯುತ್ತಿರುವ ಬೆನ್ನಲ್ಲೇ ರಾಮಮಂದಿರ ಟ್ರಸ್ಟ್ ಈ ಹಿಂದೆ ಆಯೋಜಿಸಿದ್ದ ಪ್ರಮುಖ ಕಾರ್ಯಕ್ರಮಗಳಿಗೆ ವ್ಯಯಿಸಿದ್ದ ಹಣದ ಬಗ್ಗೆಯೂ ತನಿಖಾ ಸಂಸ್ಥೆಗಳ ನಿಗಾ ವಹಿಸಿವೆ.

# ಸರ್ಕಾರಿ ಶಾಲೆಗಳ ಬಲವರ್ಧನೆಗೆ ಹೋರಾಟದ ಎಚ್ಚರಿಕೆ

• ಪ್ರಜೋದಯ ವರದಿ

**ಹಾಸನ:** ಸರ್ಕಾರಿ ಶಾಲೆಗಳ ಬಲ ವರ್ಧನೆ, ನಾಮಫಲಕಗಳಲ್ಲಿ ಕನ್ನಡ ಕಡ್ಡಾಯಗೊಳಿಸುವಂತೆ ಆಗ್ರಹಿಸಿ ಹೋರಾಟ ನಡೆಸಲಾಗುವುದೆಂದು ಕರ್ನಾಟಕ ಹೊಯ್ಸಳ ವೇದಿಕೆ ಅಧ್ಯಕ್ಷ ನವೀನ್ ಅವರು ಎಚ್ಚರಿಕೆ ನೀಡಿದರು.



ಸುದ್ದಿಗೋಷ್ಠಿಯಲ್ಲಿ ಮಂಗಳವಾರ ಮಾತನಾಡಿದ ಅವರು, ರಾಜ್ಯದ ಬಹುತೇಕ ಸರ್ಕಾರಿ ಶಾಲೆಗಳಲ್ಲಿ ಮೂಲಸೌಕರ್ಯಗಳಿಲ್ಲ. ಕಟ್ಟಡ, ಶೌಚಾಲಯ, ಕುಡಿಯುವ ನೀರು, ಆಟದ ಮೈದಾನ ಹೀಗೆ ನಾನಾ ಸಮಸ್ಯೆಗಳಿಂದ ಮಕ್ಕಳು ಬಳಲುತ್ತಿ ದ್ದಾರೆ. ಸಮಸ್ಯೆಯ ಅರಿವಿದ್ದರೂ ಸರ್ಕಾರ ಹಾಗು ಜನಪ್ರತಿನಿಧಿಗಳು ಕಣ್ಮುಚ್ಚಿ ಕುಳಿತಿದ್ದಾರೆ. ಅಂಗಡಿ- ಮುಂಗಟ್ಟು, ಸರ್ಕಾರಿ ಕಚೇರಿಗಳಲ್ಲಿ ಶೇ.60ರಷ್ಟು ಕನ್ನಡ ಕಡ್ಡಾಯ ನ್ಯಾಯಾಲಯದ ಆದೇಶವಿದ್ದರೂ ರಾಜ್ಯದಲ್ಲಿ ಪಾಲನೆಯಾಗುತ್ತಿಲ್ಲ. ಇದನ್ನು ಕಟ್ಟುನಿಟ್ಟಾಗಿ ಜಾರಿಗೊಳಿಸ ಬೇಕಿದ್ದ ಸ್ಥಳೀಯ ಆಡಳಿತಾಧಿಕಾರಿಗಳು ನಿರ್ಲಕ್ಷ್ಯ ವಹಿಸುತ್ತಿದ್ದಾರೆಂದು ಆರೋಪಿಸಿದರು.

ಹಾಸನ ಜಿಲ್ಲೆಯಲ್ಲೂ ಮೂಲಸೌಕರ್ಯಗಳ ಸ್ಥಿತಿ ದಿನದಿಂದ ದಿನಕ್ಕೆ ಹದಗೆಡುತ್ತಿದೆ. ಜನರು ತೀವ್ರ ತೊಂದರೆ ಅನುಭವಿಸುತ್ತಿದ್ದಾರೆ. ಬಸ್ ನಿಲ್ದಾಣ, ರಸ್ತೆ ಮತ್ತು ಸಾರ್ವಜನಿಕ ಶೌಚಾಲಯಗಳ ನಿರ್ವಹಣೆ ಕೊರತೆ ಯಿಂದ ಬಳಕೆಗೆ ಯೋಗ್ಯವಾಗಿಲ್ಲವೆಂದು ದೂರಿದರು.

ಸರ್ಕಾರಿ ಕಚೇರಿಗಳಲ್ಲಿ ಸಾರ್ವಜನಿ ಕರಿಗೆ ಸ್ಪಂದನೆ ಇಲ್ಲದಂತಾಗಿದೆ. ಜನರ ಸಮಸ್ಯೆಗಳನ್ನು ಆಲಿಸಿ ತ್ವರಿತವಾಗಿ ಪರಿಹರಿಸುವ ಬದಲು ಅಧಿಕಾರಿಗಳು ಜವಾಬ್ದಾರಿಯಿಂದ ತಪ್ಪಿಸಿಕೊಳ್ಳುತ್ತಿದ್ದಾರೆ. ರಾಜ್ಯ ಸರ್ಕಾರ ಹಾಗು ಜನ ಪ್ರತಿನಿಧಿಗಳು ಜನರ ಸಂಕಷ್ಟಗಳನ್ನು ಅರಿತು ಅಭಿವೃದ್ಧಿಗೆ ಆದ್ಯತೆ ನೀಡಬೇಕೆಂದು ಒತ್ತಾಯಿಸಿದರು.

ಜಿಲ್ಲೆಯ ಸರ್ಕಾರಿ ಆಸ್ಪತ್ರೆ ಹಾಗು ಸರ್ಕಾರಿ ಶಾಲೆಗಳ ಮೂಲ ಸೌಕರ್ಯ ಸುಧಾರಿಸಿ, ಸಾರ್ವಜನಿಕರಿಗೆ ಗುಣಮಟ್ಟದ ಸೇವೆ ಒದಗಿಸಬೇಕು. ನಗರ ಪ್ರದೇಶಗಳಲ್ಲಿ ಪಾದಚಾರಿಗಳಿಗೆ ನಿರ್ಮಿಸಿರುವ ಫುಟ್‌ಪಾತ್‌ಗಳನ್ನು ವಾಹನಗಳು ಮತ್ತು ಅಂಗಡಿಗಳ ಅತಿಕ್ರಮಣದಿಂದ ಮುಕ್ತಗೊಳಿಸಿ, ಸುರಕ್ಷಿತವಾಗಿ ಓಡಾಡಲು ಅವಕಾಶ ಕಲ್ಪಿಸಬೇಕು ಎಂದು ಆಗ್ರಹಿಸಿದರು. ಈ ಎಲ್ಲಾ ಸಮಸ್ಯೆಗಳ ಪರಿಹಾರಕ್ಕೆ ಸಂಬಂಧಪಟ್ಟ ಅಧಿಕಾರಿಗಳು ತ್ವರಿತಗತಿಯಲ್ಲಿ ಕ್ರಮ ಕೈಗೊಳ್ಳ ದಿದ್ದರೆ ಹೋರಾಟ ನಡೆಸಲಾಗುವುದೆಂದು ಎಚ್ಚರಿಕೆ ನೀಡಿದರು.

ಈ ಸಂದರ್ಭದಲ್ಲಿ ಕರ್ನಾಟಕ ಹೊಯ್ಸಳ ವೇದಿಕೆ ಸಂಸ್ಥಾಪಕ ಮೋಹನ್‌ಗೌಡ, ಟ್ರೈಜಾ ನವೀನ್, ಸತೀಶ್‌ಗೌಡ, ಚಂದ್ರು ಹಾಗು ರಾಜೇಗೌಡ ಇತರರು ಇದ್ದರು.

# ಮನೆಗೆ ನುಗ್ಗಿದ್ದ ಕಳ್ಳನನ್ನು ಕಟ್ಟಿ ಹಾಕಿದ ಗ್ರಾಮಸ್ಥರು

• ಪ್ರಜೋದಯ ವರದಿ

**ಚನ್ನರಾಯಪಟ್ಟಣ:** ಮನೆಗಳ್ಳತನ ಮಾಡಲು ಯತ್ನಿಸಿದ ಕಳ್ಳನನ್ನು ಗ್ರಾಮಸ್ಥರು ಹಿಡಿದು ಕಟ್ಟಿ ಹಾಕಿ ಪೊಲೀಸರಿಗೆ ಒಪ್ಪಿಸಿದ ಘಟನೆ ತಾಲ್ಲೂಕಿನ ಮೆಳ್ಳಹಳ್ಳಿ ಗ್ರಾಮದಲ್ಲಿ ನಡೆದಿದೆ.



ಮಂಡ್ಯ ಜಿಲ್ಲೆ ನಾಗಮಂಗಲ ತಾಲ್ಲೂಕು ಬಲ್ಲವಳ್ಳಿ ಗ್ರಾಮದ ಪೃಥ್ವಿ ರಾಜ್ ಸಿಕ್ಕಿಬಿದ್ದಿರುವ ಕಳ್ಳ. ಮೆಳ್ಳಹಳ್ಳಿ ಗ್ರಾಮದ ಮೂಡಲ ಬೋರೆ ಪ್ರದೇಶದ ಆನಂದ್ ಎಂಬುವವರ ತೋಟದ ಮನೆಯಲ್ಲಿ ಸೋಮವಾರ ಬೆಳಿಗ್ಗೆ 10 ಗಂಟೆ ವೇಳೆಯಲ್ಲಿ ಕಳ್ಳತನಕ್ಕೆ ಯತ್ನಿಸಿದ್ದ. ಮನೆಯಲ್ಲಿ ಆನಂದ್ ಅವರ ತಾಯಿ ಒಬ್ಬರೇ ಇದ್ದು, ಮನೆಗೆ ಬೀಗ ಹಾಕಿ ಜಾನುವಾರುಗಳನ್ನು ಜಮೀನಿನಲ್ಲಿ ಕಟ್ಟಿ ಬರಲು ತೆರಳಿದ್ದರು. ಮನೆ ಮುಂದಿನ ಚಪ್ಪಲಿ ಕೆಳಗೆ ಇಟ್ಟಿದ್ದ ಕೀ ನೆರವಿನಿಂದ ಒಳ ಪ್ರವೇಶಿಸಿದ್ದ ಪೃಥ್ವಿರಾಜ್ ಕಳ್ಳತನದ ಪ್ರಯತ್ನದಲ್ಲಿದ್ದ. ಅದೇ ವೇಳೆಗೆ ಆನಂದ್ ಅವರ ತಾಯಿ ಬಂದಾಗ ಮನೆ ಮುಂದೆ ಬೈಕ್ ನಿಂತಿರುವುದನ್ನು ಕಂಡು ಒಳಗೆ ಹೋಗಿದ್ದಾರೆ. ಅಷ್ಟರಲ್ಲಿ ಪಕ್ಕದ ಜಮೀನಿನ ಶಿವರಾಜು ಎಂಬುವವರು ಕೆಲಸದ ಸಲುವಾಗಿ ಏಣಿ ಕೇಳಲು ಬಂದಿದ್ದಾರೆ. ಮನೆಯ ಒಳಗೆ ಯಾರೋ ಬಿರುವಿನ ಬಾಗಿಲು ತೆಗೆಯುವುದು ಹಾಗು ವಸ್ತುಗಳನ್ನು ಬಿಸಾಡುತ್ತಿರುವ ಶಬ್ದ ಕೇಳಿದೆ. ಕಳ್ಳ ಮನೆಯೊಳಗೆ ನುಗ್ಗಿರುವುದನ್ನು ಅರಿತ ಅವರು ಜೋರಾಗಿ ಕೂಗಿದಾಗ ಅಕ್ಕಪಕ್ಕದ ಜಮೀನಿನಲ್ಲಿ ಕೆಲಸ ಮಾಡುತ್ತಿದ್ದವರು ಓಡಿ ಬಂದಿದ್ದಾರೆ.

ಐದಾರು ಮಂದಿ ಯುವಕರು ದೊಣ್ಣೆ ಹಿಡಿದು ಬೆಡ್ ರೂಮ್‌ಗೆ ಹೋದಾಗ ಖದೀಮ ಮೂಲೆಯಲ್ಲಿ ನಿಂತಿರುವುದನ್ನು ನೋಡಿ, ಆತನ ಕೈಗಳನ್ನು ಹಿಂಬದಿಯಿಂದ ಕಟ್ಟಿ ಹೊರಗೆ ಕರೆ ತಂದಿದ್ದಾರೆ.

ಆತನ ವಿಳಾಸ ವಿಚಾರಿಸಿದಾಗ ನಾಗಮಂಗಲ ತಾಲ್ಲೂಕು ಬಲ್ಲವಳ್ಳಿ ಗ್ರಾಮದವನೆಂದು ತಿಳಿಸಿದ್ದಾನೆ. ದಯವಿಟ್ಟು ನನ್ನನ್ನು ಬಿಡಿ, ಮೊಬೈಲ್ ಶಾಪ್ ಇದೆ. ಇಬ್ಬರು ಮಕ್ಕಳಿದ್ದಾರೆ. ಮರ್ಯಾದೆ ಪ್ರಶ್ನೆ ತಪ್ಪಾಯ್ತು... ತಪ್ಪಾಯ್ತು...., ನಾನು ತುಂಬಾ ಸಾಲ ಮಾಡಿಕೊಂಡಿದ್ದೇನೆ, ವಿಧಿ ಇಲ್ಲದೆ ಈ ಕೆಲಸ ಮಾಡಿದೆ. ಇದಕ್ಕೂ ಮೊದಲು ನಾನು ಎಲ್ಲಿಯೂ ಕಳ್ಳತನ ಮಾಡಿಲ್ಲ. ನಾನು ಹೊಸಬ, ಏನು ಮಾಡಬೇಡಿ ಎಂದು ಕೇಳಿಕೊಂಡಿದ್ದಾನೆ.

ಸ್ಥಳೀಯರು ಹಿರೀಸಾವೆ ಪೊಲೀಸ್ ಠಾಣೆಗೆ ಕರೆ ಮಾಡಿ ಆತನನ್ನು ಪೊಲೀಸರಿಗೆ ಒಪ್ಪಿಸಿದ್ದಾರೆ. ಪೊಲೀಸರ ವಿಚಾರಣೆಯಲ್ಲಿ ಮತ್ತಷ್ಟು ಮಾಹಿತಿ ನೀಡಿರುವ ಆತ, ಕದಬಹಳ್ಳಿಯಲ್ಲಿ ಮೊಬೈಲ್ ಶಾಪ್ ಹೊಂದಿದ್ದು ಯಾವುದೇ ಸಾಲಬಾಧೆ ಇಲ್ಲ. ಆದರೂ ಕಳ್ಳತನ ರೂಢಿಸಿಕೊಂಡಿದ್ದಾನೆ. ಬೆಂಗಳೂರಿನ ವಿವಿಧೆಡೆ ಕಳ್ಳತನದಲ್ಲಿ ಭಾಗಿಯಾಗಿದ್ದು, ಈತನ ಮೇಲೆ ಪ್ರಕರಣ ದಾಖಲಾಗಿರುವುದು ತಿಳಿದುಬಂದಿದೆ.

# ಬೇಕರಿ ಉದ್ಯಮ ಬಲವರ್ಧನೆಗೆ ಅಗತ್ಯ ಕ್ರಮ

• ಪ್ರಜೋದಯ ವರದಿ

**ಹಾಸನ:** ಬೇಕರಿ ಉದ್ಯಮ ಬಲ ವರ್ಧನೆ ಹಾಗು ಬೆಳವಣಿಗೆ ಉದ್ದೇಶ ದಿಂದ ಹಾಸನ ಬೇಕರಿ ಸಂಘ, ಕರ್ನಾ ಟಕ ಬೇಕರಿ ಮತ್ತು ಸ್ವೀಟ್ಸ್ ಅಸೋಸಿ ಯೇಷನ್‌ಗೆ ವಿಲೀನವಾಗಿದೆ ಎಂದು ಅಸೋಸಿಯೇಷನ್ ರಾಜ್ಯ ಸಂಚಾಲಕ ಕೇಶವ ಅಯ್ಯಂಗಾರ್ ಅವರು ತಿಳಿಸಿದರು.



ಸುದ್ದಿಗೋಷ್ಠಿಯಲ್ಲಿ ಮಂಗಳವಾರ ಮಾತನಾಡಿದ ಅವರು, ಕರ್ನಾಟಕ ಬೇಕರಿ ಮತ್ತು ಸ್ವೀಟ್ಸ್ ಅಸೋಸಿಯೇಷನ್, ಹಾಸನ ಬೇಕರಿ ಓನರ್ಸ್ ಅಸೋಸಿಯೇಷನ್ ನಡುವಿನ ತಿಳುವಳಿಕೆ ಒಪ್ಪಂದ (ಎಂಒಯು) ಆಗಿರುವ ಹಿನ್ನಲೆಯಲ್ಲಿ ಹಾಸನ ಬೇಕರಿ ಓನರ್ಸ್ ಅಸೋಸಿಯೇ ಷನ್ ರಾಜ್ಯ ಸಂಘಕ್ಕೆ ಅಧಿಕೃತವಾಗಿ ವಿಲೀನಗೊಂಡಿದೆ ಎಂದು ಹೇಳಿದರು.

ರಾಜ್ಯದ ಬೇಕರಿ, ಸ್ವೀಟ್ಸ್ ಮತ್ತು ಕೆಫೆ ಉದ್ಯಮದ ಹಿತಾಸಕ್ತಿಗಾಗಿ ಕಾರ್ಯನಿರ್ವಹಿಸುತ್ತಿರುವ ಕರ್ನಾಟಕ ಬೇಕರಿ ಮತ್ತು ಸ್ವೀಟ್ಸ್ ಅಸೋಸಿಯೇಷನ್‌ಗೆ ಹಾಸನ ಸಂಘದ ಸದಸ್ಯತ್ವ ಸೇರ್ಪಡೆಯಾಗಿರುವುದರಿಂದ ಸಂಘದ ಒಟ್ಟು ಸದಸ್ಯರ ಸಂಖ್ಯೆ 2,000 ದಾಟಿದೆ ಎಂದು ಮಾಹಿತಿ ನೀಡಿದರು.

ಜಿಲ್ಲೆಯ ಸುಮಾರು 100 ಬೇಕರಿ, ಸ್ವೀಟ್ಸ್ ಹಾಗು ಕೆಫೆ ಉದ್ಯಮಿಗಳಿಗೆ ಆಹಾರ ಸುರಕ್ಷತೆ (ಫುಡ್ ಸೇಫ್ಟಿ) ಕುರಿತ ವಿಶೇಷ ತರಬೇತಿ ಕಾರ್ಯಕ್ರಮ ಆಯೋಜಿಸಲಾಗಿದೆ. ಗ್ರಾಹಕರಿಗೆ ಗುಣಮಟ್ಟದ ಹಾಗು ಸುರಕ್ಷಿತ ಆಹಾರ ಉತ್ಪನ್ನಗಳನ್ನು ಒದಗಿಸುವ ಉದ್ದೇಶದಿಂದ ಈ ತರಬೇತಿ ಹಮ್ಮಿಕೊಳ್ಳಲಾಗಿದೆ. ಅದಕ್ಕೆ ಅಧಿಕೃತ ಪ್ರಮಾಣ ಪತ್ರವನ್ನು ನೀಡಲಾಗುವುದೆಂದರು.

ಕರ್ನಾಟಕ ಬೇಕರಿ ಮತ್ತು ಸ್ವೀಟ್ಸ್ ಅಸೋಸಿಯೇಷನ್ ಎಲ್ಲಾ ಜಿಲ್ಲೆಗಳಲ್ಲೂ ಸಂಘಟನೆ ವಿಸ್ತರಣೆ ಹಾಗು ವಿಲೀನ ಕಾರ್ಯಕ್ರಮಗಳನ್ನು ಮುಂದುವರಿಸುತ್ತಿದ್ದು, ಆಸಕ್ತ ಬೇಕರಿ, ಸ್ವೀಟ್ಸ್ ಮತ್ತು ಕೆಫೆ ಉದ್ಯಮಿಗಳು ಸಂಘವನ್ನು ಸಂಪರ್ಕಿಸಿ ಸದಸ್ಯತ್ವ ಪಡೆಯಬಹುದೆಂದು ಮನವಿ ಮಾಡಿದರು.

ಹಾಸನ ಬೇಕರಿ ಒನರ್ಸ್ ಅಸೋಸಿಯೇಷನ್ ಜಿಲ್ಲಾಧ್ಯಕ್ಷ ಎಂ.ಆರ್. ಪ್ರಸಾದ್, ಕಾರ್ಯದರ್ಶಿ ಹರೀಶ್ ಕುಮಾರ್, ಡಾ.ಮಧು, ಶ್ರೀನಿವಾಸ್, ವೆಂಕಟೇಶ್, ಧರಣಿ,ವಿನಯ್ ಇದ್ದರು.

# ಇಂದು ಅರಕಲಗೂಡಿನಲ್ಲಿ ಆಶ್ರಯ ಸಮಿತಿ ಸಭೆ

• ಪ್ರಜೋದಯ ವರದಿ

**ಅರಕಲಗೂಡು:** ಪಟ್ಟಣ ಪಂಚಾಯಿತಿ ಸಭಾಂಗಣದಲ್ಲಿ ಜು.8ರಂದು ಶಾಸಕ ಎ.ಮಂಜು ಅವರ ಅಧ್ಯಕ್ಷತೆಯಲ್ಲಿ ಆಶ್ರಯ ಸಮಿತಿ ಸಭೆ ಕರೆಯಲಾಗಿದ್ದು, ಸಭೆಯಲ್ಲಿ ನೆನಗುದಿಗೆ ಬಿದ್ದಿರುವ 353 ಆಶ್ರಯ ನಿವೇಶನಗಳನ್ನು ತ್ವರಿತವಾಗಿ ಅರ್ಹಫಲಾನುಭವಿಗಳಿಗೆ ವಿತರಣೆ ಮಾಡಲು ಶಾಸಕರು, ಸಮಿತಿ ಸದಸ್ಯರು ಕ್ರಮ ಕೈಗೊಳ್ಳಬೇಕೆಂದು ಮಾಜಿ ಪಟ್ಟಣ ಪಂಚಾಯಿತಿ ಸದಸ್ಯ ಎನ್. ರವಿಕುಮಾರ್ ಅವರು ಆಗ್ರಹಿಸಿದರು.



ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಕಳೆದ 20ವರ್ಷಗಳ ಹಿಂದೆ 470ಕ್ಕೂ ಅಧಿಕ ಆಶ್ರಯ ನಿವೇಶನಗಳನ್ನು ಅಭಿವೃದ್ಧಿಗೊಳಿಸಿ ಆರಂಭದಲ್ಲಿ 120 ಮಂದಿಗೆ ನಿವೇಶನ ಹಂಚಿಕೆ ಮಾಡಲಾಗಿತ್ತು. ನಂತರದಲ್ಲಿ ಬದಲಾದ ರಾಜಕೀಯ ಹಿನ್ನಲೆಯಲ್ಲಿ ಬಾಕಿ ಉಳಿದಿರುವ ನಿವೇಶನಗಳನ್ನು ಹಂಚಿಕೆ ಮಾಡಲು ಸಾಧ್ಯವಾಗಿಲ್ಲ. 20 ವರ್ಷಗಳ ಹಿಂದೆ ಪಟ್ಟಣ ಅಷ್ಟೊಂದು ಬೆಳವಣಿಗೆಯಾಗಿರಲ್ಲಿ. ಇಂದು 5 ಸಾವಿರಕ್ಕೂ ಹೆಚ್ಚಿನ ಜನವಸತಿ ಪ್ರದೇಶ ಹಾಗು 17 ವಾರ್ಡ್‌ಗಳನ್ನು ಹೊಂದಿದೆ. ಈ ಹಂತದಲ್ಲಿ ಪ್ರತಿ ವಾರ್ಡ್‌ನಲ್ಲಿ 20 ಮಂದಿ ಅರ್ಹ ಫಲಾನುಭವಿಗಳನ್ನು ಹುಡುಕಿ ನಿವೇಶನ ಹಂಚಿಕೆ ಮಾಡಬಹುದೆಂದರು.

ಹಾಲಿ ಪಟ್ಟಣ ಪಂಚಾಯಿತಿಯಲ್ಲಿ ಚುನಾಯಿತ ಆಡಳಿತ ಮಂಡಳಿ ಇಲ್ಲ. ಕನಿಷ್ಟ 10 ವರ್ಷಗಳಿಂದ ಪಟ್ಟಣದಲ್ಲಿ ವಾಸವಿರುವ, ಮತದಾರರ ಪಟ್ಟಿಯಲ್ಲಿ ಹೆಸರಿರುವ, ಅರ್ಹ ಫಲಾನುಭವಿಗಳ ಹೆಸರಿನಲ್ಲಿ ಜಮೀನು, ನಿವೇಶನ, ಮನೆ ಇಲ್ಲದಿರುವ ನೈಜ ಫಲಾನುಭವಿ ಗಳನ್ನು ಹುಡುಕಿ ನಿವೇಶನ ನೀಡುವುದು ಸೂಕ್ತ. ಈ ನಿಟ್ಟಿನಲ್ಲಿ ಸಮಿತಿ ಹೆಚ್ಚಿನ ಗಮನ ಕೊಡಬೇಕೆಂದು ಮನವಿ ಮಾಡಿದರು.

ಪಟ್ಟಣದಲ್ಲಿ ಸೈಟ್, ಜಮೀನು ಕೊಳ್ಳಲು ದೀನ ದಲಿತರು, ಕಡು ಬಡವರಿಗೆ ಸಾಧ್ಯವಾಗುತ್ತಿಲ್ಲ.ಸರ್ಕಾರದ ಸವಲತ್ತುಗಳು ಅರ್ಹರಿಗೆ ಸಿಗದಿದ್ದಾಗ ಎಂದಿನಂತೆಯೇ ಬಡವರಾಗಿಯೇ ಉಳಿಯುತ್ತಾರೆ. ಕನಿಷ್ಟ 20 ಲಕ್ಷದಿಂದ 30 ಲಕ್ಷ ತನಕ ಸೈಟ್ ಬೆಲೆ ಇದೆ. ಈ ಹಿಂದೆ ಉಚಿತವಾಗಿ ನಿವೇಶನ ಪಡೆದು ಕೊಂಡಿದ್ದ ಹಲವು ಮಂದಿ ಸರ್ಕಾರದ ನಿಯಮವನ್ನು ಗಾಳಿಗೆ ತೂರಿ ಬೇರೆ ಯವರಿಗೆ ಮಾರಾಟ ಮಾಡಿದ್ದಾರೆ. 20 ವರ್ಷಗಳ ಪರಬಾರೆ ನಿಷೇಧವಿದ್ದರೂ ಕೂಡ ಸಬ್ ರಿಜಿಸ್ಟರ್ ಕಚೇರಿಯಲ್ಲಿ ಹೇಗೆ ಕ್ರಮ ಆಯಿತು. ಬಡವರಿಗೆ ಹಣದ ಆಸೆ ತೋರಿಸಿ ಆಶ್ರಯ ನಿವೇಶನದಲ್ಲಿ ಹಣವಂತರು ಬಂಗಲೆಗಳನ್ನು ಕಟ್ಟಿಕೊಂಡಿರುವುದು ಕಂಡುಬಂದಿದೆ. ಹಾಲಿ ಉಳಿದಿರುವ ನಿವೇಶನ ಹಂಚಿಕೆ ನೈಜವಾಗಿದ್ದವರಿಗೆ ಸಿಕ್ಕರೆ ಅವರು ಕಟುಂಬದವರು ನೆಮ್ಮದಿಯಿಂದ ಜೀವನ ಕಳೆಯುತ್ತಾರೆ. ಇಂತಹ ವಿಚಾರಗಳನ್ನು ಮನಗಂಡು ಶಾಸಕರು, ಸಮಿತಿ ಸದಸ್ಯರು ಆಶ್ರಯ ನಿವೇಶನ ಹಂಚಿಕೆಯನ್ನು ಪಾರದರ್ಶಕವಾಗಿ ಮಾಡಬೇಕೆಂದು ಒತ್ತಾಯಿಸುತ್ತೇನೆ ಎಂದರು. ಪಟ್ಟಣ ಪಂಚಾಯಿತಿ ಮಾಜಿ ಅಧ್ಯಕ್ಷ ಲೋಕೇಶ್, ಮುಖಂಡರಾದ ನಿರಂಜನ್, ಜಿಮ್ ಸೋಮು, ಮಂಜಣ್ಣ ಇದ್ದರು.

## 1.24 ಕೋ.ರೂ. ವೆಚ್ಚದ ವಿವಿಧ ಕಾಮಗಾರಿಗೆ ಶಾಸಕ ಸಿ.ಎನ್.ಬಾಲಕೃಷ್ಣ ಚಾಲನೆ

# ಸರ್ಕಾರದ ಯೋಜನೆ ಸಾಕಾರವಾಗಲು ಜನರ ಸಹಕಾರ ಅತ್ಯವಶ್ಯ

• ಪ್ರಜೋದಯ ವರದಿ

**ಚನ್ನರಾಯಪಟ್ಟಣ:** ಸ್ವಚ್ಛ ಭಾರತ್ ಯೋಜನೆಯಡಿ ಕೇಂದ್ರ, ಸರ್ಕಾರವು ಹಲವಾರು ಯೋಜನೆಗಳನ್ನು ರೂಪಿಸುತ್ತಿದ್ದು, ಸಾರ್ವಜನಿಕರ ಸಹಕಾರವಿಲ್ಲದಿದ್ದರೆ ಯಾವ ಯೋಜ ನೆಯೂ ಫಲಪ್ರದವಾಗುವುದಿಲ್ಲ ಎಂದು ಶಾಸಕ ಸಿ.ಎನ್.ಬಾಲಕೃಷ್ಣ ಅವರು ಹೇಳಿದರು.



ತಾಲ್ಲೂಕಿನ ನಲ್ಲೂರು ಬಳಿಯ ಪುರಸಭೆಯ ಘನತ್ಯಾಜ್ಯ ನಿರ್ವಹಣಾ ಘಟಕದಲ್ಲಿ 1.24 ಕೋ. ರೂ. ವೆಚ್ಚದ ವಿವಿಧ ಕಾಮಗಾರಿಗೆ ಮಂಗಳವಾರ ಚಾಲನೆ ನೀಡಿ ಮಾತನಾಡಿದ ಅವರು, 78.14 ಲ.ರೂ. ವೆಚ್ಚದಲ್ಲಿ ಎಂಆರ್‌ಎಫ್ ಶೆಡ್ ನಿರ್ಮಾಣಗೊಂಡಿದ್ದು 22 ಲ.ರೂ. ವೆಚ್ಚದಲ್ಲಿ ಯಂತ್ರೋಪರಕಣ ಅಳವಡಿಸಲಾಗಿದೆ ಎಂದರು.

24 ಲ.ರೂ. ವೆಚ್ಚದಲ್ಲಿ ಬೀದಿ ನಾಯಿಗಳ ಆಶ್ರಯ ತಾಣ ನಿರ್ಮಾಣ ಮಾಡಲಾಗುತ್ತಿದೆ. ಅದಕ್ಕೆ 15ನೇ ಹಣಕಾಸು ಯೋಜನೆಯಡಿ 3.42 ಲ.ರೂ. ಹಾಗು ಪುರಸಭೆ ಅನುದಾನದಲ್ಲಿ 21 ಲ. ರೂ. ನೀಡಲಾಗುತ್ತಿದೆ ಎಂದರು.

ಪ್ರತಿವರ್ಷ, ತ್ಯಾಜ್ಯ ನಿರ್ವಹಣಾ ಘಟಕದ ಉನ್ನತೀಕರಣಕ್ಕೆ ಆದ್ಯತೆ ನೀಡಲಾಗುತ್ತಿದೆ. ಈ ಆವರಣದಲ್ಲಿ ಈಗಾಗಲೇ 200 ವಿವಿಧ ಜಾತಿಯ ಗಿಡ ನೆಡಲಾಗಿದೆ. ಅದರಿಂದ ಪರಿಸರಕ್ಕೂ ಕೊಡುಗೆ ನೀಡಿದಂತಾಗುತ್ತದೆ. ಪಟ್ಟಣದಲ್ಲಿ ನಿತ್ಯ 15 ಟನ್ ಕಸ ಸಂಗ್ರಹವಾಗುತ್ತಿದೆ. ಈಗಾಗಲೇ 75 ಟನ್ ಗೊಬ್ಬರ ಮಾರಾಟ ಮಾಡಲಾಗಿದೆ ಎಂದರು.

ಸದ್ಯ ಚನ್ನರಾಯಪಟ್ಟಣ ಪುರಸಭೆಯಲ್ಲಿ ಸಿಬ್ಬಂದಿ ಕೊರತೆ ಹೆಚ್ಚಿದೆ. ಪರಿಸರ ಇಂಜಿನೀಯರ್, ಆರೋಗ್ಯಾಧಿಕಾರಿ ಇಲ್ಲ. ಬೇರೆ ಇಲಾಖೆಗಳಿಂದ ಸಿಬ್ಬಂದಿಯನ್ನು ನಿಯೋಜನೆ ಮಾಡುವ ಮೂಲಕ ಸ್ವಚ್ಛತಾ ಕಾರ್ಯಕ್ಕೆ ಸಹಕರಿಸಬೇಕೆಂದು ಜಿಲ್ಲಾಡಳಿತಕ್ಕೆ ಮನವಿ ಮಾಡಿದರು.

ಪ್ರಗತಿಪಥ ಯೋಜನೆಯಡಿ 2 ಕೋ. ರೂ. ವೆಚ್ಚದಲ್ಲಿ ರಸ್ತೆ ನಿರ್ಮಾಣಕ್ಕೆ ಮುಂದಾಗಿದ್ದು ಸಿಆರ್‌ಎಫ್ ಯೋಜನೆಯಡಿ 2 ಕೋ.ರೂ. ರಸ್ತೆ ನಿರ್ಮಾಣಕ್ಕೆ ಬಿಡುಗಡೆಯಾಗಿದೆ. ಈ ವ್ಯಾಪ್ತಿಯ ರಸ್ತೆ ನಿರ್ಮಾಣಕ್ಕಾಗಿ 1 ಕೋ. ರೂ. ಬಿಡುಗಡೆಯಾಗಿದ್ದು ಶೀಘ್ರ ಕಾಮಗಾರಿ ಆರಂಭವಾಗಲಿದೆ. ಅದರಿಂದ ವಾಹನಗಳ ಸುಗಮ ಸಂಚಾರಕ್ಕೆ ಅವಕಾಶವಾಗುತ್ತದೆಂದು ಮಾಹಿತಿ ನೀಡಿದರು.

ಪುರಸಭಾ ಮುಖ್ಯಾಧಿಕಾರಿ ಆರ್.ಯತೀಶ್ ಕುಮಾರ್, ಅಭಿಯಂತರ ಗಿರೀಶ್, ಮಾಜಿ ಅಧ್ಯಕ್ಷ ಕೋಟೆ ಮೋಹನ್, ಮಾಜಿ ಉಪಾಧ್ಯಕ್ಷೆ ಕವಿತಾ ರಾಜು, ಸ್ಥಾಯಿ ಸಮಿತಿ ಮಾಜಿ ಅಧ್ಯಕ್ಷ ಗಣೇಶ್, ಆರೋಗ್ಯ ನಿರೀಕ್ಷಕ ಮೂರ್ತಿ ಮತ್ತಿತರರಿದ್ದರು.

ಪ್ರಜೋದಯ ದಿನಪತ್ರಿಕೆ, ಸಂಪಾದಕ, ಪ್ರಕಾಶಕ ಮತ್ತು ಮುದ್ರಕರು, ಜೆ.ಆರ್.ಕೆಂಚೇಗೌಡ, ಗಂಧದ ಕೋಠಿ ಹಿಂಭಾಗ, ಕೆ.ಆರ್.ಪುರಂ.ಹಾಸನ. ದೂರವಾಣಿ : 08172-231188, ಮೊ: 9449203019

CMYK CMYK CMYK CMYK